Volume : 9 | Issue : 178 | October : 02 : 2026 : Friday
ಸಂಪುಟ : 9 | ಸಂಚಿಕೆ : 178 | ಅಕ್ಟೋಬರ್ : 02 : 2026 : ಶುಕ್ರವಾರ
www.VIKRAMAVAHINI.com
ಸತ್ಯದ ಹಾದಿ । ಜನಪರ ದನಿ । ರಾಷ್ಟ್ರೀಯ ದೃಷ್ಟಿ
ವಿಕ್ರಮ ವಾಹಿನಿ
ಪುಟ 4 | ₹2 | ಕನ್ನಡ ದಿನಪತ್ರಿಕೆ
VIKRAMA VAHINI
PRGI NO: KARKAN/2018/78481





ದರ್ಶನ್ ಭೇಟಿಗೆ ಪರಪ್ಪನ ಅಗ್ರಹಾರ ಜೈಲಿಗೆ ಆಗಮಿಸಿದ ನಟಿ ರಚಿತಾ ರಾಮ್; ಎರಡು ಗಂಟೆ ಕಾದರೂ ಭೇಟಿಯಾಗದೆ ನಿರಾಸೆಯಿಂದ ವಾಪಸಾದರು.

'ಮಹಾರಾಷ್ಟ್ರ ಮಾದರಿಯಲ್ಲಿ ರೈತರ ಸಾಲ ಮನ್ನಾ ಮಾಡಿ' ಪುಟ 2

3ರಂದು 'ಸಮರ್ಪಣ್' ಭರತನಾಟ್ಯ ನೃತ್ಯ ಸಂಜೆ ಪುಟ 4

# ವಾಣಿಜ್ಯ ಎಲ್‌ಪಿಜಿ, ವಿಮಾನ ಇಂಧನ ದರ ಏರಿಕೆ

**● ವಿಕ್ರಮ ವಾಹಿನಿ । ನವದೆಹಲಿ**

ಅಂತಾರಾಷ್ಟ್ರೀಯ ಮಾರುಕಟ್ಟೆಯಲ್ಲಿನ ಬೆಲೆ ಏರಿಕೆಗೆ ಅನುಗುಣವಾಗಿ ಸರ್ಕಾರಿ ಸ್ವಾಮ್ಯದ ತೈಲ ಮಾರುಕಟ್ಟೆ ಕಂಪನಿಗಳು (ಒಎಂಸಿ) ವಾಣಿಜ್ಯ ಬಳಕೆಯ ಎಲ್‌ಪಿಜಿ ಸಿಲಿಂಡರ್ ಹಾಗೂ ವಿಮಾನಯಾನ ಇಂಧನ (ಎಟಿಎಫ್) ದರವನ್ನು ಹೆಚ್ಚಿಸಿವೆ. ಪರಿಷ್ಕೃತ ದರಗಳು ಬುಧವಾರದಿಂದ ಜಾರಿಗೆ ಬಂದಿದ್ದು, 19 ಕೆಜಿ ವಾಣಿಜ್ಯ ಎಲ್‌ಪಿಜಿ ಸಿಲಿಂಡರ್ ದರ ರೂ 62.50 ಹಾಗೂ ಎಟಿಎಫ್ ದರ ಲೀಟರ್‌ಗೆ ರೂ 16ರಷ್ಟು ಏರಿಕೆಯಾಗಿದೆ.



**ವಾಣಿಜ್ಯ ಎಲ್‌ಪಿಜಿ ದುಬಾರಿ:** ಕಳೆದ ತಿಂಗಳು ರೂ 9.50ರಷ್ಟು ಏರಿಕೆಯಾಗಿದ್ದ ವಾಣಿಜ್ಯ ಎಲ್‌ಪಿಜಿ ದರವನ್ನು ಇದೀಗ ಮತ್ತೆ ಹೆಚ್ಚಿಸಲಾಗಿದೆ.

ಜಾಗತಿಕ ಇಂಧನ ಪೂರೈಕೆಯಲ್ಲಿನ ವ್ಯತ್ಯಯ ಹಾಗೂ ಅಂತಾರಾಷ್ಟ್ರೀಯ ಬೆಲೆ ಏರಿಕೆಯಿಂದಾಗಿ ಜೂನ್‌ನಲ್ಲಿ ವಾಣಿಜ್ಯ ಎಲ್‌ಪಿಜಿ ದರ ಸಾರ್ವಕಾಲಿಕ ಗರಿಷ್ಠ ಮಟ್ಟ ತಲುಪಿತ್ತು. ಬಳಿಕ ಜುಲೈನಲ್ಲಿ ರೂ 183.50 ಹಾಗೂ ಆಗಸ್ಟ್‌ನಲ್ಲಿ ರೂ 192ರಷ್ಟು ದರ ಇಳಿಕೆ ಮಾಡಲಾಗಿತ್ತು.

ಫೆಬ್ರವರಿಯಿಂದ ಜೂನ್‌ವರೆಗೆ 19 ಕೆಜಿ ಸಿಲಿಂಡರ್ ದರ ರೂ 1,740.50ರಿಂದ ರೂ 3,113.50ಕ್ಕೆ ಏರಿಕೆಯಾಗಿದ್ದು, ಐದು ತಿಂಗಳ ಅವಧಿಯಲ್ಲಿ ಒಟ್ಟು ರೂ 1,373ರಷ್ಟು ಹೆಚ್ಚಳವಾಗಿತ್ತು.

**ಎಟಿಎಫ್ ದರದಲ್ಲೂ ಹೆಚ್ಚಳ:** ತೈಲ ಕಂಪನಿಗಳ ಪರಿಷ್ಕರಣೆಯಂತೆ ದೇಶೀಯ ವಿಮಾನಯಾನ ಸಂಸ್ಥೆಗಳಿಗೆ ಎಟಿಎಫ್ ದರ ಲೀಟರ್‌ಗೆ ರೂ 121ರಿಂದ ರೂ 137ಕ್ಕೆ ಏರಿಕೆಯಾಗಿದೆ. ಕಳೆದ ಎರಡು ತಿಂಗಳಿನಿಂದಲೂ ಎಟಿಎಫ್ ದರದಲ್ಲಿ ಏರಿಕೆ ಮುಂದುವರಿದಿದ್ದು, ಆಗಸ್ಟ್‌ನಲ್ಲಿ ಲೀಟರ್‌ಗೆ ರೂ 5 ಹಾಗೂ ಸೆಪ್ಟೆಂಬರ್‌ನಲ್ಲಿ ರೂ 6.28ರಷ್ಟು ಹೆಚ್ಚಿಸಲಾಗಿತ್ತು.

ವಿಮಾನಯಾನ ಸಂಸ್ಥೆಗಳ ಒಟ್ಟು ಕಾರ್ಯಾಚರಣಾ ವೆಚ್ಚದಲ್ಲಿ ಎಟಿಎಫ್ ಪಾಲು ಶೇ.40ರವರೆಗೂ ಇರುವುದರಿಂದ ಇಂಧನ ದರ ಏರಿಕೆಯು ವಿಮಾನಯಾನ ಕ್ಷೇತ್ರದ ವೆಚ್ಚದ ಮೇಲೆ ಪರಿಣಾಮ ಬೀರುವ ಪ್ರಮುಖ ಅಂಶವಾಗಿದೆ.

**ಪೆಟ್ರೋಲ್, ಡೀಸೆಲ್ ದರವೂ ಯಥಾಸ್ಥಿತಿ:** ಪೆಟ್ರೋಲ್ ಮತ್ತು ಡೀಸೆಲ್ ದರದಲ್ಲೂ ಯಾವುದೇ ಬದಲಾವಣೆ ಮಾಡಲಾಗಿಲ್ಲ. ಮೇ ತಿಂಗಳಲ್ಲಿ ಎರಡೂ ಇಂಧನಗಳ ದರ ಲೀಟರ್‌ಗೆ ಸುಮಾರು ರೂ 7.50ರಷ್ಟು ಏರಿಕೆಯಾಗಿತ್ತು.

ಎಲ್‌ಪಿಜಿ ಮತ್ತು ಎಟಿಎಫ್ ದರಗಳನ್ನು ಅಂತಾರಾಷ್ಟ್ರೀಯ ಮಾನದಂಡದ ಬೆಲೆಗಳು ಹಾಗೂ ರೂಪಾಯಿ-ಡಾಲರ್ ವಿನಿಮಯ ದರದ ಏರಿಳಿತ ಆಧರಿಸಿ ಪ್ರತಿ ತಿಂಗಳ ಮೊದಲ ದಿನ ಪರಿಷ್ಕರಿಸಲಾಗುತ್ತದೆ. ಸ್ಥಳೀಯ ತೆರಿಗೆ, ವಿಶೇಷವಾಗಿ ವ್ಯಾಟ್‌ನಲ್ಲಿನ ವ್ಯತ್ಯಾಸದಿಂದಾಗಿ ವಿವಿಧ ರಾಜ್ಯಗಳಲ್ಲಿ ಅಂತಿಮ ದರಗಳು ಬದಲಾಗಬಹುದು.

## ಗೃಹಬಳಕೆ ಎಲ್‌ಪಿಜಿ ದರ ಬದಲಾವಣೆ ಇಲ್ಲ

ವಾಣಿಜ್ಯ ಎಲ್‌ಪಿಜಿ ದರ ಏರಿಕೆಯ ನಡುವೆಯೂ ಗೃಹಬಳಕೆಯ ಅಡುಗೆ ಅನಿಲದ ದರದಲ್ಲಿ ಯಾವುದೇ ಬದಲಾವಣೆ ಮಾಡಲಾಗಿಲ್ಲ. 14.2 ಕೆಜಿ ಸಿಲಿಂಡರ್ ದರ ರೂ 942ರಲ್ಲೇ ಮುಂದುವರಿದಿದೆ.
ಪಶ್ಚಿಮ ಏಷ್ಯಾ ಬಿಕ್ಕಟ್ಟಿನಿಂದ ಪೂರೈಕೆಯಲ್ಲಿ ವ್ಯತ್ಯಯ ಹಾಗೂ ಅಂತಾರಾಷ್ಟ್ರೀಯ ಇಂಧನ ಬೆಲೆ ಏರಿಕೆಯಾದ ಹಿನ್ನೆಲೆಯಲ್ಲಿ ಮಾರ್ಚ್‌ನಿಂದ ಜೂನ್‌ವರೆಗೆ ಗೃಹಬಳಕೆಯ ಎಲ್‌ಪಿಜಿ ದರವನ್ನು ಪ್ರತಿ ಸಿಲಿಂಡರ್‌ಗೆ ಒಟ್ಟು ರೂ 89ರಷ್ಟು ಹೆಚ್ಚಿಸಲಾಗಿತ್ತು.

## ■ ಸುದ್ದಿ ಚುಟುಕು

### ಬೆಂಗಳೂರಿನಲ್ಲಿ ಭಾರೀ ಮಳೆ ಮುನ್ಸೂಚನೆ

**● ವಿಕ್ರಮ ವಾಹಿನಿ । ಬೆಂಗಳೂರು**

ಕಳೆದ ಎರಡು ವಾರಗಳಿಂದ ಚೇತರಿಸಿಕೊಂಡಿರುವ ಮುಂಗಾರಿನಿಂದಾಗಿ ರಾಜ್ಯದ ಹಲವೆಡೆ ನಿರಂತರ ಮಳೆಯಾಗುತ್ತಿದೆ. ನಿನ್ನೆ ರಾಜಧಾನಿ ಬೆಂಗಳೂರು, ಬೆಂಗಳೂರು ದಕ್ಷಿಣ, ಬೆಂಗಳೂರು ಗ್ರಾಮಾಂತರ, ತುಮಕೂರು, ಚಾಮರಾಜನಗರ, ಚಿತ್ರದುರ್ಗ, ಚಿಕ್ಕಮಗಳೂರು, ದಾವಣಗೆರೆ, ವಿಜಯಪುರ, ವಿಜಯನಗರ, ಬೆಳಗಾವಿ, ಕೋಲಾರ, ಚಿಕ್ಕಬಳ್ಳಾಪುರ ಹಾಗೂ ಮಂಡ್ಯ ಜಿಲ್ಲೆಗಳಲ್ಲಿ ಭಾಗಶಃ ವ್ಯಾಪಕವಾಗಿ ಸಾಧಾರಣ ಮಳೆಯಾಗಿದೆ.

ಉಳಿದಂತೆ ಅಲ್ಲಲ್ಲಿ ಚದುರಿದಂತೆ ಮಳೆಯಾಗಿದೆ. ಕಲ್ಯಾಣ ಕರ್ನಾಟಕ, ಕರಾವಳಿ ಹಾಗೂ ಮಲೆನಾಡು ಭಾಗದಲ್ಲಿ ಒಣಹವೆ ಮುಂದುವರಿದಿದ್ದು, ಮಳೆಯ ಕೊರತೆ ಕಂಡುಬಂದಿದೆ.ಹವಾಮಾನ ಇಲಾಖೆ ಮುನ್ಸೂಚನೆ ಪ್ರಕಾರ, ಕರಾವಳಿ ಭಾಗದ ದಕ್ಷಿಣ ಕನ್ನಡ, ಉಡುಪಿ, ಮಲೆನಾಡು ಭಾಗದ ಶಿವಮೊಗ್ಗ, ಚಿಕ್ಕಮಗಳೂರು, ಕೊಡಗು ಹಾಗೂ ಬೆಂಗಳೂರು ನಗರ ಮತ್ತು ಗ್ರಾಮಾಂತರ ಜಿಲ್ಲೆಗಳಲ್ಲಿ ಭಾರಿ ಮಳೆಯಾಗುವ ಸಾಧ್ಯತೆಯಿದ್ದು, ಯೆಲ್ಲೋ ಅಲರ್ಟ್ ಘೋಷಿಸಲಾಗಿದೆ.

ಉಳಿದಂತೆ ಒಣಹವೆ ಮುಂದುವರಿಯಲಿದ್ದು, ಸಂಜೆ ಹಾಗೂ ರಾತ್ರಿ ವೇಳೆ ಮಳೆಯಾಗುವ ಮುನ್ಸೂಚನೆಗಳಿವೆ. ಕೆಲವೆಡೆ ಗುಡುಗು, ಮಿಂಚಿನಿಂದ ಕೂಡಿದ ಮಳೆಯಾಗುವ ಸಾಧ್ಯತೆಯಿದ್ದು, ರಾಜ್ಯದ ಉಳಿದೆಡೆ ಯಾವುದೇ ಮುನ್ನೆಚ್ಚರಿಕೆಯನ್ನು ಹವಾಮಾನ ಇಲಾಖೆ ನೀಡಿಲ್ಲ. ಬರದಿಂದ ಕಂಗೆಟ್ಟಿದ್ದ ರಾಜ್ಯದ ಒಳನಾಡಿನಲ್ಲಿ ಪದೇಪದೇ ಬೀಳುತ್ತಿರುವ ಮಳೆಯಿಂದ ಬೆಳೆಗಳಿಗೆ ಅನುಕೂಲವಾಗಲಿದ್ದು, ರೈತ ಸಮುದಾಯ ನಿಟ್ಟುಸಿರು ಬಿಡುವಂತಾಗಿದೆ.

### ಅ.7ರಂದು ಆಸ್ಟ್ರೇಲಿಯಾ ವಿರುದ್ಧ ಭಾರತ ಕದನ

**● ವಿಕ್ರಮ ವಾಹಿನಿ । ನವದೆಹಲಿ**

2027ರ ಏಕದಿನ ವಿಶ್ವಕಪ್‌ನ ವೇಳಾಪಟ್ಟಿಯನ್ನು ಅಂತಾರಾಷ್ಟ್ರೀಯ ಕ್ರಿಕೆಟ್ ಮಂಡಳಿ (ಐಸಿಸಿ) ಪ್ರಕಟಿಸಿದ್ದು, ಭಾರತ ಅಕ್ಟೋಬರ್ 7ರಂದು ಕೇಪ್‌ಟೌನ್‌ನಲ್ಲಿ ಆಸ್ಟ್ರೇಲಿಯಾ ವಿರುದ್ಧದ ಪಂದ್ಯದ ಮೂಲಕ ಅಭಿಯಾನ ಆರಂಭಿಸಲಿದೆ. 2023ರ ಫೈನಲ್‌ನ ಉಭಯ ತಂಡಗಳ ಮರುಮುಖಾಮುಖಿ ಇದಾಗಲಿದೆ.

ಭಾರತ 'ಎ' ಗುಂಪಿನಲ್ಲಿ ಸ್ಥಾನ ಪಡೆದಿದ್ದು, ಆಸ್ಟ್ರೇಲಿಯಾ, ಪಾಕಿಸ್ತಾನ, ಅಫ್ಘಾನಿಸ್ತಾನ, ಜಿಂಬಾಬ್ವೆ ಹಾಗೂ ಮತ್ತೊಂದು ಅರ್ಹತಾ ತಂಡ ಗುಂಪಿನಲ್ಲಿವೆ. ಅಕ್ಟೋಬರ್ 10ರಂದು ಜೋಹಾನ್ಸ್‌ಬರ್ಗ್‌ನಲ್ಲಿ ಭಾರತ–ಪಾಕಿಸ್ತಾನ ಪಂದ್ಯ ನಡೆಯಲಿದೆ.

2027ರ ವಿಶ್ವಕಪ್‌ನಲ್ಲಿ 14 ತಂಡಗಳು ಭಾಗವಹಿಸಲಿದ್ದು, ಆರಂಭಿಕ ಹಂತದ ಬಳಿಕ ಏಳು ತಂಡಗಳು 'ಸೂಪರ್ 7' ಹಂತ ಪ್ರವೇಶಿಸಲಿವೆ. ಈ ಹಂತದ ಅಗ್ರ ನಾಲ್ಕು ತಂಡಗಳು ಸೆಮಿಫೈನಲ್‌ಗೆ ಅರ್ಹತೆ ಪಡೆಯಲಿವೆ.

ದಕ್ಷಿಣ ಆಫ್ರಿಕಾ, ಜಿಂಬಾಬ್ವೆ ಹಾಗೂ ನಮೀಬಿಯಾದಲ್ಲಿ ನಡೆಯಲಿರುವ ಟೂರ್ನಿ ಅಕ್ಟೋಬರ್ 2ರಂದು ಆರಂಭವಾಗಲಿದ್ದು, ನವೆಂಬರ್ 21ರಂದು ಜೋಹಾನ್ಸ್‌ಬರ್ಗ್‌ನಲ್ಲಿ ಫೈನಲ್ ನಡೆಯಲಿದೆ.

### ಪರಪ್ಪನ ಅಗ್ರಹಾರದಲ್ಲಿ ಮತ್ತೆ ಮೊಬೈಲ್, ಸಿಮ್ ಕಾರ್ಡ್ ಪತ್ತೆ

**● ವಿಕ್ರಮ ವಾಹಿನಿ । ಬೆಂಗಳೂರು**

ಪರಪ್ಪನ ಅಗ್ರಹಾರ ಕೇಂದ್ರ ಕಾರಾಗೃಹದಲ್ಲಿ ಮತ್ತೆ ಹಣ, ಮೊಬೈಲ್, ಸಿಮ್‌ಕಾರ್ಡ್‌ಗಳು ಪತ್ತೆಯಾಗಿವೆ. ಈ ಬಗ್ಗೆ ಜೈಲು ಅಧಿಕಾರಿ ಕೊಟ್ರೇಶ್ ಅಚಿವರು ಪರಪ್ಪನ ಅಗ್ರಹಾರ ಪೊಲೀಸ್ ಠಾಣೆಗೆ ದೂರು ನೀಡಿದ್ದಾರೆ. ಜೈಲಿನೊಳಗೆ ನಿಷೇಧಿತ ವಸ್ತುಗಳ ಬಳಕೆ ಆರೋಪದ ಹಿನ್ನಲೆಯಲ್ಲಿ ನಿನ್ನೆ ಕೊಟ್ರೇಶ್ ಅವರು ಕಾರಾಗೃಹದ ಬ್ಯಾರಕ್‌ಗಳನ್ನು ಪರಿಶೀಲನೆ ನಡೆಸಿದಾಗ ಸಿ ಬ್ಯಾರಕ್‌ನಲ್ಲಿ ಒಂದು ಮೊಬೈಲ್, ಮೂರು ಸಿಮ್‌ಕಾರ್ಡ್‌ಗಳು ಪತ್ತೆಯಾಗಿವೆ.

ಮೊನ್ನೆ ಅಡಿಗೆ ಮನೆ ಸಮೀಪವಿರುವ ಶೌಚಾಲಯವೊಂದರ ಬಳಿ 8,400 ರೂ. ಹಣ ಪತ್ತೆಯಾಗಿದೆ.ಈ ಹಿನ್ನಲೆಯಲ್ಲಿ ಕೊಟ್ರೇಶ್ ಅವರು ನೀಡಿದ ದೂರಿನನ್ವಯ ಎರಡು ಎಫ್‌ಐಆರ್‌ಗಳು ದಾಖಲಾಗಿದ್ದು, ಪೊಲೀಸರು ತನಿಖೆ ಕೈಗೊಂಡಿದ್ದಾರೆ. 3ನೇ ಪುಟಕ್ಕೆ...

# ಫಾರಂ-7 ದುರ್ಬಳಕೆ: ಕ್ರಮಕ್ಕೆ ಆಯೋಗ ಸೂಚನೆ

**● ವಿಕ್ರಮ ವಾಹಿನಿ । ಬೆಂಗಳೂರು**

ಮತದಾರರ ಪಟ್ಟಿ ವಿಶೇಷ ತೀವ್ರ ಪರಿಷ್ಕರಣೆ (ಎಸ್‌ಐಆರ್) ವೇಳೆ ಫಾರಂ–7 ದುರ್ಬಳಕೆ ಮಾಡಲಾಗಿದೆ ಎಂಬ ಆರೋಪಕ್ಕೆ ಸಂಬಂಧಿಸಿದಂತೆ ಕಾನೂನು ಪ್ರಕಾರ ಕ್ರಮ ಕೈಗೊಳ್ಳುವಂತೆ ಚುನಾವಣಾಧಿಕಾರಿಗಳಿಗೆ ರಾಜ್ಯ ಮುಖ್ಯ ಚುನಾವಣಾಧಿಕಾರಿ ಅನ್ಬುಕುಮಾರ್ ಸೂಚಿಸಿದ್ದಾರೆ ಎನ್ನಲಾಗಿದೆ.

ಫಾರಂ–7 ದುರ್ಬಳಕೆ ಖಂಡಿಸಿ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ನೇತೃತ್ವದಲ್ಲಿ ಕಾಂಗ್ರೆಸ್ ನಾಯಕರು ನಡೆಸುತ್ತಿದ್ದ ಪ್ರತಿಭಟನೆ ಹಿನ್ನೆಲೆಯಲ್ಲಿ ಅನ್ಬುಕುಮಾರ್ ಅವರು ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ಸೇರಿದಂತೆ ಆಯುಕ್ತರೊಂದಿಗೆ ವಿಡಿಯೋ ಕಾನ್ಫರೆನ್ಸ್ ಮೂಲಕ ಸಭೆ ನಡೆಸಿದರು. ಬಳಿಕ ಕಾನೂನುಬದ್ಧ ಕ್ರಮಕ್ಕೆ ಸೂಚನೆ ನೀಡಲಾಗಿದೆ ಎಂದು ತಿಳಿದುಬಂದಿದೆ. ಚುನಾವಣಾ ಆಯೋಗ ಕ್ರಮಕ್ಕೆ ಸೂಚಿಸಿದ ಬೆನ್ನಲ್ಲೇ ಮುಖ್ಯಮಂತ್ರಿ ನೇತೃತ್ವದಲ್ಲಿ ನಡೆಯುತ್ತಿದ್ದ ಕಾಂಗ್ರೆಸ್ ಧರಣಿಯನ್ನು ಅಂತ್ಯಗೊಳಿಸಲಾಯಿತು. ಈ ಕುರಿತು ಮಾತನಾಡಿದ ಡಿ.ಕೆ.ಶಿವಕುಮಾರ್, ಮತದಾನದ ಹಕ್ಕು ಹೊಂದಿರುವವರ ಹೆಸರುಗಳನ್ನು ಪಟ್ಟಿಯಿಂದ ತೆಗೆದುಹಾಕಲು ಬಿಜೆಪಿ ಮತ್ತು ಜೆಡಿಎಸ್ ಕುತಂತ್ರ ನಡೆಸಿವೆ ಎಂದು ಆರೋಪಿಸಿದರು.

ಎಸ್‌ಐಆರ್ ವೇಳೆ 50 ಲಕ್ಷಕ್ಕೂ ಹೆಚ್ಚು ಮಂದಿಗೆ ನೋಟಿಸ್ ನೀಡಲಾಗಿದ್ದು, ಸ್ಥಳಾಂತರಗೊಂಡವರು ಹಾಗೂ ಮೃತಪಟ್ಟವರ ಹೆಸರಿನ ವಿಚಾರದಲ್ಲಿ ಪರಿಶೀಲನೆ ಅಗತ್ಯವಿದೆ. ಮತದಾರರ ಹಕ್ಕು ಕಾಪಾಡುವುದು ತಮ್ಮ ಕರ್ತವ್ಯವಾಗಿದ್ದು, ಫಾರಂ–7ಗೆ ಸಂಬಂಧಿಸಿದ ತನಿಖೆ ಮುಂದುವರಿಯಲಿದೆ ಎಂದು ಅವರು ಹೇಳಿದರು.

## ಎಫ್‌ಐಆರ್ ದಾಖಲಾಗುವವರೆಗೆ ಕದಲುವುದಿಲ್ಲ: ಡಿಕೆಶಿ



**● ವಿಕ್ರಮ ವಾಹಿನಿ । ಬೆಂಗಳೂರು**

ವಿಶೇಷ ತೀವ್ರ ಪರಿಷ್ಕರಣೆ (ಎಸ್‌ಐಆರ್) ಪ್ರಕ್ರಿಯೆಯಲ್ಲಿ ಮತದಾರರ ಹೆಸರುಗಳನ್ನು ಅಕ್ರಮವಾಗಿ ಅಳಿಸಲು ಸಂಚು ನಡೆದಿದೆ ಎಂದು ಆರೋಪಿಸಿ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ನೇತೃತ್ವದಲ್ಲಿ ಕಾಂಗ್ರೆಸ್ ನಾಯಕರು ರಾಜ್ಯ ಚುನಾವಣಾ ಆಯೋಗದ ಕಚೇರಿ ಎದುರು ಧರಣಿ ನಡೆಸಿದರು.

ಮತದಾರರ ಪಟ್ಟಿಯಿಂದ ಸುಮಾರು 50 ಲಕ್ಷ ಹೆಸರುಗಳನ್ನು ತೆಗೆದುಹಾಕಲು ಬಿಜೆಪಿ ಹಾಗೂ ಜೆಡಿಎಸ್ ನಾಯಕರು, ಕಾರ್ಯಕರ್ತರು ಅರ್ಜಿಗಳನ್ನು ಸಲ್ಲಿಸಿದ್ದಾರೆ ಎಂದು ಡಿ.ಕೆ.ಶಿವಕುಮಾರ್ ಆರೋಪಿಸಿದರು. ಈ ಕುರಿತು ಕೃಷ್ಣಾ ನಿವಾಸದಲ್ಲಿ ಸುದ್ದಿಗೋಷ್ಠಿ ನಡೆಸಿದ ಬಳಿಕ ಸಚಿವರೊಂದಿಗೆ ರಾಜ್ಯ ಚುನಾವಣಾ ಆಯೋಗದ ಕಚೇರಿಗೆ ತೆರಳಿ ಮುಖ್ಯ ಚುನಾವಣಾಧಿಕಾರಿ ಅನ್ಬುಕುಮಾರ್ ಅವರಿಗೆ ದೂರು ಸಲ್ಲಿಸಿದರು. ಎಸ್‌ಐಆರ್ ಪ್ರಕ್ರಿಯೆಯಲ್ಲಿ ಅಕ್ರಮ ನಡೆದಿದ್ದರೆ ತನಿಖೆ ನಡೆಸಿ, ತಪ್ಪಿತಸ್ಥರ ವಿರುದ್ಧ ಎಫ್‌ಐಆರ್ ದಾಖಲಿಸಿ ಬಂಧಿಸಬೇಕು ಎಂದು ಮುಖ್ಯಮಂತ್ರಿ ಒತ್ತಾಯಿಸಿದರು. ಈ ಕುರಿತು ಪರಿಶೀಲನೆ ನಡೆಸಲು ಎರಡು ದಿನ ಕಾಲಾವಕಾಶ ನೀಡುವುದಾಗಿ ಚುನಾವಣಾಧಿಕಾರಿ ತಿಳಿಸಿದರು.

ಇದಕ್ಕೆ ಒಪ್ಪದ ಡಿ.ಕೆ.ಶಿವಕುಮಾರ್ ಹಾಗೂ ಸಚಿವರು, ಎಫ್‌ಐಆರ್ ದಾಖಲಿಸುವವರೆಗೆ ಕಚೇರಿ ಆವರಣದಿಂದ ತೆರಳುವುದಿಲ್ಲ ಎಂದು ಪಟ್ಟು ಹಿಡಿದರು. ಬಳಿಕ ಸಿಇಒ ಕಚೇರಿ ಎದುರು ಧರಣಿ ಮುಂದುವರಿಸಿದರು.

## ಪ್ರವಾಸಕ್ಕೆ ತೆರಳಿದ್ದ 8 ವಿದ್ಯಾರ್ಥಿಗಳು ಸಮುದ್ರಪಾಲು

**● ವಿಕ್ರಮ ವಾಹಿನಿ । ರಾಯಗಡ (ಮಹಾರಾಷ್ಟ್ರ)**

*ಪ್ರವಾಸಕ್ಕೆ ತೆರಳಿದ್ದ ಪುಣೆಯ ಅಲಂದಿಯ ಎಂಟು ವಿದ್ಯಾರ್ಥಿಗಳು ಅರಬ್ಬಿ ಸಮುದ್ರದಲ್ಲಿ ಮುಳುಗಿ ಮೃತಪಟ್ಟಿರುವ ದಾರುಣ ಘಟನೆ ರಾಯಗಡ ಜಿಲ್ಲೆಯ ದಿವ್ಯಾಗರ್‌ನಲ್ಲಿ ಗುರುವಾರ ನಡೆದಿದೆ.*

*ಅಲಂದಿಯ 'ವಿನ್ನರ್ಸ್ ಅಕಾಡೆಮಿ'ಯಲ್ಲಿ ವ್ಯಾಸಂಗ ಮಾಡುತ್ತಿದ್ದ 17ರಿಂದ 18 ವರ್ಷ ವಯಸ್ಸಿನ ವಿದ್ಯಾರ್ಥಿಗಳು ಪ್ರವಾಸಕ್ಕಾಗಿ ದಿವ್ಯಾಗರ್‌ಗೆ ತೆರಳಿದ್ದರು. ಸಮುದ್ರದ ಆಳದ ಅರಿವಿಲ್ಲದೆ ನೀರಿಗೆ ಇಳಿದಾಗ ಈಜಲು ಸಾಧ್ಯವಾಗದೆ ಮುಳುಗಿದ್ದಾರೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.*

*ಘಟನೆ ತಿಳಿಯುತ್ತಿದ್ದಂತೆ ಸ್ಥಳೀಯರು ಹಾಗೂ 'ಮಹಾಕಾಳಿ ಸ್ಪೋರ್ಟ್ಸ್' ಸಿಬ್ಬಂದಿ ರಕ್ಷಣಾ ಕಾರ್ಯಾಚರಣೆ ನಡೆಸಿದ್ದು, ಎಂಟು ವಿದ್ಯಾರ್ಥಿಗಳ ಮೃತದೇಹಗಳನ್ನು ಸಮುದ್ರದಿಂದ ಹೊರತೆಗೆಯಲಾಗಿದೆ. ಮೃತದೇಹಗಳನ್ನು ಸ್ವಗ್ರಾಮಕ್ಕೆ ಕೊಂಡೊಯ್ಯಲು ಅಗತ್ಯ ಕ್ರಮ ಕೈಗೊಳ್ಳಲಾಗಿದೆ.*

*ಘಟನೆಗೆ ಮುಖ್ಯಮಂತ್ರಿ ದೇವೇಂದ್ರ ಫಡ್ನವೀಸ್ ಸಂತಾಪ ಸೂಚಿಸಿದ್ದು, ಮೃತರ ಕುಟುಂಬಗಳೊಂದಿಗೆ ಸರ್ಕಾರ ನಿಂತಿದೆ ಎಂದು ತಿಳಿಸಿದ್ದಾರೆ. ಉಪಮುಖ್ಯಮಂತ್ರಿ ಸುನೇತ್ರಾ ಪವಾರ್ ಅವರು ಜಿಲ್ಲಾಧಿಕಾರಿಗಳು ಹಾಗೂ ಪೊಲೀಸ್ ಅಧಿಕಾರಿಗಳಿಂದ ಮಾಹಿತಿ ಪಡೆದು, ಶೋಧ ಮತ್ತು ರಕ್ಷಣಾ ಕಾರ್ಯಾಚರಣೆಯನ್ನು ತ್ವರಿತಗೊಳಿಸುವಂತೆ ಸೂಚಿಸಿದ್ದಾರೆ.*

## ಕೆಪಿಎಸ್‌ಸಿ ಹಗರಣ: ಎಸ್‌ಐಟಿ ರಚನೆಗೆ ಸುಪ್ರೀಂ ತಡೆ

**● ವಿಕ್ರಮ ವಾಹಿನಿ । ನವದೆಹಲಿ**

ಕರ್ನಾಟಕ ಲೋಕಸೇವಾ ಆಯೋಗ (ಕೆಪಿಎಸ್‌ಸಿ) ನಡೆಸಿದ ಪಶುವೈದ್ಯಾಧಿಕಾರಿ ಹುದ್ದೆಗಳ ನೇಮಕಾತಿ ಹಗರಣದ ತನಿಖೆಗೆ ಐಪಿಎಸ್ ಅಧಿಕಾರಿ ಅಲೋಕ್ ಕುಮಾರ್ ನೇತೃತ್ವದಲ್ಲಿ ವಿಶೇಷ ತನಿಖಾ ತಂಡ (ಎಸ್‌ಐಟಿ) ರಚಿಸುವಂತೆ ಕರ್ನಾಟಕ ಹೈಕೋರ್ಟ್ ನೀಡಿದ್ದ ಆದೇಶಕ್ಕೆ ಸುಪ್ರೀಂ ಕೋರ್ಟ್ ಮಧ್ಯಂತರ ತಡೆ ನೀಡಿದೆ.

ಹೈಕೋರ್ಟ್ ಆದೇಶ ಪ್ರಶ್ನಿಸಿ ರಾಜ್ಯ ಸರ್ಕಾರ ಸಲ್ಲಿಸಿದ್ದ ಮೇಲ್ಮನವಿ ಅರ್ಜಿಯ ವಿಚಾರಣೆ ನಡೆಸಿದ ಸುಪ್ರೀಂ ಕೋರ್ಟ್ ವಿಭಾಗೀಯ ಪೀಠ, ಮುಂದಿನ ವಿಚಾರಣೆಯನ್ನು ಅಕ್ಟೋಬರ್ 12ಕ್ಕೆ ಮುಂದೂಡಿದೆ. ಹೈಕೋರ್ಟ್ ಸೂಚಿಸಿರುವ ಅಲೋಕ್ ಕುಮಾರ್ ಅವರ ನೇಮಕಾತಿಗೆ ಸರ್ಕಾರ ಆಕ್ಷೇಪ ವ್ಯಕ್ತಪಡಿಸಿದ್ದು, ಅವರ ವಿರುದ್ಧದ ಹಿಂದಿನ ಆರೋಪಗಳ ಕುರಿತು ದಾಖಲೆಗಳನ್ನು ನ್ಯಾಯಪೀಠದ ಗಮನಕ್ಕೆ ತರಲಾಯಿತು. ಇದಕ್ಕೆ ಅಭ್ಯರ್ಥಿಗಳ ಪರ ವಕೀಲರು ವಿರೋಧ ವ್ಯಕ್ತಪಡಿಸಿ, ಹೈಕೋರ್ಟ್ ಸಮರ್ಥ ಅಧಿಕಾರಿಗಳನ್ನು ಪರಿಶೀಲಿಸಿ ಎಸ್‌ಐಟಿ ರಚನೆಗೆ ಆದೇಶಿಸಿದೆ ಎಂದು ವಾದಿಸಿದರು.

ವಾದ–ಪ್ರತಿವಾದ ಆಲಿಸಿದ ನ್ಯಾಯಪೀಠ, ಅಲೋಕ್ ಕುಮಾರ್ ವಿರುದ್ಧದ ಆರೋಪಗಳಿಗೆ ಸಂಬಂಧಿಸಿದ ಮಾಹಿತಿಯನ್ನು ಮುಂದಿನ ವಿಚಾರಣೆಯಲ್ಲಿ ಮುಚ್ಚಿದ ಲಕೋಟೆಯಲ್ಲಿ ಸಲ್ಲಿಸುವಂತೆ ಸೂಚಿಸಿತು. ಅಲ್ಲದೆ ಎಸ್‌ಐಟಿ ರಚನೆಗೆ ಸರ್ಕಾರಕ್ಕೆ ಸಮ್ಮತವಿರುವ ಸಮರ್ಥ ಅಧಿಕಾರಿಗಳ ಪಟ್ಟಿಯನ್ನು ಸಲ್ಲಿಸಲು ರಾಜ್ಯ ಸರ್ಕಾರಕ್ಕೆ ಅವಕಾಶ ನೀಡಿತು.

## ಪತಿ ಕೊಲೆ ಆರೋಪಿಗಳಿಗೆ ಮದುವೆಗೆ ಪೆರೋಲ್

**● ವಿಕ್ರಮ ವಾಹಿನಿ । ಬೆಂಗಳೂರು**

ಪತಿ ಕೊಲೆ ಪ್ರಕರಣದಲ್ಲಿ ಜೀವಾವಧಿ ಶಿಕ್ಷೆ ಅನುಭವಿಸುತ್ತಿರುವ ಪ್ರೇಮಿಗಳಿಬ್ಬರಿಗೆ ಮದುವೆಯಾಗಲು ಒಂದು ದಿನದ ಪೆರೋಲ್ ನೀಡಲು ಹೈಕೋರ್ಟ್ ಆದೇಶಿಸಿದೆ.

ಬೆಳಗಾವಿ ಕಾರಾಗೃಹದಲ್ಲಿರುವ ಶ್ರೀಧರ ತಳವಾರ ಮತ್ತು ಸಿದ್ದವ್ವ ಸಲ್ಲಿಸಿದ್ದ ಅರ್ಜಿಯ ವಿಚಾರಣೆ ನಡೆಸಿದ ಹೈಕೋರ್ಟ್ ಧಾರವಾಡ ಪೀಠ, ನೈತಿಕತೆಯ ಆಧಾರದ ಮೇಲೆ ಕಾನೂನುಬದ್ಧ ಹಕ್ಕನ್ನು ನಿರಾಕರಿಸಲಾಗುವುದಿಲ್ಲ ಎಂದು ಅಭಿಪ್ರಾಯಪಟ್ಟಿದೆ.

ಇಬ್ಬರೂ ಈಗಾಗಲೇ ಮೂರು ವರ್ಷ ಐದು ತಿಂಗಳಿಗೂ ಹೆಚ್ಚು ಕಾಲ ಜೈಲಿನಲ್ಲಿದ್ದು, ಜೈಲಿನಲ್ಲಿ ಅವರ ನಡವಳಿಕೆ ಕುರಿತು ಯಾವುದೇ ಪ್ರತಿಕೂಲ ವರದಿಯಿಲ್ಲ. 2ನೇ ಪುಟಕ್ಕೆ...

## ಪೈಲಟ್ ಗಾಯಗೊಂಡರೂ ವಿಮಾನ ಉಳಿಸಿದ ಪ್ರಯಾಣಿಕರು!

**● ವಿಕ್ರಮ ವಾಹಿನಿ । ನವದೆಹಲಿ**

ಫ್ಲೈದುಬೈ ವಿಮಾನದಲ್ಲಿ ಪೈಲಟ್‌ಗಳ ನಡುವಿನ ಸಂಘರ್ಷದ ಬಳಿಕ ವಿಮಾನ ಪತನದ ಅಂಚಿಗೆ ತಲುಪಿದ್ದರೂ, ಪೈಲಟ್ ಹಾಗೂ ಪ್ರಯಾಣಿಕರ ಸಮಯಪ್ರಜ್ಞೆಯಿಂದ ಭಾರಿ ದುರಂತವೊಂದು ತಪ್ಪಿದೆ.

ದುಬೈಯಿಂದ ಟೆಲ್ ಅವೀವ್‌ಗೆ ತೆರಳುತ್ತಿದ್ದ ಎಫ್‌ಜೆ1073 ವಿಮಾನದಲ್ಲಿ ಸಹ ಪೈಲಟ್‌ನಿಂದ ಕ್ಯಾಪ್ಟನ್ ಸ್ಮಿತ್ ಮಚ್ಚರ್ ಮೇಲೆ ದಾಳಿ ನಡೆದಿತ್ತು ಎನ್ನಲಾಗಿದೆ. ಗಂಭೀರವಾಗಿ ಗಾಯಗೊಂಡು ರಕ್ತಸಿಕ್ತ ಸ್ಥಿತಿಯಲ್ಲಿದ್ದರೂ ಮಚ್ಚರ್ ಕಾಕ್‌ಪಿಟ್ ಬಾಗಿಲು ತೆರೆಯುವಲ್ಲಿ ಯಶಸ್ವಿಯಾಗಿದ್ದರು. ಇದರಿಂದ ಪ್ರಯಾಣಿಕರು ಒಳನುಗ್ಗಿ ದಾಳಿಕೋರನನ್ನು ನಿಯಂತ್ರಣಕ್ಕೆ ತೆಗೆದುಕೊಳ್ಳಲು ಸಾಧ್ಯವಾಯಿತು.

ಘರ್ಷಣೆಯ ವೇಳೆ ವಿಮಾನ ಕೆಲವೇ ಸೆಕೆಂಡ್‌ಗಳಲ್ಲಿ ಸುಮಾರು 14 ಸಾವಿರ ಅಡಿ ಕೆಳಕ್ಕೆ ಕುಸಿದಿತ್ತು ಎಂದು ವರದಿಯಾಗಿದೆ.

ಈ ಸಂದರ್ಭದಲ್ಲಿ ಕಾಕ್‌ಪಿಟ್‌ಗೆ ಪ್ರವೇಶಿಸಿದ ಯಾನಿವ್ ಹಯೂನ್ ಎಂಬ ಪ್ಲಂಬರ್, ಇತರ ಪ್ರಯಾಣಿಕರ ನೆರವಿನಿಂದ ವಿಮಾನದ ನಿಯಂತ್ರಣಕ್ಕೆ ಮುಂದಾದರು.

ವಿಮಾನದಲ್ಲಿದ್ದ ದಂತ ವೈದ್ಯ ಡಾ. ಶೋಟಾ ಮುಸಾವ್ ಗಾಯಗೊಂಡಿದ್ದ ಸ್ಮಿತ್ ಮಚ್ಚರ್ ಅವರಿಗೆ ನೆರವು ನೀಡಿದರು. ದಾಳಿಕೋರನನ್ನು ಹೆಡ್‌ಫೋನ್ ತಂತಿ ಹಾಗೂ ಜಿಪ್ ಟೈಗಳ ನೆರವಿನಿಂದ ಕಟ್ಟಿಹಾಕಲಾಯಿತು ಎಂದು ವರದಿಯಾಗಿದೆ.

ನಂತರ ವಿಮಾನದಲ್ಲಿ ಪ್ರಯಾಣಿಸುತ್ತಿದ್ದ ರಿಸರ್ವ್ ಪೈಲಟ್‌ಗಳು ಕಾಕ್‌ಪಿಟ್‌ಗೆ ಪ್ರವೇಶಿಸಿ ನಿಯಂತ್ರಣ ವಹಿಸಿಕೊಂಡು, ಸೌದಿ ಅರೇಬಿಯಾದ ತಬುಕ್‌ನಲ್ಲಿ ವಿಮಾನವನ್ನು ಸುರಕ್ಷಿತವಾಗಿ ಇಳಿಸಲು ನೆರವಾದರು. ತೀವ್ರವಾಗಿ ಕೆಳಕ್ಕೆ ಕುಸಿದಿದ್ದ ವಿಮಾನ ಪತನವಾಗದೆ ಉಳಿದಿರುವುದು ಅಚ್ಚರಿ ಮೂಡಿಸಿದೆ ಎಂದು ವಿಮಾನಯಾನ ತಜ್ಞರು ಹೇಳಿದ್ದಾರೆ.

# ಸಿಗ್ನಲ್ ಜಂಪ್‌ಗೆ ರೂ 3 ಸಾವಿರ ದಂಡ!

**ಸಿಗ್ನಲ್ ಜಂಪ್, ಒನ್‌ವೇ ವಿರುದ್ಧ ಚಾಲನೆಗೆ ಮೊದಲ ಬಾರಿ ರೂ 3 ಸಾವಿರ, ಮರುಕಳಿಸಿದರೆ ರೂ 5 ಸಾವಿರ ದಂಡ ವಿಧಿಸುವ ಪ್ರಸ್ತಾವನೆ; ಪಾಯಿಂಟ್ ಆಧಾರಿತ ಪರವಾನಗಿ ಹಾಗೂ ಇ-ಚಲನ್-ಸಾರಥಿ ಸಂಪರ್ಕಕ್ಕೂ ಚಿಂತನೆ.**

**● ವಿಕ್ರಮ ವಾಹಿನಿ । ಬೆಂಗಳೂರು**

ನಗರದಲ್ಲಿ ಹೆಚ್ಚುತ್ತಿರುವ ಸಂಚಾರ ದಟ್ಟಣೆ ನಿಯಂತ್ರಿಸುವ ಉದ್ದೇಶದಿಂದ ಸಂಚಾರ ನಿಯಮ ಉಲ್ಲಂಘನೆಗಳಿಗೆ ವಿಧಿಸುವ ದಂಡವನ್ನು ಗಣನೀಯವಾಗಿ ಹೆಚ್ಚಿಸುವ ಕುರಿತು ರಾಜ್ಯ ಸರ್ಕಾರ ಚಿಂತನೆ ನಡೆಸಿದೆ. ಸಾರಿಗೆ ಮತ್ತು ಗೃಹ ಇಲಾಖೆಗಳ ಜಂಟಿ ಸಭೆಯಲ್ಲಿ ಈ ಕುರಿತು ಚರ್ಚೆ ನಡೆದಿದೆ.

ಸಾರಿಗೆ ಸಚಿವ ಭೈರತಿ ಸುರೇಶ್ ಹಾಗೂ ಗೃಹ ಸಚಿವ ಪ್ರಿಯಾಂಕ್ ಖರ್ಗೆ ನೇತೃತ್ವದಲ್ಲಿ ನಡೆದ ಸಭೆಯಲ್ಲಿ ಬೆಂಗಳೂರಿನ ಸಂಚಾರ ಸಮಸ್ಯೆ ಹಾಗೂ ನಿಯಮ ಉಲ್ಲಂಘನೆಗಳ ಬಗ್ಗೆ ಚರ್ಚಿಸಲಾಯಿತು. ಸಂಚಾರ ನಿಯಮ ಪಾಲನೆಗೆ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳುವ ಭಾಗವಾಗಿ ದಂಡ ಹೆಚ್ಚಿಸುವ ಪ್ರಸ್ತಾವನೆ ಪರಿಶೀಲಿಸಲಾಗಿದೆ.

**ಯಾವ ಉಲ್ಲಂಘನೆಗೆ ದಂಡ?:** ಫುಟ್‌ಪಾತ್‌ನಲ್ಲಿ ವಾಹನ ನಿಲುಗಡೆ, ಒನ್‌ವೇ ರಸ್ತೆಯಲ್ಲಿ ವಿರುದ್ಧ ದಿಕ್ಕಿನಲ್ಲಿ ಚಾಲನೆ, ಫುಟ್‌ಪಾತ್ ಮೇಲೆ ವಾಹನ ಚಲಾಯಿಸುವುದು, ಅನಧಿಕೃತ ಹಾಗೂ 'ನೋ ಪಾರ್ಕಿಂಗ್' ಪ್ರದೇಶದಲ್ಲಿ ವಾಹನ ನಿಲ್ಲಿಸುವುದು, ಸಿಗ್ನಲ್ ಜಂಪ್ ಸೇರಿದಂತೆ ವಿವಿಧ ಉಲ್ಲಂಘನೆಗಳಿಗೆ ಹೆಚ್ಚಿನ ದಂಡ ವಿಧಿಸುವ ಪ್ರಸ್ತಾವನೆ ಚರ್ಚೆಯಲ್ಲಿದೆ.

ಪ್ರಸ್ತಾವಿತ ವ್ಯವಸ್ಥೆಯಡಿ ಸಿಗ್ನಲ್ ಜಂಪ್ ಹಾಗೂ ಒನ್‌ವೇ ರಸ್ತೆಯಲ್ಲಿ ವಿರುದ್ಧ ದಿಕ್ಕಿನಲ್ಲಿ ವಾಹನ ಚಲಾಯಿಸುವಂತಹ ಉಲ್ಲಂಘನೆಗಳಿಗೆ ಮೊದಲ ಬಾರಿಗೆ ರೂ 3,000 ಹಾಗೂ ಮರುಕಳಿಸಿದರೆ ರೂ 5,000 ದಂಡ ವಿಧಿಸುವ ಕುರಿತು ಚರ್ಚಿಸಲಾಗಿದೆ.




**ಅಂಕ ಆಧಾರಿತ ಪರವಾನಗಿ:** ಸಂಚಾರ ನಿಯಮ ಉಲ್ಲಂಘನೆಗಳಿಗೆ ಅಂಕ ನಿಗದಿಪಡಿಸುವ 'ಪಾಯಿಂಟ್ ಆಧಾರಿತ' ಚಾಲನಾ ಪರವಾನಗಿ ವ್ಯವಸ್ಥೆ ಜಾರಿಗೆ ತರುವ ಬಗ್ಗೆಯೂ ಸಭೆಯಲ್ಲಿ ಚರ್ಚಿಸಲಾಗಿದೆ. ವಿವಿಧ ಉಲ್ಲಂಘನೆಗಳಿಗೆ ನಿಗದಿತ ಅಂಕ ನೀಡಲಾಗುವುದು. ಚಾಲಕ ನಿಗದಿತ ಮಿತಿಯನ್ನು ತಲುಪಿದರೆ ಚಾಲನಾ ಪರವಾನಗಿ ಅಮಾನತು ಅಥವಾ ರದ್ದುಪಡಿಸುವ ಕ್ರಮ ಕೈಗೊಳ್ಳುವ ಉದ್ದೇಶ ಹೊಂದಲಾಗಿದೆ. ಈ ವ್ಯವಸ್ಥೆ ಜಾರಿಗೆ ಅಗತ್ಯವಿರುವ ಕಾನೂನು ಕ್ರಮಗಳ ಬಗ್ಗೆಯೂ ಗೃಹ ಮತ್ತು ಸಾರಿಗೆ ಇಲಾಖೆಗಳು ಪರಿಶೀಲನೆ ನಡೆಸಿವೆ.

**ಇ-ಚಲನ್ ಜತೆ ಸಾರಥಿ ಸಂಪರ್ಕ:** ಚಾಲನಾ ಪರವಾನಗಿ ಅಮಾನತು ಹಾಗೂ ಸಂಚಾರ ಉಲ್ಲಂಘನೆಗಳ ಮಾಹಿತಿಯನ್ನು ಸಮಗ್ರವಾಗಿ ನಿರ್ವಹಿಸಲು ಸಾರಿಗೆ ಇಲಾಖೆಯ 'ಸಾರಥಿ' ವ್ಯವಸ್ಥೆಯನ್ನು ಬೆಂಗಳೂರು ಸಂಚಾರ ಪೊಲೀಸರ 'ಇ-ಚಲನ್' ವ್ಯವಸ್ಥೆಯೊಂದಿಗೆ ನೇರವಾಗಿ ಸಂಯೋಜಿಸುವ ಪ್ರಸ್ತಾವನೆ ಮುಂದಿಟ್ಟಿದೆ.

ಇದರಿಂದ ಕಾಗದ ಆಧಾರಿತ ಪ್ರಕ್ರಿಯೆ ಕಡಿಮೆಯಾಗುವುದರ ಜತೆಗೆ, ಸಂಚಾರ ಪೊಲೀಸರಿಗೆ ಸ್ಥಳದಲ್ಲಿಯೇ ಚಾಲನಾ ಪರವಾನಗಿಯ ಸಿಂಧುತ್ವ ಪರಿಶೀಲಿಸಲು ಹಾಗೂ ಚಾಲಕರ ಹಿಂದಿನ ಉಲ್ಲಂಘನೆಗಳ ವಿವರ ಪಡೆಯಲು ಸಾಧ್ಯವಾಗಲಿದೆ. ಹೊಸ ಪ್ರಕರಣಗಳನ್ನು ಚಾಲಕರ ಡಿಜಿಟಲ್ ದಾಖಲೆಯೊಂದಿಗೆ ನೇರವಾಗಿ ಜೋಡಿಸುವ ವ್ಯವಸ್ಥೆಯೂ ರೂಪುಗೊಳ್ಳಲಿದೆ.

www.VIKRAMAVAHINI.com
ಕನ್ನಡ ದಿನಪತ್ರಿಕೆ
PRGI NO: KARKAN/2018/78481
ಸತ್ಯದ ಹಾದಿ | ಜನಪರ ದನಿ | ರಾಷ್ಟ್ರೀಯ ದೃಷ್ಟಿ
ವಿಕ್ರಮ ವಾಹಿನಿ

### ಸವಿ ವಾಹಿನಿ

ಜೀವನ ಅಂದ್ರೇನೇ ಒಂದು ತರಗತಿಯ ಕೊಠಡಿ ಇದ್ದಂತೆ.. ಗಂಟೆ ಗಂಟೆಗೊಂದು ಹೊಸ ಪಾಠ ದಿನ ದಿನಕ್ಕೊಂದು ಹೊಸ ಅನುಭವ..

### ದಿನ ಪಂಚಾಂಗ

ಅಕ್ಟೋಬರ್, 02-2026, ಶುಕ್ರವಾರ ವರ್ಷ ಋತು, ಭಾದ್ರಪದ ಮಾಸ, ಬಹುಳ ಪಕ್ಷ
ಷಷ್ಠಿ ತಿಥಿ ಮ.12:25
ರೋಹಿಣಿ ನಕ್ಷತ್ರ ಬೆ.7:30, ಮೃಗಶಿರ ನಕ್ಷತ್ರ ಮಾ.ಬೆ.5:53
ರಾಹುಕಾಲ ಬೆ 10:38-12:09
ಚಂದನಷಷ್ಠಿ, ಅಂತರರಾಷ್ಟ್ರೀಯ ಅಹಿಂಸಾ ದಿನ, ಮಹಾ ವ್ಯತೀಪಾತ

# 'ಮಹಾರಾಷ್ಟ್ರ ಮಾದರಿಯಲ್ಲಿ ರೈತರ ಸಾಲ ಮನ್ನಾ ಮಾಡಿ'

● ವಿಕ್ರಮ ವಾಹಿನಿ | ಬಂಗಾರಪೇಟೆ

ರಾಜ್ಯ ಸರ್ಕಾರಕ್ಕೆ ರಿಯಲ್ ಎಸ್ಟೇಟ್ ಬಗ್ಗೆ ಇರುವ ಕಾಳಜಿ ರೈತರ ಬಗ್ಗೆ ಇಲ್ಲ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಆರೋಪಿಸಿದರು.

ಬಂಗಾರಪೇಟೆಯಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ರಾಜ್ಯದಲ್ಲಿ ತೀವ್ರ ಬರಗಾಲವಿದ್ದರೂ ರೈತರಿಗೆ ಸಮರ್ಪಕ ಪರಿಹಾರ ನೀಡುವಲ್ಲಿ ಸರ್ಕಾರ ವಿಫಲವಾಗಿದೆ. ಪ್ರತಿ ಹೆಕ್ಟೇರ್‌ಗೆ ರೂ 50 ಸಾವಿರ ಪರಿಹಾರ, ರೂ 5 ಲಕ್ಷದವರೆಗೆ ಕೃಷಿ ಸಾಲ ಮನ್ನಾ ಹಾಗೂ ಪ್ರತಿದಿನ ಏಳು ಗಂಟೆಗಳ ಕಾಲ ತ್ರಿಫೇಸ್ ವಿದ್ಯುತ್ ನೀಡುವಂತೆ ಬಿಜೆಪಿ ಒತ್ತಾಯಿಸಿತ್ತು. ಆದರೆ ಸರ್ಕಾರ ಕೇವಲ ರೂ 2,500 ಪರಿಹಾರ ಘೋಷಿಸಿ ರೈತರನ್ನು ನಿರ್ಲಕ್ಷಿಸಿದೆ ಎಂದು ಟೀಕಿಸಿದರು.

ನೆರೆಯ ಮಹಾರಾಷ್ಟ್ರದಲ್ಲಿ ರೂ 2 ಲಕ್ಷದವರೆಗೆ ರೈತರ ಸಾಲ ಮನ್ನಾ ಮಾಡಲು ಸುಮಾರು ರೂ 26 ಸಾವಿರ ಕೋಟಿ ಘೋಷಿಸಲಾಗಿದೆ. ಅದೇ ಮಾದರಿಯಲ್ಲಿ ಕರ್ನಾಟಕದಲ್ಲೂ ರೈತರ ಸಾಲ ಮನ್ನಾ ಮಾಡಿ ನೆರವಿಗೆ ಬರಬೇಕು. ಕೇಂದ್ರ ಸರ್ಕಾರಕ್ಕೆ ಪತ್ರ ಬರೆದು ತನ್ನ ಜವಾಬ್ದಾರಿಯಿಂದ ನುಣುಚಿಕೊಳ್ಳಬಾರದು ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರನ್ನು ಆಗ್ರಹಿಸಿದರು.

**ಆರ್ಥಿಕ ಪರಿಸ್ಥಿತಿ ಹದಗೆಟ್ಟಿದೆ:** ರಾಜ್ಯದಲ್ಲಿ ಅಭಿವೃದ್ಧಿ ಕಾಮಗಾರಿಗಳಿಗೆ ಹಣವಿಲ್ಲದ ಪರಿಸ್ಥಿತಿ ನಿರ್ಮಾಣವಾಗಿದೆ. ಕೆಎಸ್‌ಆರ್‌ಟಿಸಿಗೆ ರೂ 8,500 ಕೋಟಿ ಬಾಕಿ ಇರುವುದಾಗಿ ಸಚಿವರೇ ತಿಳಿಸಿದ್ದಾರೆ. ಸರ್ಕಾರದ ಹಣಕಾಸಿನ ಸ್ಥಿತಿಗತಿ ಕುರಿತು ಶ್ವೇತಪತ್ರ ಹೊರಡಿಸಬೇಕು ಎಂದು ಒತ್ತಾಯಿಸಿದರು. ಕಳೆದ ಮೂರು ವರ್ಷಗಳಲ್ಲಿ ಎಸ್‌ಸಿಪಿ-ಟಿಎಸ್‌ಪಿ ಯೋಜನೆಯ ರೂ 55 ಸಾವಿರ ಕೋಟಿ ಅನುದಾನವನ್ನು ಬೇರೆ ಕಾರ್ಯಕ್ರಮಗಳಿಗೆ ವರ್ಗಾಯಿಸುವ ಮೂಲಕ ಪರಿಶಿಷ್ಟ ಜಾತಿ ಮತ್ತು ಪಂಗಡಗಳ ಸಮುದಾಯಗಳಿಗೆ ಅನ್ಯಾಯ ಮಾಡಲಾಗಿದೆ ಎಂದು ಆರೋಪಿಸಿದರು.

**ಕಾನೂನು ಸುವ್ಯವಸ್ಥೆ ಕುಸಿತ:** ರಾಜ್ಯದಲ್ಲಿ ದಲಿತರ ಮೇಲಿನ ದೌರ್ಜನ್ಯ ಹಾಗೂ ಹತ್ಯೆ ಪ್ರಕರಣಗಳು ಹೆಚ್ಚುತ್ತಿವೆ ಎಂದು ಆರೋಪಿಸಿದ ವಿಜಯೇಂದ್ರ, ರಾಯಚೂರಿನ ದೇವದುರ್ಗ ಮತ್ತು ಕಲಬುರಗಿಯ ಸೇಡಂನಲ್ಲಿ ನಡೆದ ಘಟನೆಗಳನ್ನು ಪ್ರಸ್ತಾಪಿಸಿದರು. ದಲಿತರ ಅಭಿವೃದ್ಧಿಗೆ ಮೀಸಲಿಟ್ಟ ಅನುದಾನವನ್ನು ಮೂಲ ಉದ್ದೇಶಕ್ಕೆ ಬಳಸಬೇಕು. ಈ ವಿಚಾರದಲ್ಲಿ ಮುಖ್ಯಮಂತ್ರಿ ಹಾಗೂ ಗೃಹ ಸಚಿವರು ಉತ್ತರ ನೀಡಬೇಕು ಎಂದು ಆಗ್ರಹಿಸಿದರು.

**ಇತರೆ ವಿಚಾರಗಳ ಪ್ರಸ್ತಾಪ:** ವಿಧಾನಸೌಧದಲ್ಲಿ ಉರ್ದು ಹಬ್ಬ ಆಚರಣೆಗೆ ಮುಂದಾಗಿರುವ ಸರ್ಕಾರದ ಕ್ರಮವನ್ನು ಟೀಕಿಸಿದ ಅವರು, ಬಿಜೆಪಿ ಅಲ್ಪಸಂಖ್ಯಾತರ ವಿರೋಧಿಯಲ್ಲ. ಎಲ್ಲ ಸಮುದಾಯಗಳಿಗೂ ಸಮಾನ ಅಭಿವೃದ್ಧಿ ಅವಕಾಶ ಕಲ್ಪಿಸಬೇಕು. ಆದರೆ ಓಲೈಕೆ ರಾಜಕಾರಣದ ಮೂಲಕ ಸಮಾಜವನ್ನು ವಿಭಜಿಸಬಾರದು ಎಂದರು.

ಎಸ್‌ಐಆರ್ ಪ್ರಕ್ರಿಯೆಯಲ್ಲಿ ಮತದಾರರ ಪಟ್ಟಿಗೆ ಅಕ್ರಮವಾಗಿ ಹೆಸರು ಸೇರ್ಪಡೆಯಾಗಿರುವ ಆರೋಪಗಳ ಕುರಿತು ಚುನಾವಣಾ ಆಯೋಗಕ್ಕೆ ದೂರು ನೀಡುವುದರಲ್ಲಿ ತಪ್ಪಿಲ್ಲ. ಕೆಪಿಎಸ್‌ಸಿಯನ್ನು ಮುಚ್ಚುವ ಬದಲು ಪರೀಕ್ಷಾ ವ್ಯವಸ್ಥೆಯಲ್ಲಿ ಸುಧಾರಣೆ ತಂದು ಯುವಕರಿಗೆ ನ್ಯಾಯ ಒದಗಿಸಬೇಕು ಎಂದು ಹೇಳಿದರು.

ಪ್ರಧಾನಿ ನರೇಂದ್ರ ಮೋದಿ ಅವರ 25 ವರ್ಷಗಳ ಸಾರ್ವಜನಿಕ ಸೇವೆಯ ಹಿನ್ನೆಲೆಯಲ್ಲಿ ಸೆ.17ರಿಂದ ಅ.17ರವರೆಗೆ ದೇಶಾದ್ಯಂತ ಸೇವಾ ಸಂಕಲ್ಪ ಅಭಿಯಾನ ನಡೆಯುತ್ತಿದೆ. ಇದರ ಭಾಗವಾಗಿ ಬಂಗಾರಪೇಟೆ ಮತ್ತು ಕೆಜಿಎಫ್ ಕ್ಷೇತ್ರಗಳಲ್ಲಿ ಪಕ್ಷದ ಸಂಘಟನೆ ಹಾಗೂ ಮುಂಬರುವ ಸ್ಥಳೀಯ ಸಂಸ್ಥೆಗಳ ಚುನಾವಣೆಗಳಿಗೆ ಕಾರ್ಯಕರ್ತರನ್ನು ಸಜ್ಜುಗೊಳಿಸುವ ಉದ್ದೇಶದಿಂದ ಯಾತ್ರೆ ಹಮ್ಮಿಕೊಳ್ಳಲಾಗಿದೆ ಎಂದು ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾಜಿ ಸಂಸದ ಎಸ್. ಮುನಿಸ್ವಾಮಿ, ವಿಧಾನಪರಿಷತ್ ಮಾಜಿ ಸದಸ್ಯ ವೈ.ಎ. ನಾರಾಯಣಸ್ವಾಮಿ, ಬಿಜೆಪಿ ಜಿಲ್ಲಾಧ್ಯಕ್ಷ ಓಂಶಕ್ತಿ ಛಲಪತಿ, ಮಾಜಿ ಶಾಸಕ ವೆಂಕಟಮುನಿಸ್ವಾಮಿ ಉಪಸ್ಥಿತರಿದ್ದರು.




## ಕುರುಡುಮಲೆ ಗಣಪತಿ ದರ್ಶನದೊಂದಿಗೆ ರಾಜ್ಯ ಪ್ರವಾಸ ಆರಂಭ

● ವಿಕ್ರಮ ವಾಹಿನಿ | ಕೋಲಾರ

ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಅವರು ಮುಳಬಾಗಿಲು ತಾಲೂಕಿನ ಪ್ರಸಿದ್ಧ ಕುರುಡುಮಲೆ ಗಣಪತಿ ದೇವಸ್ಥಾನದಲ್ಲಿ ಗುರುವಾರ ವಿಶೇಷ ಪೂಜೆ ಸಲ್ಲಿಸುವ ಮೂಲಕ ರಾಜ್ಯ ಪ್ರವಾಸಕ್ಕೆ ಚಾಲನೆ ನೀಡಿದರು.

ಪ್ರಧಾನಿ ನರೇಂದ್ರ ಮೋದಿ ಅವರ ಸಾರ್ವಜನಿಕ ಜೀವನದ 25 ವರ್ಷಗಳ ಹಿನ್ನೆಲೆಯಲ್ಲಿ ಬಿಜೆಪಿ ಹಮ್ಮಿಕೊಂಡಿರುವ 'ಸೇವಾ ಸಂಕಲ್ಪ ಅಭಿಯಾನ' ಹಾಗೂ 'ಬೂತ್ ವಿಜಯ ಸಂಕಲ್ಪ ಯಾತ್ರೆ'ಯ ಭಾಗವಾಗಿ ವಿಜಯೇಂದ್ರ ರಾಜ್ಯ ಪ್ರವಾಸ ಕೈಗೊಂಡಿದ್ದಾರೆ. ಅ.1ರಿಂದ ಆರಂಭವಾಗಿರುವ ಅಭಿಯಾನದ ಮೊದಲ ಹಂತದಲ್ಲಿ ವಿವಿಧ ವಿಧಾನಸಭಾ ಕ್ಷೇತ್ರಗಳಿಗೆ ಭೇಟಿ ನೀಡಿ ಪಕ್ಷದ ಸಂಘಟನಾ ಚಟುವಟಿಕೆಗಳಲ್ಲಿ ಪಾಲ್ಗೊಳ್ಳಲಿದ್ದಾರೆ.

ಕುರುಡುಮಲೆ ದೇವಸ್ಥಾನದಲ್ಲಿ ಪೂಜೆ ಸಲ್ಲಿಸಿದ ಬಳಿಕ ಕೋಲಾರ ಜಿಲ್ಲೆಯ ಬಂಗಾರಪೇಟೆ ಹಾಗೂ ಕೆಜಿಎಫ್ ವಿಧಾನಸಭಾ ಕ್ಷೇತ್ರಗಳಲ್ಲಿ ಪ್ರವಾಸ ಕೈಗೊಂಡರು. ಈ ವೇಳೆ ಕಾರ್ಯಕರ್ತರು ದೇವಸ್ಥಾನದ ಮುಂಭಾಗದಲ್ಲಿ ಗಿಡಗಳನ್ನು ನೆಟ್ಟು ವಿಜಯೇಂದ್ರ ಅವರಿಗೆ ಶುಭ ಹಾರೈಸಿದರು.



ಕೆಲವರು 'ಮುಂದಿನ ಮುಖ್ಯಮಂತ್ರಿ ವಿಜಯೇಂದ್ರ' ಎಂದು ಘೋಷಣೆ ಕೂಗಿದಾಗ, ವಿಜಯೇಂದ್ರ ಅವರು ತಮ್ಮ ಹೆಸರಿನ ಬದಲು ಪ್ರಧಾನಿ ನರೇಂದ್ರ ಮೋದಿ ಅವರಿಗೆ ಜೈಕಾರ ಹಾಕುವಂತೆ ಸೂಚಿಸಿದರು.

ಇದೇ ವೇಳೆ ಅಭಿಮಾನಿಯೊಬ್ಬರು 'ಮುಂದಿನ ಮುಖ್ಯಮಂತ್ರಿ' ಎಂದು ಬರೆದಿದ್ದ ಭಾವಚಿತ್ರವನ್ನು ಉಡುಗೊರೆಯಾಗಿ ನೀಡಲು ಮುಂದಾದರು. ಅದನ್ನು ಸ್ವೀಕರಿಸಲು ನಿರಾಕರಿಸಿದ ವಿಜಯೇಂದ್ರ, ಇಂತಹ ಉಡುಗೊರೆ ಬೇಡ ಎಂದು ತಿಳಿಸಿದರು.



## "ಬಿಜೆಪಿ ಗೆಲುವು ಖಚಿತ"

● ವಿಕ್ರಮ ವಾಹಿನಿ | ಬಂಗಾರಪೇಟೆ

ರಾಜ್ಯದಲ್ಲಿ ಬಿಜೆಪಿ ನೇತೃತ್ವದ ಎನ್‌ಡಿಎ ಸರ್ಕಾರ ಮತ್ತೆ ಅಧಿಕಾರಕ್ಕೆ ಬರುವುದು ಖಚಿತ. ಇದನ್ನು ತಡೆಯಲು ಯಾವುದೇ ಶಕ್ತಿಗೂ ಸಾಧ್ಯವಿಲ್ಲ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ವಿಶ್ವಾಸ ವ್ಯಕ್ತಪಡಿಸಿದರು.

ಸೇವಾ ಸಂಕಲ್ಪ ಅಭಿಯಾನದಲ್ಲಿ ಮಾತನಾಡಿದ ಅವರು, ಕಾಂಗ್ರೆಸ್ ಸರ್ಕಾರದ ಆಡಳಿತದಲ್ಲಿ ಭ್ರಷ್ಟಾಚಾರ ತಾಂಡವವಾಡುತ್ತಿದ್ದು, ಕಾನೂನು-ಸುವ್ಯವಸ್ಥೆ ಹದಗೆಟ್ಟಿದೆ ಎಂದು ಆರೋಪಿಸಿದರು. ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡದ ಅಭಿವೃದ್ಧಿಗೆ ಮೀಸಲಾದ 55 ಸಾವಿರ ಕೋಟಿ ಅನ್ಯ ಉದ್ದೇಶಕ್ಕೆ ಬಳಕೆಯಾಗಿದೆ ಎಂದು ದೂರಿದರು.

ರೈತರ ನೆರವಿಗೆ ಆಗ್ರಹ: ಬರದಿಂದ ಸಂಕಷ್ಟದಲ್ಲಿರುವ ರೈತರಿಗೆ ಪ್ರತಿ ಹೆಕ್ಟೇರ್‌ಗೆ 50 ಸಾವಿರ ಪರಿಹಾರ ನೀಡಬೇಕು. ಕೃಷಿ ಸಾಲಕ್ಕೆ ಐದು ವರ್ಷಗಳ ಕಾಲ ವಿರಾಮ ನೀಡಬೇಕು ಹಾಗೂ ಏಳು ಗಂಟೆ ಮೂರು ಹಂತದ ವಿದ್ಯುತ್ ಪೂರೈಸಬೇಕು ಎಂದು ಬಿಜೆಪಿ ಆಗ್ರಹಿಸಿದೆ. ಹೈನುಗಾರಿಕೆ ಪ್ರೋತ್ಸಾಹಧನ ಮುಂದುವರಿಸಬೇಕು ಎಂದೂ ಒತ್ತಾಯಿಸಿದರು.

ರಾಜ್ಯ ಸರ್ಕಾರ ರೈತರು ಹಾಗೂ ಬಡವರ ನೆರವಿಗೆ ಬರದೆ ಕೇಂದ್ರದ ವಿರುದ್ಧ ಆರೋಪ ಮಾಡುತ್ತಿದೆ. ಬರ ಪರಿಸ್ಥಿತಿ ನಿರ್ವಹಿಸಲು ಸಾಧ್ಯವಾಗದಿದ್ದರೆ ವಿಧಾನಸಭೆ ವಿಸರ್ಜಿಸಬೇಕು ಎಂದು ವಿಜಯೇಂದ್ರ ಆಗ್ರಹಿಸಿದರು.

ವಿಧಾನಸೌಧದಲ್ಲಿ ಉರ್ದು ಹಬ್ಬ ಆಚರಣೆ ವಿಚಾರದಲ್ಲೂ ಕಾಂಗ್ರೆಸ್ ಸರ್ಕಾರವನ್ನು ಟೀಕಿಸಿದ ಅವರು, ಜನರು ಬಿಜೆಪಿಗೆ ಆಶೀರ್ವಾದ ಮಾಡಲಿದ್ದಾರೆ ಎಂದು ಹೇಳಿದರು.

## ರೈತರ ಸಮಸ್ಯೆ ಅರ್ಥ ಮಾಡಿಕೊಳ್ಳದ ಸಿಎಂ

● ವಿಕ್ರಮ ವಾಹಿನಿ | ಕೆಜಿಎಫ್

ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ರಾಜ್ಯದ ರೈತರ ಸಮಸ್ಯೆಗಳನ್ನು ಅರ್ಥ ಮಾಡಿಕೊಳ್ಳುವ ಪ್ರಯತ್ನವನ್ನೇ ಮಾಡಿಲ್ಲ. ಅವರು 'ರಿಯಲ್ ಎಸ್ಟೇಟ್ ಸಿಎಂ' ಆಗಿದ್ದಾರೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಟೀಕಿಸಿದರು.

ಬೆತ್ತಮಂಗಲದಲ್ಲಿ ನಡೆದ ಸೇವಾ ಸಂಕಲ್ಪ ಅಭಿಯಾನ ಹಾಗೂ ಬೂತ್ ವಿಜಯ ಸಂಕಲ್ಪ ಯಾತ್ರೆಯಲ್ಲಿ ಮಾತನಾಡಿದ ಅವರು, ಬರಪೀಡಿತ ರೈತರಿಗೆ ಸಮರ್ಪಕ ಪರಿಹಾರ ನೀಡಬೇಕು ಮತ್ತು ಸಮರ್ಪಕ ವಿದ್ಯುತ್ ಪೂರೈಸಬೇಕು ಎಂದು ಆಗ್ರಹಿಸಿದರು. ರೈತರ ಸಮಸ್ಯೆಗಳನ್ನು ನಿರ್ಲಕ್ಷಿಸಿದರೆ ಮುಂದಿನ ದಿನಗಳಲ್ಲಿ ಅನ್ನದಾತರು ಕಾಂಗ್ರೆಸ್‌ನ್ನು ಅಧಿಕಾರದಿಂದ ದೂರ ಮಾಡಲಿದ್ದಾರೆ ಎಂದರು.

ಗ್ಯಾರಂಟಿ ಯೋಜನೆಗಳ ಹೆಸರಿನಲ್ಲಿ ಕಳೆದ ಮೂರು ವರ್ಷಗಳಲ್ಲಿ ರಾಜ್ಯದ ಹಣಕಾಸು ಪರಿಸ್ಥಿತಿ ಹದಗೆಟ್ಟಿದೆ. ವಿಧವಾ ವೇತನ, ಸ್ವಾತಂತ್ರ್ಯ ಹೋರಾಟಗಾರರ ಗೌರವಧನ ಸೇರಿದಂತೆ ಹಲವು ಸೌಲಭ್ಯಗಳು ಸಮರ್ಪಕವಾಗಿ ದೊರೆಯುತ್ತಿಲ್ಲ. ಬರದ ಸಂದರ್ಭದಲ್ಲಿ ಹೈನುಗಾರ ರೈತರಿಗೆ ನೀಡುತ್ತಿದ್ದ ಪ್ರೋತ್ಸಾಹಧನವನ್ನೂ ಸ್ಥಗಿತಗೊಳಿಸಲಾಗಿದೆ ಎಂದು ಆರೋಪಿಸಿದರು.

ದಲಿತರ ಅಭಿವೃದ್ಧಿಗೆ ಮೀಸಲಾದ ಎಸ್‌ಸಿಪಿ-ಟಿಎಸ್‌ಪಿ ಅನುದಾನವನ್ನು ಅನ್ಯ ಉದ್ದೇಶಕ್ಕೆ ಬಳಸಲಾಗಿದೆ. ಶೋಷಿತ ಸಮುದಾಯಗಳನ್ನು ಕಾಂಗ್ರೆಸ್ ಮತಬ್ಯಾಂಕ್‌ನಂತೆ ಬಳಸಿಕೊಳ್ಳುತ್ತಿದೆ ಎಂದು ವಿಜಯೇಂದ್ರ ದೂರಿದರು. ಡಾ.ಬಿ.ಆರ್. ಅಂಬೇಡ್ಕರ್ ಅವರನ್ನು ಕಾಂಗ್ರೆಸ್ ಚುನಾವಣೆಯಲ್ಲಿ ಸೋಲಿಸಿತ್ತು ಎಂದು ಆರೋಪಿಸಿದ ಅವರು, ಇದೀಗ ಅದೇ ಪಕ್ಷ ಶೋಷಿತ ಸಮುದಾಯಗಳ ಪರ ಮಾತನಾಡುತ್ತಿದೆ ಎಂದು ಟೀಕಿಸಿದರು.

ನರೇಂದ್ರ ಮೋದಿ ಅವರು ಪ್ರಧಾನಿಯಾಗಿ ಮಾತ್ರವಲ್ಲ, 'ಪ್ರಧಾನ ಸೇವಕ'ನಾಗಿ ದೇಶದ ಅಭಿವೃದ್ಧಿಗೆ ಶ್ರಮಿಸುತ್ತಿದ್ದಾರೆ. 2047ರ ವೇಳೆಗೆ ಭಾರತವನ್ನು ಅಭಿವೃದ್ಧಿ ಹೊಂದಿದ ರಾಷ್ಟ್ರವನ್ನಾಗಿ ರೂಪಿಸುವ ಸಂಕಲ್ಪ ಹೊಂದಿದ್ದಾರೆ. ಅವರ ಸೇವೆ ಹಾಗೂ ಆಯುಷ್ಯಕ್ಕಾಗಿ ಪ್ರಾರ್ಥಿಸಿ ಸೆ.17ರಿಂದ ಅ.17ರವರೆಗೆ ಸೇವಾ ಸಂಕಲ್ಪ ಅಭಿಯಾನ ನಡೆಸಲಾಗುತ್ತಿದೆ ಎಂದರು.

ಮುಂದಿನ ಜಿಲ್ಲಾ ಹಾಗೂ ತಾಲೂಕು ಪಂಚಾಯಿತಿ ಚುನಾವಣೆಗಳಲ್ಲಿ ಪಕ್ಷದ ಸಂಘಟನೆಯನ್ನು ಬಲಪಡಿಸಿ, ಹಲವು ವರ್ಷಗಳಿಂದ ದುಡಿಯುತ್ತಿರುವ ಕಾರ್ಯಕರ್ತರಿಗೆ ಅವಕಾಶ ನೀಡಬೇಕು ಎಂದು ಕರೆ ನೀಡಿದರು.

## ಕೊತ್ತನೂರು ಪೊಲೀಸರಿಗೆ ಸೂಕ್ತ ನಿರ್ದೇಶನ ನೀಡಿ: ಹೈಕೋರ್ಟ್

● ವಿಕ್ರಮ ವಾಹಿನಿ | ಬೆಂಗಳೂರು

ನಕಲಿ ದಾಖಲೆ ಸಲ್ಲಿಸಿ 5 ಲಕ್ಷ ಅನುದಾನ ಪಡೆದ ಆರೋಪಕ್ಕೆ ಸಂಬಂಧಿಸಿದಂತೆ ಕೊತ್ತನೂರು ಪೊಲೀಸ್ ಠಾಣೆಯಲ್ಲಿ ದಾಖಲಾಗಿರುವ ಪ್ರಕರಣದ ತನಿಖೆಯನ್ನು ಶೀಘ್ರ ಪೂರ್ಣಗೊಳಿಸಿ ವರದಿ ಸಲ್ಲಿಸುವಂತೆ ಪೊಲೀಸರಿಗೆ ಸೂಕ್ತ ನಿರ್ದೇಶನ ನೀಡಬೇಕು ಎಂದು ಬೆಂಗಳೂರು ನಗರ ಪೊಲೀಸ್ ಆಯುಕ್ತರಿಗೆ ಹೈಕೋರ್ಟ್ ಸೂಚಿಸಿದೆ.

ಅಬ್ದುಲ್ ಹಮೀದ್ ಪಾಷಾ ಸಲ್ಲಿಸಿದ್ದ ಅರ್ಜಿ ವಿಚಾರಣೆ ನಡೆಸಿದ ನ್ಯಾಯಮೂರ್ತಿಗಳಾದ ಜಯಂತ್ ಬ್ಯಾನರ್ಜಿ ಹಾಗೂ ತಾರಾ ವಿತಸ್ತ ಗಂಜು ಅವರ ನ್ಯಾಯಪೀಠ, ತನಿಖೆ ವಿಳಂಬವಾಗುತ್ತಿರುವ ಬಗ್ಗೆ ಆಕ್ಷೇಪ ವ್ಯಕ್ತಪಡಿಸಿತು. ಅನಗತ್ಯ ವಿಳಂಬ ತಪ್ಪಿಸಿ ಸಾಧ್ಯವಾದಷ್ಟು ಬೇಗ ತನಿಖೆ ಪೂರ್ಣಗೊಳಿಸಿ ವರದಿ ಸಲ್ಲಿಸುವಂತೆ ಕೊತ್ತನೂರು ಪೊಲೀಸರಿಗೆ ಆಯುಕ್ತರು ನಿರ್ದೇಶನ ನೀಡಬೇಕು ಎಂದು ಮೌಖಿಕವಾಗಿ ತಿಳಿಸಿತು.

ಶಿಕ್ಷಣ ಇಲಾಖೆಯ ಕ್ಷೇತ್ರ ಶಿಕ್ಷಣಾಧಿಕಾರಿ ಸಿ.ಎನ್.ಗೋವಿಂದಪ್ಪ ಅವರು ಜಾಮಿಯಾ ಮಹಮ್ಮದಿಯ ಎಜುಕೇಷನ್ ಸೊಸೈಟಿ, ಮುಂಬೈ ವಿರುದ್ಧ ಜನವರಿ 27ರಂದು ಕೊತ್ತನೂರು ಠಾಣೆಯಲ್ಲಿ ದೂರು ದಾಖಲಿಸಿದ್ದರು. ನಕಲಿ ದಾಖಲೆಗಳ ಮೂಲಕ ಅನುದಾನ ಪಡೆಯಲಾಗಿದೆ ಎಂಬ ಆರೋಪದಡಿ ಬಿಎನ್‌ಎಸ್‌ನ ವಿವಿಧ ಕಲಂಗಳಡಿ ಪ್ರಕರಣ ದಾಖಲಾಗಿತ್ತು. ಆದರೆ ಈವರೆಗೆ ಆರೋಪಪಟ್ಟಿ ಸಲ್ಲಿಕೆಯಾಗಿಲ್ಲ ಎಂದು ನ್ಯಾಯಾಲಯಕ್ಕೆ ತಿಳಿಸಲಾಯಿತು.

ಈ ಕುರಿತು ತನಿಖೆ ಮುಂದುವರಿದಿದ್ದು, ಅಂತಿಮ ವರದಿ ಸಲ್ಲಿಸಬೇಕಿದೆ ಎಂದು ಅಧಿಕಾರಿಗಳು ನ್ಯಾಯಾಲಯಕ್ಕೆ ಮಾಹಿತಿ ನೀಡಿದರು. ಪ್ರಕರಣದ ಮುಂದಿನ ವಿಚಾರಣೆಯನ್ನು ನ.17ಕ್ಕೆ ಮುಂದೂಡಲಾಗಿದ್ದು, ಅಂದಿನೊಳಗೆ ತನಿಖೆಯ ಪ್ರಗತಿ ವರದಿ ಸಲ್ಲಿಸುವಂತೆ ನ್ಯಾಯಪೀಠ ಸೂಚಿಸಿದೆ. ಇದೇ ವೇಳೆ, ನಕಲಿ ದಾಖಲೆಗಳ ಆಧಾರದ ಮೇಲೆ 5 ಲಕ್ಷ ಅನುದಾನ ಮಂಜೂರು ಮಾಡಿಸಿಕೊಂಡಿರುವ ಪ್ರಕರಣದಲ್ಲಿ ಹಣವನ್ನು ಬಡ್ಡಿ ಸಮೇತ ವಸೂಲಿ ಮಾಡುವ ಪ್ರಕ್ರಿಯೆ ನಡೆಯುತ್ತಿದೆ ಎಂದು ಅಲ್ಪಸಂಖ್ಯಾತರ ನಿರ್ದೇಶನಾಲಯ ನ್ಯಾಯಾಲಯಕ್ಕೆ ತಿಳಿಸಿದೆ.

## ಧರ್ಮಸ್ಥಳದಲ್ಲಿ 10 ವರ್ಷಗಳಲ್ಲಿ 681 ಅಸ್ವಾಭಾವಿಕ ಸಾವು

● ವಿಕ್ರಮ ವಾಹಿನಿ | ಬೆಂಗಳೂರು

ಧರ್ಮಸ್ಥಳ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ 2016ರಿಂದ 2026ರ ಫೆಬ್ರವರಿ 2ರವರೆಗೆ ಒಟ್ಟು 681 ಅಸ್ವಾಭಾವಿಕ ಮರಣ ಪ್ರಕರಣಗಳು ದಾಖಲಾಗಿದ್ದು, 123 ಅಪರಿಚಿತ ಶವಗಳು ಪತ್ತೆಯಾಗಿವೆ. ಈ ಪೈಕಿ 84 ಶವಗಳನ್ನು ಮಂಗಳೂರಿನ ಕೆ.ಎಸ್. ಹೆಗ್ಡೆ ಆಸ್ಪತ್ರೆಗೆ ರವಾನಿಸಿ ಮರಣೋತ್ತರ ಪರೀಕ್ಷೆ ನಡೆಸಲಾಗಿದೆ.

ಧರ್ಮಸ್ಥಳ ಪೊಲೀಸ್ ಉಪನಿರೀಕ್ಷಕರು ನೀಡಿರುವ ಅಧಿಕೃತ ವರದಿಯಲ್ಲಿ ಈ ಮಾಹಿತಿ ಬಹಿರಂಗವಾಗಿದೆ. 2016ರಲ್ಲಿ 48 ಅಸ್ವಾಭಾವಿಕ ಮರಣ ಹಾಗೂ 10 ಅಪರಿಚಿತ ಶವ ಪ್ರಕರಣಗಳು ದಾಖಲಾಗಿದ್ದರೆ, 2017ರಲ್ಲಿ ಕ್ರಮವಾಗಿ 56 ಮತ್ತು 10 ಪ್ರಕರಣಗಳು ದಾಖಲಾಗಿವೆ. 2018ರಲ್ಲಿ 63 ಅಸ್ವಾಭಾವಿಕ ಮರಣ, 12 ಅಪರಿಚಿತ ಶವ; 2019ರಲ್ಲಿ 59 ಮತ್ತು 7; 2020ರಲ್ಲಿ 51 ಮತ್ತು 8 ಪ್ರಕರಣಗಳು ದಾಖಲಾಗಿವೆ. 2021ರಲ್ಲಿ 67 ಅಸ್ವಾಭಾವಿಕ ಮರಣ ಹಾಗೂ 14 ಅಪರಿಚಿತ ಶವಗಳು ಪತ್ತೆಯಾಗಿವೆ.

2022ರಲ್ಲಿ 74 ಅಸ್ವಾಭಾವಿಕ ಮರಣ, 12 ಅಪರಿಚಿತ ಶವ; 2023ರಲ್ಲಿ 88 ಮತ್ತು 11 ಪ್ರಕರಣಗಳು ದಾಖಲಾಗಿವೆ. 2024ರಲ್ಲಿ 97 ಅಸ್ವಾಭಾವಿಕ ಮರಣ ಪ್ರಕರಣಗಳು ದಾಖಲಾಗಿದ್ದು, ಇದು ಈ ಅವಧಿಯಲ್ಲೇ ಗರಿಷ್ಠ ಸಂಖ್ಯೆಯಾಗಿದೆ. ಇದೇ ವರ್ಷ 26 ಅಪರಿಚಿತ ಶವಗಳು ಪತ್ತೆಯಾಗಿವೆ. 2025ರಲ್ಲಿ 67 ಅಸ್ವಾಭಾವಿಕ ಮರಣ ಹಾಗೂ 11 ಅಪರಿಚಿತ ಶವ ಪ್ರಕರಣಗಳು ದಾಖಲಾಗಿವೆ.

ಅಧಿಕೃತ ವರದಿಯ ಪ್ರಕಾರ, ಅಪರಿಚಿತ ಶವಗಳ ಪೈಕಿ 84 ಶವಗಳನ್ನು ಕೆ.ಎಸ್.ಹೆಗ್ಡೆ ಆಸ್ಪತ್ರೆಗೆ ರವಾನಿಸಿ ಮರಣೋತ್ತರ ಪರೀಕ್ಷೆ ನಡೆಸಲಾಗಿದೆ. ಉಳಿದ ಶವಗಳ ಗುರುತು ಪತ್ತೆ ಹಾಗೂ ಪ್ರಕರಣಗಳ ಮುಂದಿನ ಕ್ರಮದ ಕುರಿತು ಪೊಲೀಸ್ ದಾಖಲೆಗಳಲ್ಲಿ ವಿವರಗಳನ್ನು ದಾಖಲಿಸಲಾಗಿದೆ.

## ಅಲ್ಪಸಂಖ್ಯಾತರ ಓಲೈಕೆಗೆ ವಿಭಜನೆ ರಾಜಕಾರಣ: ವಿಜಯೇಂದ್ರ

● ವಿಕ್ರಮ ವಾಹಿನಿ | ಕೋಲಾರ

ವಿಧಾನಸೌಧದ ಮೆಟ್ಟಿಲುಗಳ ಮೇಲೆ ಕನ್ನಡಕ್ಕೆ ಆದ್ಯತೆ ನೀಡಬೇಕಾದ ಸರ್ಕಾರ ಉರ್ದು ಹಬ್ಬ ಆಚರಿಸುವ ಮೂಲಕ ಅಲ್ಪಸಂಖ್ಯಾತರ ಓಲೈಕೆ ಹಾಗೂ ವಿಭಜನೆಯ ರಾಜಕಾರಣಕ್ಕೆ ಮುಂದಾಗಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಆರೋಪಿಸಿದರು.

ಕೋಲಾರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ತ್ರಿಭಾಷಾ ಸೂತ್ರದ ವಿಚಾರದಲ್ಲಿ ಹಿಂದಿ ಹೇರಿಕೆಯ ನೆಪದಲ್ಲಿ ಜನರನ್ನು ದಿಕ್ಕುತಪ್ಪಿಸಿದ ಕಾಂಗ್ರೆಸ್ ಸರ್ಕಾರ, ಇದೀಗ ಉರ್ದು ಹಬ್ಬದ ಆಚರಣೆಗೆ ಅವಕಾಶ ನೀಡುವ ಮೂಲಕ ತನ್ನ ನಿಲುವು ಬಹಿರಂಗಪಡಿಸಿದೆ ಎಂದು ಟೀಕಿಸಿದರು. ಬಿಜೆಪಿ ಅಲ್ಪಸಂಖ್ಯಾತರ ವಿರೋಧಿಯಲ್ಲ. ಎಲ್ಲ ಸಮುದಾಯಗಳಿಗೂ ಸಮಾನ ಅವಕಾಶ ಮತ್ತು ಅಭಿವೃದ್ಧಿ ಯೋಜನೆಗಳು ತಲುಪಬೇಕು ಎಂಬುದು ಪಕ್ಷದ ನಿಲುವು ಎಂದರು.

ಎಸ್‌ಐಆರ್ ಪ್ರಕ್ರಿಯೆಯಲ್ಲಿ ಕೆಲವು ಕ್ಷೇತ್ರಗಳ ಮತದಾರರ ಪಟ್ಟಿಗೆ ಅಕ್ರಮವಾಗಿ ಹೆಸರು ಸೇರ್ಪಡೆಯಾಗಿರುವ ಆರೋಪಗಳ ಕುರಿತು ಚುನಾವಣಾ ಆಯೋಗಕ್ಕೆ ದೂರು ನೀಡುವುದರಲ್ಲಿ ತಪ್ಪಿಲ್ಲ. ಅನುಮಾನಾಸ್ಪದ ಹೆಸರುಗಳನ್ನು ಪರಿಶೀಲಿಸಿ, ಅಕ್ರಮ ಕಂಡುಬಂದರೆ ಕೈಬಿಡುವಂತೆ ಮನವಿ ಮಾಡಬಹುದು. ಅಂತಿಮ ನಿರ್ಧಾರ ಕೈಗೊಳ್ಳಬೇಕಾದದ್ದು ಚುನಾವಣಾ ಆಯೋಗವೇ ಎಂದು ಹೇಳಿದರು.

ಕೆಲವು ಕ್ಷೇತ್ರಗಳಲ್ಲಿ ಅಕ್ರಮ ಬಾಂಗ್ಲಾದೇಶಿ ವಲಸಿಗರ ಹೆಸರುಗಳು ಮತದಾರರ ಪಟ್ಟಿಗೆ ಸೇರ್ಪಡೆಯಾಗಿವೆ ಎಂಬ ದೂರುಗಳೂ ಬಂದಿವೆ. ಇವುಗಳ ಪರಿಶೀಲನೆಗೆ ಒತ್ತಾಯಿಸುವುದಕ್ಕೆ ಹೆದರುವುದಿಲ್ಲ ಎಂದರು.

ಬಂಗಾರಪೇಟೆಯಲ್ಲಿ ಮಾತನಾಡಿದ ವಿಜಯೇಂದ್ರ, ಕೆಪಿಎಸ್‌ಸಿಯಲ್ಲಿ ಹಲವು ವರ್ಷಗಳಿಂದ ನಡೆಯುತ್ತಿರುವ ಅಕ್ರಮಗಳಿಗೆ ರಾಜ್ಯ ಸರ್ಕಾರ ಕಡಿವಾಣ ಹಾಕಬೇಕು ಎಂದು ಆಗ್ರಹಿಸಿದರು. ಸರ್ಕಾರಿ ಉದ್ಯೋಗದ ಕನಸಿನೊಂದಿಗೆ ಯುವಕರು ವರ್ಷಗಟ್ಟಲೆ ಪರೀಕ್ಷೆಗಳಿಗೆ ಸಿದ್ಧತೆ ನಡೆಸುತ್ತಾರೆ. ಆದರೆ ಪರೀಕ್ಷಾ ವ್ಯವಸ್ಥೆಯಲ್ಲಿನ ಅಕ್ರಮ ಮತ್ತು ಗೊಂದಲಗಳಿಂದ ಅವರ ಪರಿಶ್ರಮಕ್ಕೆ ನ್ಯಾಯ ಸಿಗುತ್ತಿಲ್ಲ ಎಂದು ದೂರಿದರು.

ಕೆಪಿಎಸ್‌ಸಿಯನ್ನು ಮುಚ್ಚುವುದು ಪರಿಹಾರವಲ್ಲ. ಪರೀಕ್ಷಾ ವ್ಯವಸ್ಥೆಯಲ್ಲಿ ಪಾರದರ್ಶಕತೆ, ವಿಶ್ವಾಸಾರ್ಹತೆ ಮತ್ತು ಹೊಣೆಗಾರಿಕೆಯನ್ನು ಖಚಿತಪಡಿಸಿ, ಯುವಜನರ ಪರಿಶ್ರಮಕ್ಕೆ ತಕ್ಕ ಫಲ ದೊರೆಯುವಂತೆ ಸರ್ಕಾರ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

## ಪತಿ ಕೊಲೆ ಆರೋಪಿಗಳಿಗೆ ಮದುವೆಗೆ ಪೆರೋಲ್

1ನೇ ಪುಟದಿಂದ

ಮದುವೆಯನ್ನು ಜೈಲು ಆವರಣದಲ್ಲಿ ನಡೆಸಲು ಅವಕಾಶವಿಲ್ಲದ ಹಿನ್ನೆಲೆಯಲ್ಲಿ ಒಂದು ದಿನದ ಮಟ್ಟಿಗೆ ಪೆರೋಲ್ ನೀಡಲಾಗಿದೆ.

ಮದುವೆ ನಡೆಯುವ ದಿನ ಬೆಳಗ್ಗೆ 10ರಿಂದ ಸಂಜೆ 5ರವರೆಗೆ ಮಾತ್ರ ಪೆರೋಲ್ ಇರಲಿದ್ದು, ಪೊಲೀಸ್ ಭದ್ರತೆಯಲ್ಲಿ ಮದುವೆ ಮುಗಿಸಿ ಸಂಜೆ 5ರೊಳಗೆ ಬೆಳಗಾವಿ ಕಾರಾಗೃಹಕ್ಕೆ ಮರಳಬೇಕು ಎಂದು ನ್ಯಾಯಪೀಠ ಸೂಚಿಸಿದೆ. 2023ರ ಜುಲೈ 17ರಂದು ಬೆಳಗಾವಿ ಜಿಲ್ಲೆಯ ವಡೇರಹಟ್ಟಿ ಗ್ರಾಮದಲ್ಲಿ ಸಿದ್ದವ್ವ ಅವರ ಪತಿ ಶಂಕರ್ ಸಿದ್ದಪ್ಪ ಜಗಮುತ್ತಿ ಅವರನ್ನು ಶ್ರೀಧರ ತಳವಾರ ಚಾಕುವಿನಿಂದ ಇರಿದು ಕೊಲೆ ಮಾಡಿದ್ದ. ತನಿಖೆಯಲ್ಲಿ ಸಿದ್ದವ್ವ ಹಾಗೂ ಶ್ರೀಧರ ಸೇರಿ ಕೊಲೆಗೆ ಸಂಚು ರೂಪಿಸಿರುವುದು ಬೆಳಕಿಗೆ ಬಂದಿತ್ತು. ಪ್ರಕರಣದ ವಿಚಾರಣೆ ನಡೆಸಿದ ನ್ಯಾಯಾಲಯ 2024ರ ಜುಲೈ 30ರಂದು ಇಬ್ಬರಿಗೂ ಕಠಿಣ ಜೀವಾವಧಿ ಶಿಕ್ಷೆ ಹಾಗೂ ತಲಾ 3 ಲಕ್ಷ ದಂಡ ವಿಧಿಸಿತ್ತು. ಇದೀಗ ಇಬ್ಬರೂ ಮದುವೆಯಾಗಲು 90 ದಿನಗಳ ಪೆರೋಲ್ ಕೋರಿ ಹೈಕೋರ್ಟ್ ಮೊರೆ ಹೋಗಿದ್ದರು.

ಮದುವೆ ಜೈಲು ಆವರಣದ ಹೊರಗೆ ನಡೆಯಬೇಕಿರುವುದರಿಂದ ಪೆರೋಲ್ ಅವಧಿಯಲ್ಲಿ ಇಬ್ಬರಿಗೂ ಪೊಲೀಸ್ ಭದ್ರತೆ ಒದಗಿಸುವಂತೆ ನ್ಯಾಯಪೀಠ ಸೂಚಿಸಿದೆ. ಪೆರೋಲ್‌ನ ನಿಗದಿತ ಸಮಯವನ್ನು ಕಟ್ಟುನಿಟ್ಟಾಗಿ ಪಾಲಿಸುವುದರ ಜತೆಗೆ, ಯಾವುದೇ ಷರತ್ತು ಉಲ್ಲಂಘನೆಯಾಗದಂತೆ ಸಂಬಂಧಪಟ್ಟ ಅಧಿಕಾರಿಗಳು ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ನಿರ್ದೇಶಿಸಿದೆ.

## "ಚುನಾವಣಾ ಆಯೋಗದ ಮೇಲೂ ಅನುಮಾನ ಹುಟ್ಟುಹಾಕುವ ಪ್ರಯತ್ನ"

● ವಿಕ್ರಮ ವಾಹಿನಿ | ಮುಳಬಾಗಿಲು

ಕಾಂಗ್ರೆಸ್ ಪಕ್ಷ ಮತ್ತು ಅದರ ನಾಯಕ ರಾಹುಲ್ ಗಾಂಧಿ ಅವರು ರಾಜಕೀಯ ಹತಾಶೆಯಿಂದ ಸಾಂವಿಧಾನಿಕ ಸಂಸ್ಥೆಯಾದ ಚುನಾವಣಾ ಆಯೋಗದ ಮೇಲೂ ಅನುಮಾನ ಮೂಡಿಸುವ ಪ್ರಯತ್ನ ಮಾಡುತ್ತಿದ್ದಾರೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಆರೋಪಿಸಿದರು.

ಬೂತ್ ವಿಜಯ ಸಂಕಲ್ಪ ಯಾತ್ರೆಯ ಹಿನ್ನೆಲೆಯಲ್ಲಿ ಮುಳಬಾಗಿಲಿನ ಕುರುಡುಮಲೆ ಶ್ರೀ ವಿಘ್ನೇಶ್ವರ ದೇವಸ್ಥಾನದಲ್ಲಿ ಪೂಜೆ ಸಲ್ಲಿಸಿದ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಪ್ರಧಾನಿ ನರೇಂದ್ರ ಮೋದಿ ಅವರ ಜನಪ್ರಿಯತೆ ಮತ್ತು ದೇಶದ ಅಭಿವೃದ್ಧಿಯನ್ನು ಕಾಂಗ್ರೆಸ್‌ಗೆ ಸಹಿಸಿಕೊಳ್ಳಲು ಸಾಧ್ಯವಾಗುತ್ತಿಲ್ಲ ಎಂದು ಟೀಕಿಸಿದರು.

**ರೈತರಿಗೆ ಅನ್ಯಾಯ:** ರಾಜ್ಯದಲ್ಲಿ ತೀವ್ರ ಬರಗಾಲದ ನಡುವೆಯೂ ರೈತರಿಗೆ ಸಮರ್ಪಕ ಪರಿಹಾರ ನೀಡುವಲ್ಲಿ ಸರ್ಕಾರ ವಿಫಲವಾಗಿದೆ. ಪ್ರತಿ ಹೆಕ್ಟೇರ್‌ಗೆ 50 ಸಾವಿರ ಪರಿಹಾರ ನೀಡುವಂತೆ ಒತ್ತಾಯಿಸಿದರೂ ಕೇವಲ 2,500 ನೀಡಿ ಕೈತೊಳೆದುಕೊಂಡಿದೆ. ರಾಜ್ಯ ಸರ್ಕಾರ ರೈತರ ಪಾಲಿಗೆ ಬದುಕಿದ್ದೂ ಸತ್ತಂತಾಗಿದೆ ಎಂದು ವಿಜಯೇಂದ್ರ ದೂರಿದರು.

**ಭ್ರಷ್ಟಾಚಾರದ ಆರೋಪ:** ಕಾಂಗ್ರೆಸ್ ಶಾಸಕ ಅಶೋಕ್ ರೈ ಅವರು ಸಚಿವರಿಗೆ ಶೇ.8ರಷ್ಟು ಕಮಿಷನ್ ನೀಡಬೇಕಾಗುತ್ತದೆ ಎಂದು ಪತ್ರ ಬರೆದಿರುವುದನ್ನು ಉಲ್ಲೇಖಿಸಿದ ವಿಜಯೇಂದ್ರ, ರಾಜ್ಯ ಸರ್ಕಾರದಲ್ಲಿ ಭ್ರಷ್ಟಾಚಾರವಿಲ್ಲದೆ ಯಾವುದೇ ಕೆಲಸ ನಡೆಯುತ್ತಿಲ್ಲ ಎಂದು ಆರೋಪಿಸಿದರು. ಗೃಹಲಕ್ಷ್ಮಿ ಯೋಜನೆಯ 5 ಸಾವಿರ ಕೋಟಿ ಎಲ್ಲಿ ಹೋಗಿದೆ ಎಂಬುದಕ್ಕೂ ಸರ್ಕಾರ ಉತ್ತರ ನೀಡಿಲ್ಲ ಎಂದು ಟೀಕಿಸಿದರು.

ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರಿಗೆ ರಿಯಲ್ ಎಸ್ಟೇಟ್ ಹೊರತುಪಡಿಸಿ ಬೇರೆ ಆದ್ಯತೆಗಳಿಲ್ಲ. ಕಳೆದ ಮೂರು ವರ್ಷಗಳಲ್ಲಿ ಎಸ್‌ಇಪಿ-ಟಿಎಸ್‌ಪಿ ಅನುದಾನದ 55 ಸಾವಿರ ಕೋಟಿಯನ್ನು ಬೇರೆ ಕಾರ್ಯಕ್ರಮಗಳಿಗೆ ವರ್ಗಾಯಿಸುವ ಮೂಲಕ ದಲಿತ ಸಮುದಾಯಕ್ಕೆ ಅನ್ಯಾಯ ಮಾಡಲಾಗಿದೆ ಎಂದು ಆರೋಪಿಸಿದರು.

**ಬಿಜೆಪಿ ಅಧಿಕಾರಕ್ಕೆ:** ಒನ್‌ವೇ ಸಂಚಾರ ನಿಯಮ ಉಲ್ಲಂಘನೆಗೆ 5 ಸಾವಿರ ದಂಡ ವಿಧಿಸುವ ಪ್ರಸ್ತಾಪದ ಕುರಿತು ಪ್ರತಿಕ್ರಿಯಿಸಿದ ಅವರು, ಕಾನೂನು ಉಲ್ಲಂಘಿಸುವವರ ವಿರುದ್ಧ ಕ್ರಮ ಕೈಗೊಳ್ಳುವುದಕ್ಕೆ ವಿರೋಧವಿಲ್ಲ. ಆದರೆ ದಂಡದ ಹೆಸರಿನಲ್ಲಿ ಜನರಿಂದ ಹಣ ವಸೂಲಿ ಮಾಡಿ ಅವರಿಗೆ ಹೊರೆಯಾಗಬಾರದು ಎಂದರು.

ರಾಜ್ಯದ ಜನರು ಮುಂದಿನ ಚುನಾವಣೆಯಲ್ಲಿ ಕಾಂಗ್ರೆಸ್ ಸರ್ಕಾರಕ್ಕೆ ತಕ್ಕ ಉತ್ತರ ನೀಡಲಿದ್ದಾರೆ.

ಕರ್ನಾಟಕ ದಕ್ಷಿಣ ಭಾರತದಲ್ಲಿ ಬಿಜೆಪಿಯ ಹೆಬ್ಬಾಗಿಲಾಗಿದ್ದು, ಮುಂದಿನ ದಿನಗಳಲ್ಲಿ ಬಿಜೆಪಿ ನೇತೃತ್ವದ ಎನ್‌ಡಿಎ ಸರ್ಕಾರ ಅಧಿಕಾರಕ್ಕೆ ಬರಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

**ಕಾರ್ಯಕರ್ತರಿಗೆ ಕರೆ:** ಪ್ರಧಾನಿ ನರೇಂದ್ರ ಮೋದಿ ಅವರ 25 ವರ್ಷಗಳ ಸಾರ್ವಜನಿಕ ಸೇವೆಯ ಹಿನ್ನೆಲೆಯಲ್ಲಿ ದೇಶಾದ್ಯಂತ ಸೇವಾ ಸಂಕಲ್ಪ ಅಭಿಯಾನ ಹಮ್ಮಿಕೊಳ್ಳಲಾಗಿದೆ. ಅವರಿಗೆ ಉತ್ತಮ ಆರೋಗ್ಯ ಮತ್ತು ದೀರ್ಘಾಯುಷ್ಯ ಲಭಿಸಿ ದೇಶವನ್ನು ಮುನ್ನಡೆಸುವ ಶಕ್ತಿ ದೊರೆಯಲಿ ಎಂದು ಪ್ರಾರ್ಥಿಸಿ ರಾಜ್ಯ ಪ್ರವಾಸ ಆರಂಭಿಸಲಾಗಿದೆ. ಬಂಗಾರಪೇಟೆ ಮತ್ತು ಕೆಜಿಎಫ್ ಕ್ಷೇತ್ರಗಳಲ್ಲಿ ಅಭಿಯಾನ ಮುಂದುವರಿಯಲಿದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಬಿಜೆಪಿ ರಾಜ್ಯ ಪ್ರಧಾನ ಕಾರ್ಯದರ್ಶಿಗಳಾದ ಪ್ರೀತಂ ಗೌಡ, ಎನ್.ಎಸ್. ನಂದೀಶ್ ರೆಡ್ಡಿ, ರಾಜ್ಯ ಕಾರ್ಯದರ್ಶಿಗಳಾದ ಎಚ್.ಸಿ. ತಮ್ಮೇಶ್ ಗೌಡ, ಅಂಬಿಕಾ ಹುಲಿನಾಯ್ಕರ್, ಜಿಲ್ಲಾಧ್ಯಕ್ಷ ಓಂಶಕ್ತಿ ಛಲಪತಿ, ಮಾಜಿ ಸಂಸದ ಎಸ್. ಮುನಿಸ್ವಾಮಿ, ಮಾಜಿ ಶಾಸಕರಾದ ವೈ. ಸಂಪಂಗಿ, ವರ್ತೂರು ಪ್ರಕಾಶ್ ಸೇರಿದಂತೆ ಪಕ್ಷದ ಮುಖಂಡರು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು.

## ಮಹಾತ್ಮ ಗಾಂಧಿ ಸೇವಾ ಪ್ರಶಸ್ತಿ: ಡಾ. ವೂಡೇ ಪಿ. ಕೃಷ್ಣ ಆಯ್ಕೆ

● ವಿಕ್ರಮ ವಾಹಿನಿ । ಬೆಂಗಳೂರು

ರಾಷ್ಟ್ರಪಿತ ಮಹಾತ್ಮ ಗಾಂಧೀಜಿಯವರ ದಿನಾಚರಣೆಯ ಅಂಗವಾಗಿ ನೀಡಲಾಗುವ ಪ್ರತಿಷ್ಠಿತ 'ಮಹಾತ್ಮ ಗಾಂಧಿ ಸೇವಾ ಪ್ರಶಸ್ತಿ–ಕರ್ನಾಟಕ' 2026 ಗೆ ಸುಪ್ರಸಿದ್ಧ ಸಮಾಜ ಸೇವಕ 'ಡಾ. ವೂಡೇ ಪಿ. ಕೃಷ್ಣ' ಅವರು ಭಾಜನರಾಗಿದ್ದಾರೆ.



ಕರ್ನಾಟಕ ಸರ್ಕಾರದ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ವತಿಯಿಂದ ರಾಜ್ಯಾದ್ಯಂತ ಗಾಂಧಿ ಜಯಂತಿಯನ್ನು ಅರ್ಥಪೂರ್ಣವಾಗಿ ಆಚರಿಸಲು ಹಾಗೂ ಗಾಂಧೀಜಿಯವರ ತತ್ವಾದರ್ಶಗಳನ್ನು ಪಾಲಿಸುತ್ತಿರುವ ಶ್ರೇಷ್ಠ ವ್ಯಕ್ತಿಗಳು ಅಥವಾ ಸಂಸ್ಥೆಗಳಿಗೆ ಈ ಪ್ರಶಸ್ತಿಯನ್ನು ನೀಡಿ ಗೌರವಿಸಲಾಗುತ್ತಿದೆ.

ಉಚ್ಚ ನ್ಯಾಯಾಲಯದ ನಿವೃತ್ತ ನ್ಯಾಯಮೂರ್ತಿ ಶ್ರೀ ಟಿ. ಜಿ. ಶಿವಶಂಕರೇಗೌಡ ಅವರ ಅಧ್ಯಕ್ಷತೆಯಲ್ಲಿ ರಚಿಸಲಾಗಿದ್ದ ಆಯ್ಕೆ ಸಮಿತಿಯು ದಿನಾಂಕ 23/09/2026 ರಂದು ಸಭೆ ನಡೆಸಿ ಪರಿಶೀಲನೆ ನಡೆಸಿತು. ಪ್ರಶಸ್ತಿಗಾಗಿ ಸ್ವೀಕರಿಸಲಾಗಿದ್ದ ಒಟ್ಟು 06 ಸಂಸ್ಥೆಗಳು ಹಾಗೂ 24 ವ್ಯಕ್ತಿಗಳ ಅರ್ಹತೆ ಹಾಗೂ ಸೇವಾ ವಿವರಗಳನ್ನು ಸುದೀರ್ಘವಾಗಿ ಪರಿಶೀಲಿಸಿದ ಸಮಿತಿಯು, ಡಾ. ವೂಡೇ ಪಿ. ಕೃಷ್ಣ ಅವರನ್ನು 2026ನೇ ಸಾಲಿನ ಪ್ರಶಸ್ತಿಗೆ ಸರ್ವಾನುಮತದಿಂದ ಆಯ್ಕೆ ಮಾಡಿದೆ. ಆಯ್ಕೆ ಸಮಿತಿಯ ವರದಿ ಹಾಗೂ ಶಿಫಾರಸ್ಸನ್ನು ಅಂಗೀಕರಿಸಿರುವ ಘನ ಸರ್ಕಾರವು, ಡಾ. ವೂಡೇ ಪಿ. ಕೃಷ್ಣ ಅವರಿಗೆ ಈ ಪ್ರಶಸ್ತಿಯನ್ನು ಘೋಷಿಸಲು ಹರ್ಷ ವ್ಯಕ್ತಪಡಿಸಿದೆ.

## ಸಂಗೀತ ವಿದ್ವಾನ್ ಪ್ರಶಸ್ತಿಗೆ ಗಾಯಕಿ ಡಾ. ಮೈಸೂರು ನಾಗಮಣಿ ಶ್ರೀನಾಥ್ ಆಯ್ಕೆ

● ವಿಕ್ರಮ ವಾಹಿನಿ । ಬೆಂಗಳೂರು

ಪ್ರತಿ ವರ್ಷ ಮೈಸೂರು ದಸರಾ ಉತ್ಸವದ ಸಂದರ್ಭದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆವತಿಯಿಂದ ನೀಡಲಾಗುವ ರಾಜ್ಯ ಸರ್ಕಾರದ ಪ್ರತಿಷ್ಠಿತ ಸಂಗೀತ ವಿದ್ವಾನ್ ಪ್ರಶಸ್ತಿಗೆ ಈ ಬಾರಿ ಪ್ರಸಿದ್ಧ ಗಾಯಕಿ ಡಾ. ಮೈಸೂರು ನಾಗಮಣಿ ಶ್ರೀನಾಥ್ ಅವರನ್ನು ಆಯ್ಕೆ ಮಾಡಲಾಗಿದೆ ಎಂದು ಹಿಂದುಳಿದ ವರ್ಗಗಳ ಕಲ್ಯಾಣ, ಕನ್ನಡ ಮತ್ತು ಸಂಸ್ಕೃತಿ ಸಚಿವ ಶಿವರಾಜ ತಂಗಡಗಿ ಹೇಳಿದ್ದಾರೆ.

ಪಂ. ಫಯಾಜ್ ಖಾನ್ ಅವರ ಅಧ್ಯಕ್ಷತೆಯಲ್ಲಿ ರಚನೆಯಾಗಿದ್ದ ಆಯ್ಕೆ ಸಮಿತಿ ಇವರನ್ನು ಆಯ್ಕೆ ಮಾಡಿದೆ. ನಾಗಮಣಿ ಶ್ರೀನಾಥ್ ಅವರು ರಾಷ್ಟ್ರ, ಅಂತರರಾಷ್ಟ್ರ ಮಟ್ಟದಲ್ಲಿ ಕರ್ನಾಟಕ ಶಾಸ್ತ್ರೀಯ ಸಂಗೀತ ಗಾಯನದಲ್ಲಿ ಹೆಸರು ಮಾಡಿದ್ದಾರೆ. ಮೈಸೂರು ವಿಶ್ವವಿದ್ಯಾನಿಲಯದ ಸಂಗೀತ ವಿಭಾಗದ ಮುಖ್ಯಸ್ಥರಾಗಿ ಹಾಗೂ ಪ್ರೊಫೆಸರ್ ಆಗಿ ಸೇವೆ ಸಲ್ಲಿಸಿದ್ದಾರೆ. ಸ್ವತಃ ನೂರಕ್ಕೂ ಹೆಚ್ಚು ಶಾಸ್ತ್ರೀಯ ಕೃತಿಗಳನ್ನು ಮತ್ತು ವರ್ಣಗಳನ್ನು



ರಚಿಸಿರುವ ಇವರು "ಸುನಾದ ಕಲ್ಚರಲ್ ಸೆಂಟರ್" ಸಂಗೀತ ಶಾಲೆಯ ಮೂಲಕ ನೂರಾರು ವಿದ್ಯಾರ್ಥಿಗಳಿಗೆ ತರಬೇತಿ ನೀಡಿದ್ದಾರೆ.

ಕರ್ನಾಟಕ ರಾಜ್ಯೋತ್ಸವ ಪ್ರಶಸ್ತಿ, ಕೇಂದ್ರ ಸಂಗೀತ ನಾಟಕ ಅಕಾಡೆಮಿ ಪ್ರಶಸ್ತಿ, ಕರ್ನಾಟಕ ಕಲಾಶ್ರೀ ಪ್ರಶಸ್ತಿ ಮುಂತಾದ ಪ್ರತಿಷ್ಠಿತ ಪುರಸ್ಕಾರಗಳಿಗೆ ಇವರು ಭಾಜನರಾಗಿದ್ದಾರೆ ಎಂದು ಅವರು ತಿಳಿಸಿದ್ದಾರೆ.

## ಎಸ್‌ಐಆರ್ ಹೆಸರಿನಲ್ಲಿ ಸರ್ಕಾರದ ಹೊಸ ನಾಟಕ: ಕುಮಾರಸ್ವಾಮಿ

● ವಿಕ್ರಮ ವಾಹಿನಿ । ಬೆಂಗಳೂರು

ಎಸ್‌ಐಆರ್ ಪ್ರಕ್ರಿಯೆ ಆರಂಭವಾದಾಗಲೇ ಅಕ್ರಮ ನಡೆಸಿದ ಕಾಂಗ್ರೆಸ್ ಇದೀಗ ಅದರ ವಿರುದ್ಧ ಪ್ರತಿಭಟನೆ ನಡೆಸುತ್ತಿರುವುದು 'ಭೂತದ ಬಾಯಲ್ಲಿ ಭಗವದ್ಗೀತೆ'ಯಂತಾಗಿದೆ ಎಂದು ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ಟೀಕಿಸಿದರು.



ನಗರದಲ್ಲಿ ಬುಧವಾರ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಮುಖ್ಯಮಂತ್ರಿ ಹಾಗೂ ಸಚಿವರು ಸಂಪುಟ ಸಭೆಯನ್ನೂ ಕಡೆಗಣಿಸಿ ರಸ್ತೆಯಲ್ಲಿ ಪ್ರತಿಭಟನೆ ನಡೆಸಿರುವುದು ಹಾಸ್ಯಾಸ್ಪದ. ಕಾಂಗ್ರೆಸ್ ನಾಯಕರು ಎಸ್‌ಐಆರ್ ವಿರುದ್ಧ ಅನಗತ್ಯವಾಗಿ 'ವೋಟ್ ಚೋರಿ' ಆರೋಪ ಮಾಡುತ್ತಿದ್ದಾರೆ ಎಂದು ದೂರಿದರು.

**ಗುಂಪುಗೂಡಿಸಿ ಮತಪಟ್ಟಿ ಪರಿಷ್ಕರಣೆ:** ಎಸ್‌ಐಆರ್ ಆರಂಭವಾದ ಸಂದರ್ಭದಲ್ಲಿ ಕಾಂಗ್ರೆಸ್ ನಾಯಕರು ಕಲ್ಯಾಣ ಮಂಟಪ, ಸಮುದಾಯ ಭವನ ಹಾಗೂ ಮನೆಗಳಲ್ಲಿ ಜನರನ್ನು ಗುಂಪುಗೂಡಿಸಿ ಮತದಾರರ ಪಟ್ಟಿ ಪರಿಷ್ಕರಣೆ ನಡೆಸಿದ್ದರು. ಈ ಬಗ್ಗೆ ಜೆಡಿಎಸ್ ಹಾಗೂ ಎನ್‌ಡಿಎ ನಾಯಕರು ಚುನಾವಣಾ ಆಯೋಗಕ್ಕೆ ದೂರು ನೀಡಿದ್ದರೂ ಯಾವುದೇ ಕ್ರಮವಾಗಲಿಲ್ಲ ಎಂದು ಕುಮಾರಸ್ವಾಮಿ ಹೇಳಿದರು. ತಮ್ಮ ಪಕ್ಷ ದೂರು ನೀಡಿದಾಗ ಎಸ್‌ಐಆರ್‌ನಲ್ಲಿ ಯಾವುದೇ ದೋಷವಿಲ್ಲ ಎಂದು ಮೌನವಾಗಿದ್ದ ಸರ್ಕಾರ, ಇದೀಗ ದೆಹಲಿ ನಾಯಕರ ಒತ್ತಡಕ್ಕೆ ಮಣಿದು ಪ್ರತಿಭಟನೆ ಆರಂಭಿಸಿದೆ ಎಂದು ಆರೋಪಿಸಿದರು.

**ನೈಸ್ ವಿಚಾರದಿಂದ ಗಮನ ಬೇರೆಡೆಗೆ?:** ನೈಸ್ ಯೋಜನೆಗೆ ಸಂಬಂಧಿಸಿದಂತೆ ಮುಖ್ಯಮಂತ್ರಿ ಹಾಗೂ ಅವರ ಕುಟುಂಬದ ವಿರುದ್ಧ ತಾವು ಇತ್ತೀಚೆಗೆ ದಾಖಲೆಗಳೊಂದಿಗೆ ಆರೋಪ ಮಾಡಿದ್ದು, ಈ ವಿಚಾರ ಸಾರ್ವಜನಿಕವಾಗಿ ಚರ್ಚೆಯಾಗುತ್ತಿರುವ ಸಂದರ್ಭದಲ್ಲಿ ಜನರ ಗಮನವನ್ನು ಬೇರೆಡೆಗೆ ಸೆಳೆಯಲು ಎಸ್‌ಐಆರ್ ವಿಷಯವನ್ನು ಮುನ್ನೆಲೆಗೆ ತರಲಾಗಿದೆ ಎಂದು ಕುಮಾರಸ್ವಾಮಿ ದೂರಿದರು.

ಎಸ್‌ಐಆರ್ ವಿಚಾರದಲ್ಲಿ ಸರ್ಕಾರದ ನಡೆ ರಾಜಕೀಯ ಪ್ರಹಸನವಾಗಿದೆ ಎಂದು ಟೀಕಿಸಿದ ಅವರು, ಮುಖ್ಯಮಂತ್ರಿ ಸಂಪುಟ ಸಭೆ ಬಿಟ್ಟು ರಸ್ತೆಗಿಳಿದು ಪ್ರತಿಭಟನೆ ನಡೆಸಿರುವುದು ಪ್ರಶ್ನಾರ್ಹ ಎಂದು ಹೇಳಿದರು.

ಕಾಂಗ್ರೆಸ್ ಸರ್ಕಾರ ಸ್ವತಂತ್ರವಾಗಿ ಆಡಳಿತ ನಡೆಸದೆ ದೆಹಲಿ ನಾಯಕರ ಸೂಚನೆಯಂತೆ ನಡೆದುಕೊಳ್ಳುತ್ತಿದೆ ಎಂದು ಕುಮಾರಸ್ವಾಮಿ ಆರೋಪಿಸಿದರು. ಅಹಿಂದ ಮತದಾರರ ಹಿತದ ಬಗ್ಗೆ ಮಾತನಾಡುವ ಸರ್ಕಾರವೇ ಸಂಪುಟದಲ್ಲಿ ಅಹಿಂದ ಸಮುದಾಯದ ಸಚಿವರಿಗೆ ಅನ್ಯಾಯ ಮಾಡುತ್ತಿದೆ ಎಂದು ದೂರಿದರು.

## ಗ್ಯಾರಂಟಿ ಸಮಿತಿ ರಚನೆಗೆ 15 ದಿನ ಗಡುವು

● ವಿಕ್ರಮ ವಾಹಿನಿ । ಬೆಂಗಳೂರು

ರಾಜ್ಯದ ಐದು ಗ್ಯಾರಂಟಿ ಯೋಜನೆಗಳು ಅರ್ಹ ಫಲಾನುಭವಿಗಳಿಗೆ ಪರಿಣಾಮಕಾರಿಯಾಗಿ ತಲುಪುವಂತೆ ಮಾಡಲು ಗ್ರಾಮ ಪಂಚಾಯಿತಿ ಹಾಗೂ ನಗರ ವಾರ್ಡ್ ಮಟ್ಟದಲ್ಲಿ ಗ್ಯಾರಂಟಿ ಸಮಿತಿಗಳನ್ನು ರಚಿಸಲು ಸರ್ಕಾರ 15 ದಿನಗಳ ಗಡುವು ನೀಡಿದೆ.

ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರ ಸೂಚನೆ ಮೇರೆಗೆ ಪ್ರಜಾಸೇವಾ ಇಲಾಖೆ ಆದೇಶ ಹೊರಡಿಸಿದ್ದು, ಗ್ರಾಮ ಪಂಚಾಯಿತಿ ಸಮಿತಿ ರಚನೆಯ ಜವಾಬ್ದಾರಿಯನ್ನು ಜಿಪಂ ಸಿಇಒಗಳಿಗೆ ಹಾಗೂ ನಗರ ವಾರ್ಡ್ ಸಮಿತಿಗಳ ರಚನೆ ಹೊಣೆಯನ್ನು ಜಿಲ್ಲಾಧಿಕಾರಿಗಳಿಗೆ ವಹಿಸಲಾಗಿದೆ.

ಪ್ರತಿ ಸಮಿತಿಯಲ್ಲಿ ಆರು ಸದಸ್ಯರಿದ್ದು, ಎಸ್‌ಸಿ/ಎಸ್‌ಟಿ, ಅಲ್ಪಸಂಖ್ಯಾತರು, ಮಹಿಳೆಯರು, ಹಿಂದುಳಿದ ಹಾಗೂ ಸಾಮಾನ್ಯ ವರ್ಗಗಳಿಗೆ ಪ್ರಾತಿನಿಧ್ಯ ಕಲ್ಪಿಸಲಾಗುತ್ತದೆ. ಅಲ್ಪಸಂಖ್ಯಾತರ ಪ್ರಾತಿನಿಧ್ಯ ಸಾಧ್ಯವಾಗದಿದ್ದರೆ ಸಾಮಾನ್ಯ ವರ್ಗದಿಂದ ಸದಸ್ಯರನ್ನು ನೇಮಿಸಲು ಅವಕಾಶವಿದೆ.

15 ದಿನಗಳಲ್ಲಿ ನೇಮಕಾತಿ ಪೂರ್ಣಗೊಳ್ಳದಿದ್ದರೆ ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷರೇ ಅಧ್ಯಕ್ಷರು ಹಾಗೂ ಸದಸ್ಯರನ್ನು ನೇಮಿಸಲಿದ್ದಾರೆ. ಸ್ಥಳೀಯ ಮಟ್ಟದಲ್ಲಿ ಯೋಜನೆಗಳ ಅನುಷ್ಠಾನ ಪರಿಶೀಲಿಸುವುದು ಹಾಗೂ ಫಲಾನುಭವಿಗಳ ಸಮಸ್ಯೆ ಪರಿಹರಿಸುವುದು ಸಮಿತಿಗಳ ಉದ್ದೇಶವಾಗಿದೆ.

## 'ಗ್ರಂಥ ಕಥಾ' ಆ್ಯನಿಮೇಷನ್ ಕಿರುಚಿತ್ರ ಬಿಡುಗಡೆ

● ವಿಕ್ರಮ ವಾಹಿನಿ । ಮೈಸೂರು

ಅಪರೂಪದ ಹಸ್ತಪ್ರತಿಗಳು, ತಾಳೆಗರಿಗಳು ಹಾಗೂ ಸಾಹಿತ್ಯ ಕೃತಿಗಳ ಸಂಗ್ರಹ ಹೊಂದಿರುವ ಮೈಸೂರಿನ ಪ್ರಾಚ್ಯವಿದ್ಯಾ ಸಂಶೋಧನಾಲಯ (ಓಆರ್‌ಐ) ಪ್ರಾಚೀನ ಜ್ಞಾನ ಪರಂಪರೆಯ ಅರಿವು ಮೂಡಿಸುವ ನಿಟ್ಟಿನಲ್ಲಿ ಮಹತ್ವದ ಹೆಜ್ಜೆ ಇಟ್ಟಿದೆ.

ನಗರದ ಇನ್ಫೋಸಿಸ್ ಸಭಾಂಗಣದಲ್ಲಿ ನಡೆದ ಕಾರ್ಯಕ್ರಮದಲ್ಲಿ ಮೈಸೂರು ವಿಶ್ವವಿದ್ಯಾಲಯದ ಕುಲಪತಿ ಪ್ರೊ. ಕೆ.ಎನ್. ಲೋಕನಾಥ್ ಅವರು 'ಗ್ರಂಥ ಕಥಾ' ಆ್ಯನಿಮೇಷನ್ ಕಿರುಚಿತ್ರ ಹಾಗೂ ಡಾ. ಎಸ್.ಸಿ. ಶೋಭಾ ಸಂಪಾದಿಸಿರುವ 'ವೀರಭದ್ರ ವಿಜಯ ಚಂಪೂ' ಕೃತಿಯನ್ನು ಬಿಡುಗಡೆಗೊಳಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಪ್ರೊ. ಲೋಕನಾಥ್, ಚಿಕ್ಕಮಕ್ಕಳಿಂದ ಹಿಡಿದು ಎಲ್ಲ ವರ್ಗದವರಿಗೂ ಆಪ್ತವಾಗುವ ರೀತಿಯಲ್ಲಿ ರೂಪಿಸಿರುವ 'ಗ್ರಂಥ ಕಥಾ' ಕಿರುಚಿತ್ರವು ಹಸ್ತಪ್ರತಿಗಳ ಮಹತ್ವದ ಕುರಿತು ಅರಿವು ಮೂಡಿಸಲಿದೆ ಎಂದರು. ಚಿತ್ರದ ಕನ್ನಡ ಮತ್ತು ಇಂಗ್ಲಿಷ್ ಅವತರಣಿಕೆಗಳು ಶೀಘ್ರದಲ್ಲೇ ಯೂಟ್ಯೂಬ್‌ನಲ್ಲಿ ಲಭ್ಯವಾಗಲಿದ್ದು, ಜಾಗತಿಕವಾಗಿ ಜನರಿಗೆ ತಲುಪಲಿವೆ ಎಂದು ತಿಳಿಸಿದರು.

**ಸಂಸ್ಕೃತಿ–ತಂತ್ರಜ್ಞಾನ ಸಮ್ಮಿಲನ:** ಇನ್ಫೋಸಿಸ್ ಹಿರಿಯ ಉಪಾಧ್ಯಕ್ಷ ಹಾಗೂ ಮೈಸೂರು ಕ್ಯಾಂಪಸ್ ಮುಖ್ಯಸ್ಥ ಸತೀಶ ಬಿ. ನಂಜಪ್ಪ ಮಾತನಾಡಿ, ಪೂರ್ವಜರ ಜ್ಞಾನ ಸಂಪತ್ತನ್ನು ಮುಂದಿನ ಪೀಳಿಗೆಗೆ ತಲುಪಿಸಲು ಹಸ್ತಪ್ರತಿಗಳ ಸಂರಕ್ಷಣೆ ಮತ್ತು ತಾಳೆಗರಿಗಳ ಡಿಜಿಟಲೀಕರಣ ಅಗತ್ಯ. ಸಂಸ್ಕೃತಿ ಮತ್ತು ತಂತ್ರಜ್ಞಾನದ ಸಮ್ಮಿಲನದ ಮೂಲಕ ಯುವಜನರಿಗೆ ಪ್ರಾಚೀನ ಜ್ಞಾನ ಪರಿಚಯಿಸುವ ಕಾರ್ಯ ನಡೆಯಬೇಕು ಎಂದರು.



ನಗರದ ಇನ್ಫೋಸಿಸ್ ಸಭಾಂಗಣದಲ್ಲಿ ಪ್ರಾಚ್ಯ ವಿದ್ಯಾ ಸಂಶೋಧನಾಲಯವು ಹಮ್ಮಿಕೊಂಡಿದ್ದ ಸಮಾರಂಭದಲ್ಲಿ 'ಗ್ರಂಥ ಕಥಾ' ಆ್ಯನಿಮೇಷನ್ ಫಿಲಂ ಮತ್ತು 'ವೀರಭದ್ರ ವಿಜಯ ಚಂಪೂ' ಕೃತಿಯನ್ನು ಬಿಡುಗಡೆಗೊಳಿಸಲಾಯಿತು. ಮೈಸೂರು ವಿವಿ ಕುಲಪತಿ ಪ್ರೊ. ಕೆ.ಎನ್. ಲೋಕನಾಥ್, ಓಆರ್‌ಐ ನಿರ್ದೇಶಕ ಡಾ. ಡಿ.ಪಿ. ಮಧುಸೂದನ ಆಚಾರ್ಯ, ಇನ್ಫೋಸಿಸ್ ಹಿರಿಯ ಉಪಾಧ್ಯಕ್ಷ ಸತೀಶ ಬಿ. ನಂಜಪ್ಪ, ಆಯುಕ್ತ ಎ. ದೇವರಾಜು, ಡಾ. ಪಾರ್ವತಿ, ಪ್ರೊ. ಎನ್. ನಾಗರಾಜ್ ಇದ್ದರು.

ಪುರಾತತ್ವ, ವಸ್ತುಸಂಗ್ರಹಾಲಯಗಳು ಮತ್ತು ಪರಂಪರೆ ಇಲಾಖೆ ಆಯುಕ್ತ ಎ. ದೇವರಾಜು, ಹಸ್ತಪ್ರತಿಗಳ ಕುರಿತು ಜನಸಾಮಾನ್ಯರಲ್ಲಿ ಅರಿವು ಮೂಡಿಸುವ ನಿಟ್ಟಿನಲ್ಲಿ 'ಗ್ರಂಥ ಕಥಾ' ವಿನೂತನ ಪ್ರಯತ್ನವಾಗಿದೆ. ದೇಶದಲ್ಲೇ ಈ ರೀತಿಯ ಮೊದಲ ಪ್ರಯತ್ನವಾಗಿರುವುದು ವಿಶೇಷ ಎಂದು ಶ್ಲಾಘಿಸಿದರು.

ಓಆರ್‌ಐ ನಿರ್ದೇಶಕ ಡಾ. ಡಿ.ಪಿ. ಮಧುಸೂದನ ಆಚಾರ್ಯ ಮಾತನಾಡಿ, ಕಿರುಚಿತ್ರ ನಿರ್ಮಾಣಕ್ಕೆ ಇನ್ಫೋಸಿಸ್ ಫೌಂಡೇಷನ್ ಹಾಗೂ ಸೈಕಲ್ ಪ್ಯೂರ್ ಅಗರಬತ್ತಿ ಸಂಸ್ಥೆಗಳು ಸಹಕಾರ ನೀಡಿವೆ. ನಿರ್ದೇಶಕ ಅವನೀಶ ಪಾಠಕ್, ಇನ್ಫೋಸಿಸ್ ಸ್ಪ್ರಿಂಗ್‌ಬೋರ್ಡ್ ಮುಖ್ಯಸ್ಥ ಸಂತೋಷ ಅನಂತಪುರ ಸೇರಿದಂತೆ ಹಲವರ ಸಹಕಾರವನ್ನು ಸ್ಮರಿಸಿದರು.

**ಸಾಧಕರಿಗೆ ಸನ್ಮಾನ:** ಕಾರ್ಯಕ್ರಮದಲ್ಲಿ 'ಗ್ರಂಥ ಕಥಾ' ನಿರ್ದೇಶಕ ಅವನೀಶ ಪಾಠಕ್, ನಿರ್ಮಾಣ ಸಹಾಯಕ ಡಿ.ವಿ. ಸಾಗರ್, ಚಿತ್ರಕಥೆ ರಚಿಸಿದ ಡಾ. ದಿದ್ದಿಗಿ ವಂಶಿಕೃಷ್ಣ, ಡಾ. ಕೃಷ್ಣ ನಾಗಸಂಪಿಗೆ, ಪರಿಕಲ್ಪನೆ ನೀಡಿದ ವಿದ್ವಾನ್ ವೆಂಕಟೇಶ ಕುಲಕರ್ಣಿ ಹಾಗೂ ಹಿನ್ನೆಲೆ ಧ್ವನಿ ನೀಡಿದ ಶ್ರೀನಿವಾಸ ಕಾರಂತ, ಪವನ್ ಆರ್. ರಾವ್, ಪ್ರಮೋದ ಹೆಬ್ಬಣಿ ಮತ್ತು ಬಾಲ ಪ್ರತಿಭೆ ಹರಿ ಪಿ. ರಾವ್ ಅವರನ್ನು ಸನ್ಮಾನಿಸಲಾಯಿತು.

ಓಆರ್‌ಐ ಉಪ ನಿರ್ದೇಶಕಿ ಡಾ. ಪಾರ್ವತಿ, ವಿವಿ ಪರೀಕ್ಷಾಂಗ ಕುಲಸಚಿವ ಪ್ರೊ. ಎನ್. ನಾಗರಾಜ್, ಗ್ರಂಥ ಸಂಶೋಧಕಿ ಡಾ. ಎಸ್.ಸಿ. ಶೋಭಾ ಸೇರಿದಂತೆ ಹಲವರು ಉಪಸ್ಥಿತರಿದ್ದರು.

## ರಾಜ್ಯ ಸಂಕಷ್ಟದಲ್ಲಿದೆ, ಆಡಳಿತ ಮಾಡಿ ರಾಜಕೀಯ ಬಿಡಿ: ಸುನಿಲ್ ಕುಮಾರ್

● ವಿಕ್ರಮ ವಾಹಿನಿ । ಬೆಂಗಳೂರು

ರಾಜ್ಯ ತೀವ್ರ ಬರಗಾಲದಿಂದ ಸಂಕಷ್ಟದಲ್ಲಿರುವ ಸಂದರ್ಭದಲ್ಲಿ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ಸಚಿವರೊಂದಿಗೆ ರಾಜ್ಯ ಮುಖ್ಯ ಚುನಾವಣಾಧಿಕಾರಿ ಕಚೇರಿ ಎದುರು ರಾಜಕೀಯ ಪ್ರತಿಭಟನೆ ನಡೆಸುತ್ತಿರುವುದು ಸರಿಯಲ್ಲ ಎಂದು ಕಾರ್ಕಳ ಶಾಸಕ, ಮಾಜಿ ಸಚಿವ ವಿ.ಸುನಿಲ್ ಕುಮಾರ್ ಟೀಕಿಸಿದ್ದಾರೆ.

ಸರ್ಕಾರ ಗ್ಯಾರಂಟಿ ಯೋಜನೆಗಳ ಜತೆಗೆ ವಿಧವಾ ಹಾಗೂ ಅಂಗವಿಕಲರ ಪಿಂಚಣಿಯನ್ನು ಕಾಲಕಾಲಕ್ಕೆ ಪರಿಷ್ಕರಿಸುತ್ತಿದೆ. ಅದೇ ರೀತಿ ಮತದಾರರ ಪಟ್ಟಿ ಪರಿಷ್ಕರಣೆ ಪ್ರಕ್ರಿಯೆ ನಡೆಯಬಾರದು ಎಂದು ಕಾಂಗ್ರೆಸ್ ವಿರೋಧಿಸುತ್ತಿರುವುದು ಎಷ್ಟು ಸರಿ ಎಂದು ಅವರು ಪ್ರಶ್ನಿಸಿದ್ದಾರೆ. ಫಾರಂ–7ರ ಮೂಲಕ ಸಲ್ಲಿಕೆಯಾಗುವ ಆಕ್ಷೇಪಗಳನ್ನು ಪರಿಶೀಲಿಸಿ ಇತ್ಯರ್ಥಪಡಿಸುವ ಜವಾಬ್ದಾರಿ ಚುನಾವಣಾಧಿಕಾರಿಗಳದ್ದೇ ಹೊರತು ಕಾಂಗ್ರೆಸ್ ನಾಯಕರದ್ದಲ್ಲ. ಚುನಾವಣಾ ಅಕ್ರಮಕ್ಕೆ ಅವಕಾಶ ಕಲ್ಪಿಸುವ ಉದ್ದೇಶದಿಂದ ಕಾಂಗ್ರೆಸ್ ಎಸ್‌ಐಆರ್ ವಿರೋಧಿಸುತ್ತಿದೆ ಎಂದು ಅವರು ಆರೋಪಿಸಿದ್ದಾರೆ.

ರಾಜ್ಯ ಸಂಕಷ್ಟದಲ್ಲಿರುವಾಗ ಮುಖ್ಯಮಂತ್ರಿ ಆಡಳಿತದತ್ತ ಗಮನಹರಿಸಬೇಕು. "ಸಿಎಂ ಡಿ.ಕೆ.ಶಿವಕುಮಾರ್ ಅವರೇ, ಆಡಳಿತ ಮಾಡಿ, ರಾಜಕೀಯ ಬಿಡಿ" ಎಂದು ಸುನಿಲ್ ಕುಮಾರ್ ಆಗ್ರಹಿಸಿದ್ದಾರೆ.

## ಮಳೆ ಕೊರತೆ: ಗ್ರಾಮೀಣ ಅಂತರ್ಜಲ ಮಟ್ಟದ ವಿವರ ಸಂಗ್ರಹಕ್ಕೆ ಖಂಡ್ರೆ ಸೂಚನೆ



● ವಿಕ್ರಮ ವಾಹಿನಿ । ಬೆಂಗಳೂರು

ಮಳೆಯ ಕೊರತೆಯಿಂದ ಗ್ರಾಮೀಣ ಭಾಗದಲ್ಲಿ ಕುಡಿಯುವ ನೀರಿನ ಸಮಸ್ಯೆ ಉಲ್ಬಣಿಸುತ್ತಿರುವ ಹಿನ್ನೆಲೆಯಲ್ಲಿ 5927 ಪಂಚಾಯತಿಗಳ ವ್ಯಾಪ್ತಿಯಲ್ಲಿ ಅಂತರ್ಜಲ ಮಟ್ಟದ ವಿವರವನ್ನು ಸಮರೋಪಾದಿಯಲ್ಲಿ ಸಂಗ್ರಹಿಸುವಂತೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ ಬಿ ಖಂಡ್ರೆ ಸೂಚನೆ ನೀಡಿದ್ದಾರೆ.

ವಿಕಾಸಸೌಧದಲ್ಲಿಂದು ಹಿರಿಯ ಅಧಿಕಾರಿಗಳೊಂದಿಗೆ ಸಭೆ ನಡೆಸಿದ ಅವರು, ಕುಡಿಯುವ ನೀರಿನ ಸಮಸ್ಯೆ ಇರುವ ಗ್ರಾಮಗಳ ಸಂಖ್ಯೆಯಲ್ಲಿ ದಿನದಿಂದ ದಿನಕ್ಕೆ ಹೆಚ್ಚಳ ಆಗುತ್ತಿದೆ. ಬೇಸಿಗೆಯಲ್ಲಿ ಪರಿಸ್ಥಿತಿ ಇನ್ನೂ ಬಿಗಡಾಯಿಸುತ್ತದೆ. ಹೀಗಾಗಿ ಮುಂದಿನ ಮುಂಗಾರಿನವರೆಗೆ ಎದುರಾಗಬಹುದಾದ ಕುಡಿಯುವ ನೀರಿನ ಸಮಸ್ಯೆಯನ್ನು ಅಂದಾಜಿಸಿ, ಸಮರ್ಪಕ ಯೋಜನೆ ರೂಪಿಸಿ ಎಂದು ನಿರ್ದೇಶನ ನೀಡಿದರು.

ಪ್ರಸ್ತುತ ಎಷ್ಟು ಗ್ರಾಮಗಳಿಗೆ ಕೊಳವೆ ಬಾವಿ ಮೂಲಕ ಕುಡಿಯುವ ನೀರು ಪೂರೈಸಲಾಗುತ್ತಿದೆ. ಬೇಸಿಗೆಯಲ್ಲಿ ಎಷ್ಟು ಕೊಳವೆ ಬಾವಿಗಳು ಬತ್ತಿಹೋಗುವ ಸಾಧ್ಯತೆ ಇದೆ.

ಇಲ್ಲಿ ಪರ್ಯಾಯ ಜಲ ಮೂಲವೇನು. ಮೇಲ್ಮೈ ನೀರಿನ ಲಭ್ಯತೆ ಇದ್ದಲ್ಲಿ ಅಥವಾ ಖಾಸಗಿ ಕೊಳವೆ ಬಾವಿಗಳನ್ನು ಬಾಡಿಗೆಗೆ ಪಡೆದರೆ ಜಲ ಪೂರೈಕೆಗೆ ಎಷ್ಟು ಟ್ಯಾಂಕರ್ ಗಳನ್ನು ಬಾಡಿಗೆಗೆ ಪಡೆಯಬೇಕಾಗುತ್ತದೆ ಎಂಬ ಸಂಪೂರ್ಣ ಯೋಜನೆ ರೂಪಿಸುವಂತೆ ತಿಳಿಸಿದರು.

ಅಂತರ್ಜಲ ಹಾಗೂ ಮೇಲ್ಮೈ ಜಲ ಎರಡೂ ಲಭ್ಯವಿಲ್ಲದಂತಹ ಸೂಕ್ಷ್ಮ ಪ್ರದೇಶಗಳಿಗೆ ಸಮೀಪದಲ್ಲಿ ಎಲ್ಲಿ ನೀರಿನ ಲಭ್ಯತೆ ಇದೆ. ಅದನ್ನು ಗ್ರಾಮಗಳಿಗೆ ಪೂರೈಸಲು ಏನೆಲ್ಲಾ ಕ್ರಮ ಕೈಗೊಳ್ಳಬೇಕು ಎಂಬ ಬಗ್ಗೆ ಈಗಿನಿಂದಲೇ ಯೋಜನೆ ರೂಪಿಸುವಂತೆ ತಿಳಿಸಿದರು.

**ಹಿತಮಿತವಾಗಿ ನೀರು ಬಳಸಲು ಜಾಗೃತಿ ಮೂಡಿಸಿ:**

ರಾಜ್ಯದ ಬಹುತೇಕ ಕಡೆ ಮಳೆಯ ಕೊರತೆಯಿಂದ ಕುಡಿಯುವ ನೀರಿನ ಸಮಸ್ಯೆ ಇದ್ದು, ಗ್ರಾಮೀಣ ಜನರಿಗೆ, ಕೈಗಾರಿಕೆ, ಶಾಲೆ, ಕಾಲೇಜು, ವಿವಿಧ ಸಂಸ್ಥೆಗಳಿಗೆ ಹಿತಮಿತವಾಗಿ ನೀರು ಬಳಸುವಂತೆ ಜಾಗೃತಿ ಮೂಡಿಸಲು ಈಶ್ವರ ಖಂಡ್ರೆ ಸೂಚಿಸಿದರು.

## ಮಡಗಾಂವ್–ಮಂಗಳೂರು ವಂದೇ ಭಾರತ್ ಬೆಂಗಳೂರಿಗೆ ವಿಸ್ತರಣೆ

● ವಿಕ್ರಮ ವಾಹಿನಿ । ನವದೆಹಲಿ

ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ಅವರ ಮನವಿಗೆ ಸ್ಪಂದಿಸಿರುವ ರೈಲ್ವೆ ಸಚಿವಾಲಯ, ಮಡಗಾಂವ್–ಮಂಗಳೂರು ವಂದೇ ಭಾರತ್ ಎಕ್ಸ್‌ಪ್ರೆಸ್ ರೈಲನ್ನು ಬೆಂಗಳೂರಿನವರೆಗೆ ವಿಸ್ತರಿಸಿದೆ. ರೈಲು ಹಾಸನ, ಮಂಗಳೂರು, ಉಡುಪಿ ಹಾಗೂ ಕಾರವಾರ ಮಾರ್ಗವಾಗಿ ಸಂಚರಿಸಲಿದೆ.

ಬೆಂಗಳೂರು–ಕರಾವಳಿ ಕರ್ನಾಟಕ–ಗೋವಾ ನಡುವೆ ವೇಗದ ರೈಲು ಸಂಪರ್ಕ ಕಲ್ಪಿಸುವಂತೆ ಕುಮಾರಸ್ವಾಮಿ ಅವರು ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ಅವರಿಗೆ ಮನವಿ ಸಲ್ಲಿಸಿದ್ದರು. ಪ್ರವಾಸೋದ್ಯಮ, ಧಾರ್ಮಿಕ ಯಾತ್ರೆ, ಶಿಕ್ಷಣ, ಉದ್ಯೋಗ ಹಾಗೂ ವ್ಯಾಪಾರ ಉದ್ದೇಶಗಳಿಗಾಗಿ ಈ ಮಾರ್ಗದಲ್ಲಿ ಸಂಚರಿಸುವವರಿಗೆ ಅನುಕೂಲವಾಗಲಿದೆ ಎಂದು ಮನವಿಯಲ್ಲಿ ತಿಳಿಸಿದ್ದರು.

ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ಅವರು ಸೆ.28ರಂದು ಕುಮಾರಸ್ವಾಮಿ ಅವರಿಗೆ ಬರೆದ ಪತ್ರದಲ್ಲಿ ಸೇವೆ ವಿಸ್ತರಣೆಯನ್ನು ದೃಢಪಡಿಸಿದ್ದಾರೆ. ಪರಿಷ್ಕೃತ ವೇಳಾಪಟ್ಟಿಯೊಂದಿಗೆ ರೈಲು ಸಂಖ್ಯೆ 26655/26656 'ಯಶವಂತಪುರ–ಮಂಗಳೂರು–ಮಡಗಾಂವ್ ವಂದೇ ಭಾರತ್ ಎಕ್ಸ್‌ಪ್ರೆಸ್' ಹೆಸರಿನಲ್ಲಿ ಸಂಚರಿಸಲಿದೆ.

ಈ ವಿಸ್ತರಣೆಯಿಂದ ಬೆಂಗಳೂರು, ಹಾಸನ, ಮಂಗಳೂರು, ಉಡುಪಿ, ಕಾರವಾರ ಹಾಗೂ ಗೋವಾದ ಮಡಗಾಂವ್ ನಡುವೆ ವೇಗದ ರೈಲು ಸಂಪರ್ಕ ಕಲ್ಪಿಸಿದಂತಾಗಿದೆ. ಇದರಿಂದ ಕರಾವಳಿ ಕರ್ನಾಟಕ ಮತ್ತು ಗೋವಾ ನಡುವಿನ ಪ್ರವಾಸೋದ್ಯಮ, ವ್ಯಾಪಾರ ಹಾಗೂ ಅಂತಾರಾಜ್ಯ ಪ್ರಯಾಣಕ್ಕೆ ಅನುಕೂಲವಾಗಲಿದೆ.

## ಚುನಾವಣಾ ಆಯೋಗದ ಎದುರು ಸಿಎಂ ಧರಣಿ ಖಂಡನೀಯ: ನಿಖಿಲ್

● ವಿಕ್ರಮ ವಾಹಿನಿ । ರಾಮನಗರ

ಚುನಾವಣಾ ಆಯೋಗದ ಎದುರು ಮುಖ್ಯಮಂತ್ರಿ ಹಾಗೂ ಕಾಂಗ್ರೆಸ್ ನಾಯಕರು ನಡೆಸುತ್ತಿರುವ ಧರಣಿ ಸೋಲಿನ ಭಯದಿಂದ ಮಾಡುತ್ತಿರುವ ಹತಾಶೆಯ ನಾಟಕ ಎಂದು ಜೆಡಿಎಸ್ ಯುವ ಘಟಕದ ರಾಜ್ಯಾಧ್ಯಕ್ಷ ನಿಖಿಲ್ ಕುಮಾರಸ್ವಾಮಿ ಟೀಕಿಸಿದರು.

ನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಚುನಾವಣಾ ಆಯೋಗ ಸ್ವತಂತ್ರ ಹಾಗೂ ಸಂವಿಧಾನಬದ್ಧ ಸಂಸ್ಥೆ. ಹಲವು ರಾಜ್ಯಗಳಲ್ಲಿ ವಿಶೇಷ ತೀವ್ರ ಪರಿಷ್ಕರಣೆ (ಎಸ್‌ಐಆರ್) ಪ್ರಕ್ರಿಯೆ ನಡೆದಿದೆ. ಆದರೆ ಕಾಂಗ್ರೆಸ್‌ಗೆ ಸೋಲಿನ ಭಯ ಆರಂಭವಾಗಿರುವುದರಿಂದಲೇ ಇದೀಗ ಆಯೋಗದ ವಿರುದ್ಧ ಪ್ರತಿಭಟನೆ ನಡೆಸುತ್ತಿದೆ ಎಂದು ಆರೋಪಿಸಿದರು.

**'ಭಾರತ್ ಜೋಡೋ 2.0' ಟೀಕೆ:** ಸರಣಿ ಚುನಾವಣೆಗಳಲ್ಲಿ ಹಿನ್ನಡೆ ಅನುಭವಿಸಿರುವ ಕಾಂಗ್ರೆಸ್, ಕರ್ನಾಟಕವನ್ನು ಉಳಿಸಿಕೊಳ್ಳಲು ಪ್ರತಿಭಟನೆ ಹಾಗೂ ಧರಣಿಯ ಮೊರೆ ಹೋಗಿದೆ. ರಾಜ್ಯದಲ್ಲೂ ಸೋಲಿನ ಭೀತಿ ಎದುರಾಗಿರುವುದರಿಂದ 'ಭಾರತ್ ಜೋಡೋ 2.0' ಹೆಸರಿನಲ್ಲಿ ಜನರನ್ನು ದಾರಿ ತಪ್ಪಿಸುವ ಪ್ರಯತ್ನ ನಡೆಸುತ್ತಿದೆ ಎಂದು ನಿಖಿಲ್ ದೂರಿದರು.

**ಚೆನ್ನಮ್ಮ ವಿಚಾರದಲ್ಲಿ ರಾಜಕೀಯ ಬೇಡ:** ಸಚಿವ ಎಚ್.ಸಿ.ಬಾಲಕೃಷ್ಣ ಅವರು ಚೆನ್ನಮ್ಮ ಅವರಿಗೆ ಆದಾಯ ತೆರಿಗೆ ನೋಟಿಸ್ ನೀಡಿರುವ ಕುರಿತು ಮಾಡಿರುವ ಆರೋಪಗಳಲ್ಲಿ ಯಾವುದೇ ಹುರುಳಿಲ್ಲ. ತೆರಿಗೆ ಪಾವತಿಯಲ್ಲಿ ವಿಳಂಬವಾದಾಗ ಆದಾಯ ತೆರಿಗೆ ಇಲಾಖೆ ನೋಟಿಸ್



ನೀಡುವುದು ಸಾಮಾನ್ಯ ಪ್ರಕ್ರಿಯೆ. ಇದನ್ನೇ ದೊಡ್ಡ ಅಪರಾಧದಂತೆ ಬಿಂಬಿಸಿ ರಾಜಕೀಯ ಲಾಭ ಪಡೆಯುವುದು ಸರಿಯಲ್ಲ ಎಂದು ಹೇಳಿದರು.

ಈ ವಿಚಾರದಲ್ಲಿ ಮಾಜಿ ಶಾಸಕ ಎ.ಮಂಜುನಾಥ್ ಅವರು ಈಗಾಗಲೇ ದಾಖಲೆಗಳೊಂದಿಗೆ ಸ್ಪಷ್ಟನೆ ನೀಡಿದ್ದಾರೆ. ಹಿರಿಯರ ಹೆಸರನ್ನು ರಾಜಕೀಯ ದ್ವೇಷಕ್ಕಾಗಿ ಎಳೆದು ತರುವುದು ಖಂಡನೀಯ ಎಂದು ನಿಖಿಲ್ ಹೇಳಿದರು.

**ಎನ್‌ಡಿಎ ಗೆಲುವಿಗೆ ಒಗ್ಗಟ್ಟಿನ ಕರೆ:** ಬೆಂಗಳೂರು ಶಿಕ್ಷಕರ ಕ್ಷೇತ್ರದ ವಿಧಾನ ಪರಿಷತ್ ಚುನಾವಣೆ ಹಿನ್ನೆಲೆಯಲ್ಲಿ ರಾಮನಗರದಲ್ಲಿ ನಡೆದ ಎನ್‌ಡಿಎ ಸಮನ್ವಯ ಸಭೆಯಲ್ಲಿ ನಿಖಿಲ್ ಕುಮಾರಸ್ವಾಮಿ ಪಾಲ್ಗೊಂಡರು. ಮತದಾರರ ಪಟ್ಟಿ, ಶಿಕ್ಷಕರ ಬೇಡಿಕೆಗಳು ಹಾಗೂ ಎನ್‌ಡಿಎ ಅಭ್ಯರ್ಥಿ ಎ.ಪಿ.ರಂಗನಾಥ್ ಪರ ಕೈಗೊಳ್ಳಬೇಕಾದ ಕಾರ್ಯತಂತ್ರಗಳ ಕುರಿತು ಸಭೆಯಲ್ಲಿ ಚರ್ಚಿಸಲಾಯಿತು. ಬಿಜೆಪಿ–ಜೆಡಿಎಸ್ ಕಾರ್ಯಕರ್ತರು ಭಿನ್ನಾಭಿಪ್ರಾಯ ಮರೆತು ಒಗ್ಗಟ್ಟಿನಿಂದ ಕೆಲಸ ಮಾಡಬೇಕು. ಶಿಕ್ಷಕರನ್ನು ವೈಯಕ್ತಿಕವಾಗಿ ಸಂಪರ್ಕಿಸಿ ಎನ್‌ಡಿಎ ಸರ್ಕಾರಗಳ ಸಾಧನೆಗಳನ್ನು ತಿಳಿಸಿ ಅಭ್ಯರ್ಥಿ ಪರ ಮತಯಾಚಿಸಬೇಕು ಎಂದು ನಿಖಿಲ್ ಕರೆ ನೀಡಿದರು.

ಸಭೆಯಲ್ಲಿ ಸಂಸದ ಮಂಜುನಾಥ್, ವಿರೋಧ ಪಕ್ಷದ ನಾಯಕ ಆರ್.ಅಶೋಕ್, ಮಾಜಿ ವಿಧಾನ ಪರಿಷತ್ ಸದಸ್ಯ ದೇವೇಗೌಡ, ಜೆಡಿಎಸ್ ಜಿಲ್ಲಾಧ್ಯಕ್ಷ ಜಯಮುತ್ತು, ಬಿಜೆಪಿ ಜಿಲ್ಲಾಧ್ಯಕ್ಷ ಆನಂದಸ್ವಾಮಿ ಸೇರಿದಂತೆ ಹಲವು ಮುಖಂಡರು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು.

## ಪರಪ್ಪನ ಅಗ್ರಹಾರದಲ್ಲಿ ಮತ್ತೆ ಮೊಬೈಲ್, ಸಿಮ್ ಕಾರ್ಡ್ ಪತ್ತೆ

1ನೇ ಪುಟದಿಂದ

ಎಷ್ಟೆ ಕಟ್ಟುನಿಟ್ಟಿನ ನಿಯಮಗಳನ್ನು ಜಾರಿಗೆ ತಂದರೂ ಪರಪ್ಪನ ಅಗ್ರಹಾರ ಜೈಲಿನಲ್ಲಿ ಅಕ್ರಮಗಳಿಗೆ ಬ್ರೆಕ್ ಹಾಕುವುದು ಸವಾಲಾಗಿದೆ.

ಕಾರಾಗೃಹದೊಳಗೆ ನಿಷೇಧಿತ ವಸ್ತುಗಳು ಹೇಗೆ ಒಳಗೆ ಹೋದವು ಎಂಬುವುದು ಪೊಲೀಸರಿಗೆ ಪತ್ತೆಹಚ್ಚುವುದು ಕಷ್ಟಸಾಧ್ಯವಾಗಿದೆ.

ಈ ಹಿಂದೆಯೂ ಕಾರಾಗೃಹದ ಮೇಲೆ ಅಧಿಕಾರಿಗಳು ದಾಳಿ ಮಾಡಿದ ಸಂದರ್ಭದಲ್ಲಿ ಮೂರು ಪ್ರಕರಣಗಳಲ್ಲಿ ಆರು ಮೊಬೈಲ್‌ಗಳು ಸಿಕ್ಕಿದ್ದವು. ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಮೂವರು ಜೈಲು ಸಿಬ್ಬಂದಿ ಸೇರಿದಂತೆ ಒಂಬತ್ತು ಮಂದಿಯನ್ನು ಬಂಧಿಸಿದ್ದರು. ಇದೀಗ ಮತ್ತೆ ಜೈಲಿನೊಳಗೆ ಹಣ, ಮೊಬೈಲ್, ಸಿಮ್‌ಕಾರ್ಡ್‌ಗಳು ಪತ್ತೆಯಾಗಿರುವುದು ಕಾರಾಗೃಹ ಸಿಬ್ಬಂದಿಗಳ ಕಾರ್ಯವೈಖರಿಯನ್ನು ಪ್ರಶ್ನಿಸುವಂತಾಗಿದೆ.

## ಮತದಾರರ ಹೆಸರು ಅಳಿಸುವ ಷಡ್ಯಂತ್ರ: ಪ್ರಕರಣ ದಾಖಲಿಸಲು ಡಿಕೆಶಿ ಆಗ್ರಹ

● ವಿಕ್ರಮ ವಾಹಿನಿ । ಬೆಂಗಳೂರು

ರಾಜ್ಯದಲ್ಲಿ ಅರ್ಹ ಮತದಾರರ ಹೆಸರುಗಳನ್ನು ಮತದಾರರ ಪಟ್ಟಿಯಿಂದ ಅಳಿಸಲು ಫಾರಂ–7 ಅರ್ಜಿಗಳನ್ನು ದೊಡ್ಡ ಪ್ರಮಾಣದಲ್ಲಿ ಸಲ್ಲಿಸಲಾಗುತ್ತಿದೆ ಎಂಬ ಆರೋಪದ ಕುರಿತು ಚುನಾವಣಾ ಆಯೋಗ ಪ್ರಕರಣ ದಾಖಲಿಸಿ ಸಮಗ್ರ ತನಿಖೆ ನಡೆಸಬೇಕು ಎಂದು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಆಗ್ರಹಿಸಿದರು.

ಗುರುವಾರ ಗೃಹ ಕಚೇರಿ ಕೃಷ್ಣಾದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಬಿಜೆಪಿ ಹಾಗೂ ಜೆಡಿಎಸ್ ಕಾರ್ಯಕರ್ತರು ಪೂರ್ವಮುದ್ರಿತ ಮತದಾರರ ವಿವರಗಳಿರುವ ಫಾರಂ–7 ಅರ್ಜಿಗಳನ್ನು ಬಿಎಲ್‌ಒಗಳಿಗೆ ಸಲ್ಲಿಸಿ, ಅಲ್ಪಸಂಖ್ಯಾತರು, ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಹಿಂದುಳಿದ ವರ್ಗಗಳ ಮತದಾರರ ಹೆಸರುಗಳನ್ನು ಅಳಿಸಲು ಪ್ರಯತ್ನಿಸುತ್ತಿದ್ದಾರೆ ಎಂದು ಆರೋಪಿಸಿದರು.

**ದೊಡ್ಡ ಪ್ರಮಾಣದ ಅರ್ಜಿ:** ಬಬಲೇಶ್ವರ, ಭಾಲ್ಕಿ, ಬೆಳಗಾವಿ ಸೇರಿದಂತೆ ಹಲವು ವಿಧಾನಸಭಾ ಕ್ಷೇತ್ರಗಳಲ್ಲಿ ಸಾವಿರಾರು



ಫಾರಂ–7 ಅರ್ಜಿಗಳು ಸಲ್ಲಿಕೆಯಾಗಿರುವುದು ಗಮನಕ್ಕೆ ಬಂದಿದೆ. ಕೆಲವು ಕಡೆ ಬಿಜೆಪಿ ಕಾರ್ಯಕರ್ತರು ನೂರಾರು ಅರ್ಜಿಗಳನ್ನು ಸಲ್ಲಿಸಿರುವುದಾಗಿ ಹೇಳಿಕೊಂಡಿದ್ದಾರೆ. ಈ ಅರ್ಜಿಗಳು ಎಲ್ಲಿಂದ ಮುದ್ರಣಗೊಂಡವು ಮತ್ತು ಮತದಾರರ ವೈಯಕ್ತಿಕ ವಿವರಗಳು ಹೇಗೆ ಲಭ್ಯವಾದವು ಎಂಬುದರ ಬಗ್ಗೆ ತನಿಖೆಯಾಗಬೇಕು ಎಂದು ಒತ್ತಾಯಿಸಿದರು.

ಎಸ್‌ಐಆರ್ ಪ್ರಕ್ರಿಯೆಯಲ್ಲಿ ಈಗಾಗಲೇ 1.07 ಕೋಟಿ ಹೆಸರುಗಳನ್ನು ಕೈಬಿಡಲಾಗಿದ್ದು, 45 ಲಕ್ಷ ಮತದಾರರಿಗೆ ನೋಟಿಸ್ ನೀಡಲಾಗಿದೆ. ಇದರ ನಡುವೆಯೇ ಮತ್ತಷ್ಟು ಸುಮಾರು 50 ಲಕ್ಷ ಮತದಾರರ ಹೆಸರುಗಳನ್ನು ಅಳಿಸಲು ಸಂಚು ನಡೆದಿದೆ ಎಂದು ಶಿವಕುಮಾರ್ ಆರೋಪಿಸಿದರು.

ಎಫ್‌ಐಆರ್‌ಗೆ ಒತ್ತಾಯ: ಫಾರಂ–7 ದುರುಪಯೋಗದ ಹಿಂದೆ ಯಾರಿದ್ದಾರೆ ಎಂಬುದನ್ನು ಪತ್ತೆಹಚ್ಚಿ, ತಪ್ಪಿತಸ್ಥರ ವಿರುದ್ಧ ಕ್ರಿಮಿನಲ್ ಪ್ರಕರಣ ದಾಖಲಿಸಬೇಕು.

ಪ್ರತಿಯೊಬ್ಬ ಅರ್ಹ ನಾಗರಿಕನ ಮತದಾನದ ಹಕ್ಕು ರಕ್ಷಿಸಲು ಸರ್ಕಾರ ಬದ್ಧವಾಗಿದೆ. ಎಸ್‌ಐಆರ್ ಪ್ರಕ್ರಿಯೆಯನ್ನು ರದ್ದುಗೊಳಿಸಿ, ಅರ್ಹ ಮತದಾರರ ಹೆಸರುಗಳನ್ನು ರಕ್ಷಿಸಬೇಕು ಎಂದು ಶಿವಕುಮಾರ್ ಒತ್ತಾಯಿಸಿದರು. ಈ ಕುರಿತು ಚುನಾವಣಾ ಆಯೋಗದ ಕಚೇರಿಗೆ ತೆರಳಿ ಮನವಿ ಸಲ್ಲಿಸುವುದಾಗಿ ಹಾಗೂ ಸೂಕ್ತ ಕ್ರಮ ಕೈಗೊಳ್ಳುವವರೆಗೆ ಸಚಿವರೊಂದಿಗೆ ಧರಣಿ ನಡೆಸುವುದಾಗಿ ತಿಳಿಸಿದರು.

www.VIKRAMAVAHINI.com
|| ಕನ್ನಡ ದಿನಪತ್ರಿಕೆ ||
PRGI NO: KARKAN/2018/78481
ವಿಕ್ರಮ ವಾಹಿನಿ
ಸತ್ಯದ ಹಾದಿ । ಜನಪರ ದನಿ । ರಾಷ್ಟ್ರೀಯ ದೃಷ್ಟಿ

# ಭಾಲ್ಕಿಯಲ್ಲಿ ಮತ ಕಳವುಗೆ ಸಾಕ್ಷಿ ಸಿಕ್ಕಿದೆ: ಖಂಡ್ರೆ



● ವಿಕ್ರಮ ವಾಹಿನಿ । ಬೆಂಗಳೂರು

ಮತದಾರರ ಪಟ್ಟಿಯಿಂದ ಅರ್ಹರನ್ನು ಕೈಬಿಡುವ ಉದ್ದೇಶದಿಂದ ನಮೂನೆ-7ರ ದುರ್ಬಳಕೆ ನಡೆದಿರುವುದು ಭಾಲ್ಕಿಯಲ್ಲಿ ಬೆಳಕಿಗೆ ಬಂದಿದೆ. ಇದು ಮತ ಕಳವು ಕುರಿತು ರಾಹುಲ್ ಗಾಂಧಿ ಮಾಡಿರುವ ಆರೋಪಕ್ಕೆ ಪುಷ್ಟಿ ನೀಡಿದೆ ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ ಖಂಡ್ರೆ ಆರೋಪಿಸಿದರು.

ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಹಾಗೂ ಸಚಿವರೊಂದಿಗೆ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಎಸ್ಐಆರ್ ಬಳಿಕ ಬೀದರ್ ಜಿಲ್ಲೆಯಲ್ಲಿ ಮತದಾರರ ಸಂಖ್ಯೆ 14,61,959ರಿಂದ 12,20,916ಕ್ಕೆ ಇಳಿಕೆಯಾಗಿದೆ. ಎರಡು ಲಕ್ಷಕ್ಕೂ ಅಧಿಕ ಮತದಾರರನ್ನು ಪಟ್ಟಿಯಿಂದ ತೆಗೆದುಹಾಕಲಾಗಿದ್ದು, ಒಂದು ಲಕ್ಷಕ್ಕೂ ಹೆಚ್ಚು ಮಂದಿಯನ್ನು ಶಾಶ್ವತವಾಗಿ ಸ್ಥಳಾಂತರಗೊಂಡವರು ಎಂದು ನಮೂದಿಸಲಾಗಿದೆ ಎಂದು ಹೇಳಿದರು. ಭಾಲ್ಕಿ ವಿಧಾನಸಭಾ ಕ್ಷೇತ್ರದಲ್ಲಿ ಒಂದೇ ದಿನ 3,244 ಮತದಾರರನ್ನು ಪಟ್ಟಿಯಿಂದ ಕೈಬಿಡುವಂತೆ 36 ಮಂದಿ ನಮೂನೆ-7 ಸಲ್ಲಿಸಿದ್ದಾರೆ. ಈ ಪೈಕಿ ಬಹುತೇಕರು ಬಿಜೆಪಿ ಕಾರ್ಯಕರ್ತರು ಎಂದು ಆರೋಪಿಸಿದ ಅವರು, ಜಗನ್ನಾಥ್ ಎಂಬ ವ್ಯಕ್ತಿಯೊಬ್ಬರು ಒಂದೇ ದಿನ 241 ಪೂರ್ವ ಮುದ್ರಿತ ನಮೂನೆ-7 ಅರ್ಜಿಗಳನ್ನು ಸಲ್ಲಿಸಿರುವುದು ಪೂರ್ವನಿಯೋಜಿತ ಕ್ರಮದ ಅನುಮಾನ ಮೂಡಿಸಿದೆ ಎಂದರು.

ಬಡವರು, ಅಲ್ಪಸಂಖ್ಯಾತರು, ದಲಿತರು ಹಾಗೂ ಹಿಂದುಳಿದ ವರ್ಗಗಳ ಮತದಾರರನ್ನು ಗುರಿಯಾಗಿಸಿ ಅವರ ಮತದಾನದ ಹಕ್ಕು ಕಸಿಯುವ ಪ್ರಯತ್ನ ನಡೆದಿದೆ ಎಂದು ಖಂಡ್ರೆ ಆರೋಪಿಸಿದರು. ಮಾಹಿತಿ ಬಹಿರಂಗವಾದ ಬಳಿಕ ಕೆಲವರು ಅರ್ಜಿಗಳನ್ನು ಹಿಂಪಡೆದಿದ್ದು, ಕೆಲ ಪ್ರಕರಣಗಳಲ್ಲಿ ಮತದಾರರು ಪೊಲೀಸರಿಗೆ ದೂರು ನೀಡಿದ್ದು ಎಫ್ಐಆರ್ ದಾಖಲಾಗಿದೆ ಎಂದರು. ಜಿಲ್ಲಾ, ತಾಲೂಕು ಹಾಗೂ ಗ್ರಾಮ ಪಂಚಾಯಿತಿ ಚುನಾವಣೆಗಳಿಗೆ ಅಂತಿಮಗೊಳ್ಳುವ ಮತದಾರರ ಪಟ್ಟಿಯೇ ಆಧಾರವಾಗಲಿದೆ. ಹೀಗಾಗಿ ಅರ್ಹ ಮತದಾರರು ಪಟ್ಟಿಯಿಂದ ಹೊರಗುಳಿಯದಂತೆ ಕ್ರಮ ಕೈಗೊಳ್ಳಬೇಕು. ಈ ಪ್ರಕರಣದಲ್ಲಿ ಭಾಗಿಯಾಗಿರುವವರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಅವರು ಒತ್ತಾಯಿಸಿದರು.

# ಕಟ್ಟಕಡೆಯ ವ್ಯಕ್ತಿಗೂ ಸೌಲಭ್ಯ ತಲುಪಿಸುವೆ: ರಘುಮೂರ್ತಿ



● ವಿಕ್ರಮ ವಾಹಿನಿ । ಬೆಂಗಳೂರು

ವಾಲ್ಮೀಕಿ/ನಾಯಕ ಸಮುದಾಯ ಸೇರಿದಂತೆ ಪರಿಶಿಷ್ಟ ಪಂಗಡದ ಕಟ್ಟಕಡೆಯ ವ್ಯಕ್ತಿಗೂ ಸರ್ಕಾರದ ಯೋಜನೆ, ಕಾರ್ಯಕ್ರಮ ಹಾಗೂ ಸೌಲಭ್ಯಗಳು ತಲುಪುವಂತೆ ಪ್ರಾಮಾಣಿಕವಾಗಿ ಪ್ರಯತ್ನಿಸಲಾಗುವುದು ಎಂದು ಪರಿಶಿಷ್ಟ ಪಂಗಡಗಳ ಕಲ್ಯಾಣ ಹಾಗೂ ಚಿತ್ರದುರ್ಗ ಜಿಲ್ಲಾ ಉಸ್ತುವಾರಿ ಸಚಿವ ಟಿ.ರಘುಮೂರ್ತಿ ಭರವಸೆ ನೀಡಿದರು.

ಕಬ್ಬನ್ ಪಾರ್ಕ್‌ನ ರಾಜ್ಯ ಸರ್ಕಾರಿ ನೌಕರರ ಸಂಘದ ಭವನದಲ್ಲಿ ನಡೆದ ವಾಲ್ಮೀಕಿ/ನಾಯಕ ಸಮುದಾಯದ ಕುಂದುಕೊರತೆಗಳ ಸಭೆಯಲ್ಲಿ ಮಾತನಾಡಿದ ಅವರು, ಸಮುದಾಯದ ಅಭಿವೃದ್ಧಿಗೆ ಸರ್ಕಾರ ಬದ್ಧವಾಗಿದೆ. ವಿವಿಧ ಯೋಜನೆಗಳ ಅನುಷ್ಠಾನದಲ್ಲಿ ಯಾವುದೇ ಸಮಸ್ಯೆ ಎದುರಾಗದಂತೆ ಕ್ರಮ ಕೈಗೊಳ್ಳಲಾಗುವುದು ಎಂದರು.

ಸಮುದಾಯದ ಅಭಿವೃದ್ಧಿಗಾಗಿ ಪ್ರತ್ಯೇಕ ಆಯೋಗ ರಚಿಸುವಂತೆ ಬಂದಿರುವ ಮನವಿಯನ್ನು ಸೂಕ್ತ ವೇದಿಕೆಯಲ್ಲಿ ಚರ್ಚಿಸಿ ನಿರ್ಧಾರ ಕೈಗೊಳ್ಳಲಾಗುವುದು. ಸಮುದಾಯದ ಸಂಘಟನೆ ಬಲಿಷ್ಠವಾಗಬೇಕು. ಎಲ್ಲರೂ ಒಗ್ಗಟ್ಟಿನಿಂದ ಕಾರ್ಯನಿರ್ವಹಿಸಿದರೆ ಅಭಿವೃದ್ಧಿ ಸಾಧ್ಯ ಎಂದು ಹೇಳಿದರು.

ಪರಿಶಿಷ್ಟ ಪಂಗಡಗಳ ಯೋಜನೆಗಳು ಹಾಗೂ ಕಾರ್ಯಕ್ರಮಗಳಿಗೆ ಹೆಚ್ಚಿನ ಅನುದಾನ ಒದಗಿಸುವಂತೆ ಮುಖ್ಯಮಂತ್ರಿ ಅವರೊಂದಿಗೆ ಚರ್ಚಿಸಿ ಮನವಿ ಸಲ್ಲಿಸಲಾಗುವುದು ಎಂದು ರಘುಮೂರ್ತಿ ತಿಳಿಸಿದರು.

ಶ್ರೀ ಮಹರ್ಷಿ ವಾಲ್ಮೀಕಿ ಗುರುಪೀಠದ ಜಗದ್ಗುರು ಪ್ರಸನ್ನಾನಂದ ಪುರಿ ಸ್ವಾಮೀಜಿ, ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ, ಶಾಸಕ ದೇವೇಂದ್ರಪ್ಪ ಸೇರಿದಂತೆ ಇಲಾಖೆಯ ಅಧಿಕಾರಿಗಳು ಹಾಗೂ ಸಮುದಾಯದ ಮುಖಂಡರು ಸಭೆಯಲ್ಲಿ ಉಪಸ್ಥಿತರಿದ್ದರು.

# ಚಿನ್ನ ಕಳ್ಳಸಾಗಣೆ: ನಟಿ ರನ್ಯಾ ರಾವ್‌ಗೆ 89.91 ಕೋಟಿ ದಂಡ

● ವಿಕ್ರಮ ವಾಹಿನಿ । ಬೆಂಗಳೂರು

ಬಹುಕೋಟಿ ಚಿನ್ನ ಕಳ್ಳಸಾಗಣೆ ಪ್ರಕರಣಕ್ಕೆ ಸಂಬಂಧಿಸಿದಂತೆ ಸ್ಯಾಂಡಲ್‌ವುಡ್ ನಟಿ ರನ್ಯಾ ರಾವ್ ಅವರಿಗೆ ಕಸ್ಟಮ್ಸ್ ಇಲಾಖೆ 89.91 ಕೋಟಿ ದಂಡ ವಿಧಿಸಿದೆ. ಕಸ್ಟಮ್ಸ್ ಜಂಟಿ ನಿರ್ದೇಶಕ ಸಂದೀಪ್ ಹೊರಡಿಸಿರುವ 399 ಪುಟಗಳ ಆದೇಶದಲ್ಲಿ ತನಿಖೆ ಹಾಗೂ ಸಂಗ್ರಹಿಸಿರುವ ಸಾಕ್ಷ್ಯಗಳ ವಿವರ ದಾಖಲಿಸಲಾಗಿದೆ.

ಕಂದಾಯ ಗುಪ್ತಚರ ನಿರ್ದೇಶನಾಲಯದ ತನಿಖೆಯ ಪ್ರಕಾರ, 2024ರ ಮಾರ್ಚ್ 7ರಿಂದ 2025ರ ಫೆಬ್ರವರಿ 2ರವರೆಗೆ ದುಬೈನಿಂದ ಭಾರತಕ್ಕೆ ಸುಮಾರು 113 ಕೆ.ಜಿ. ಚಿನ್ನ ಅಕ್ರಮವಾಗಿ ಸಾಗಿಸಲಾಗಿದೆ ಎಂಬ ಆರೋಪವಿದೆ. 2025ರ ಮಾರ್ಚ್ 2ರಂದು ಕೆಂಪೇಗೌಡ ಅಂತರರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ರನ್ಯಾ ರಾವ್ ಅವರನ್ನು ಬಂಧಿಸಿ, ಅವರ ಬಳಿಯಿದ್ದ ಸುಮಾರು 12 ಕೋಟಿ ಮೌಲ್ಯದ 14.8 ಕೆ.ಜಿ. ಚಿನ್ನದ ಬಿಸ್ಕತ್ತುಗಳನ್ನು ವಶಪಡಿಸಿಕೊಳ್ಳಲಾಗಿತ್ತು.

ಬಳಿಕ ಅವರ ನಿವಾಸದ ಮೇಲೆ ನಡೆಸಿದ ದಾಳಿಯಲ್ಲಿ 2.5 ಕೋಟಿ ನಗದು ಹಾಗೂ 2.06 ಕೋಟಿ ಮೌಲ್ಯದ ಚಿನ್ನಾಭರಣಗಳು ಪತ್ತೆಯಾಗಿದ್ದವು. ವಶಪಡಿಸಿಕೊಂಡ ಚಿನ್ನ, ನಗದು ಮತ್ತು ಕಳ್ಳಸಾಗಣೆ ಜಾಲದ ಕಾರ್ಯವಿಧಾನದ ವಿವರಗಳನ್ನು ಆದೇಶದಲ್ಲಿ ಉಲ್ಲೇಖಿಸಲಾಗಿದೆ. ದಂಡದ ಆದೇಶದ ವಿರುದ್ಧ ಮೇಲ್ಮನವಿ ಸಲ್ಲಿಸಲು ಕಾನೂನಿನಲ್ಲಿ ಅವಕಾಶವಿದೆ.

# ವಿಶ್ವ ಕಾಫಿ ದಿನಾಚರಣೆ: ದೈನಂದಿನ ಬದುಕಿನಲ್ಲಿ ಕಾಫಿಯ ಮಹತ್ವ ಸಾರಿದ ಗಣ್ಯರು

● ವಿಕ್ರಮ ವಾಹಿನಿ । ಬೆಂಗಳೂರು

ವಿಶ್ವ ಕಾಫಿ ದಿನದ ಅಂಗವಾಗಿ ಬೆಂಗಳೂರಿನ ಬಸವನಗುಡಿಯಲ್ಲಿರುವ ಸೌತ್ ಕಿಚನ್ ನಲ್ಲಿ ವಿಶೇಷ ಕಾರ್ಯಕ್ರಮವನ್ನು ಆಯೋಜಿಸಲಾಗಿತ್ತು. ಕಾಫಿಯ ಮಹತ್ವ, ಅದರೊಂದಿಗೆ ಬೆಸೆದುಕೊಂಡಿರುವ ಸಾಮಾಜಿಕ ಹಾಗೂ ಸಾಂಸ್ಕೃತಿಕ ಬದುಕು ಮತ್ತು ದೈನಂದಿನ ಜೀವನದಲ್ಲಿ ಕಾಫಿಯ ಸ್ಥಾನ ಕುರಿತು ಕಾರ್ಯಕ್ರಮದಲ್ಲಿ ಚರ್ಚಿಸಲಾಯಿತು.

ವಿಶ್ವದಾದ್ಯಂತ ಕಾಫಿಗೆ ತನ್ನದೇ ಆದ ವಿಶಿಷ್ಟ ಸ್ಥಾನವಿದ್ದು, ಭಾರತದಲ್ಲಿಯೂ ಕಾಫಿ ಕೇವಲ ಒಂದು ಪಾನೀಯವಾಗಿ ಉಳಿದಿಲ್ಲ. ಅದು ಜನರ ದೈನಂದಿನ ಜೀವನಶೈಲಿ, ಆತಿಥ್ಯ ಮತ್ತು ಸಾಮಾಜಿಕ ಸಂವಹನದ ಒಂದು ಭಾಗವಾಗಿದೆ. ಸ್ನೇಹಿತರ ಭೇಟಿ, ಕುಟುಂಬದ ಮಾತುಕತೆ, ಕಚೇರಿ ಚರ್ಚೆ ಸೇರಿದಂತೆ ಹಲವು ಸಂದರ್ಭಗಳಲ್ಲಿ ಒಂದು ಕಪ್ ಕಾಫಿ ಜನರನ್ನು ಬೆಸೆಯುವ ಮಾಧ್ಯಮವಾಗಿದೆ ಎಂಬ ಅಭಿಪ್ರಾಯ ಕಾರ್ಯಕ್ರಮದಲ್ಲಿ ವ್ಯಕ್ತವಾಯಿತು.

ಮಾಜಿ ಪೊಲೀಸ್ ಆಯುಕ್ತ ಭಾಸ್ಕರ್ ರಾವ್ ಮಾತನಾಡಿ, ಕಾಫಿ ನಮ್ಮ ದೈನಂದಿನ ಜೀವನದೊಂದಿಗೆ ಬೆಸೆದುಕೊಂಡಿರುವ ಪಾನೀಯವಾಗಿದೆ. ಬೆಳಗಿನ ದಿನಚರಿಯಿಂದ ಆರಂಭಿಸಿ ಸ್ನೇಹಿತರು ಹಾಗೂ ಸಹೋದ್ಯೋಗಿಗಳೊಂದಿಗೆ ನಡೆಯುವ ಮಾತುಕತೆಗಳವರೆಗೆ ಕಾಫಿ ಒಂದು ರೀತಿಯ ಸಾಮಾಜಿಕ ಸೇತುವೆಯಾಗಿ ಕಾರ್ಯನಿರ್ವಹಿಸುತ್ತದೆ ಎಂದು ಹೇಳಿದರು.




ಪರಿಸರ ಚಂದ್ರಶೇಖರ್ ಅವರು ಮಾತನಾಡಿ, ಕಾಫಿಯ ಮಹತ್ವವನ್ನು ಕೇವಲ ಪಾನೀಯದ ದೃಷ್ಟಿಯಿಂದ ನೋಡುವುದಕ್ಕಿಂತ ಅದರ ಹಿಂದೆ ಇರುವ ಕೃಷಿಕರು, ಕಾಫಿ ಬೆಳೆಯುವ ಪ್ರದೇಶಗಳು ಹಾಗೂ ಪರಿಸರದೊಂದಿಗೆ ಅದರ ಸಂಬಂಧವನ್ನೂ ಗಮನಿಸಬೇಕಾಗಿದೆ ಎಂದು ಅಭಿಪ್ರಾಯಪಟ್ಟರು. ಕಾಫಿ ಉತ್ಪಾದನೆಯೊಂದಿಗೆ ಪರಿಸರ ಸಂರಕ್ಷಣೆ ಮತ್ತು ಸುಸ್ಥಿರ ಕೃಷಿಗೂ ಆದ್ಯತೆ ನೀಡಬೇಕಾಗಿದೆ ಎಂದು ಅವರು ತಿಳಿಸಿದರು.

ಹಿರಿಯ ಪತ್ರಕರ್ತ ಹನುಮೇಶ್ ಕೆ. ಯವಗಲ್ ಮಾತನಾಡಿ, ಕಾಫಿ ಭಾರತೀಯರ ದಿನನಿತ್ಯದ ಬದುಕಿನ ಅವಿಭಾಜ್ಯ ಭಾಗವಾಗಿ ಬೆಳೆದಿದೆ. ಒಂದು ಕಪ್ ಕಾಫಿ ಕೇವಲ ದೈಹಿಕ ಚೈತನ್ಯ ನೀಡುವ ಪಾನೀಯವಲ್ಲ; ಅದು ಸಂಭಾಷಣೆ, ಸ್ನೇಹ ಮತ್ತು ಸಾಮಾಜಿಕ ಸಂಪರ್ಕಕ್ಕೆ ಅವಕಾಶ ಕಲ್ಪಿಸುವ ಒಂದು ಸಂಸ್ಕೃತಿಯ ಸಂಕೇತವಾಗಿದೆ ಎಂದು ಹೇಳಿದರು.

ಬಸವನಗುಡಿ ಟ್ರೇಡರ್ಸ್ ಅಸೋಸಿಯೇಷನ್ ಅಧ್ಯಕ್ಷ ವೆಂಕಟೇಶ್** ಅವರು, ಬಸವನಗುಡಿಯಂತಹ ಹಳೆಯ ಬೆಂಗಳೂರಿನ ಪ್ರದೇಶಗಳಲ್ಲಿ ಕಾಫಿ ಸಂಸ್ಕೃತಿಗೆ ವಿಶೇಷ ಸ್ಥಾನವಿದೆ. ಸಾಂಪ್ರದಾಯಿಕ ಹೋಟೆಲ್‌ಗಳು ಹಾಗೂ ಆಹಾರ ಸಂಸ್ಕೃತಿಯೊಂದಿಗೆ ಕಾಫಿ ಬೆಂಗಳೂರಿನ ಗುರುತಿನ ಒಂದು ಭಾಗವಾಗಿದೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಜ್ಯೋತಿ ಗೌಡ, ಕೆ.ಆರ್. ಜಯತೀರ್ಥ ಮತ್ತು ಸುಧೀಂದ್ರ ರಾವ್ ಸೇರಿದಂತೆ ಇತರ ಗಣ್ಯರು ಕೂಡ ಕಾಫಿ ದಿನಾಚರಣೆಯ ಮಹತ್ವದ ಕುರಿತು ತಮ್ಮ ಅಭಿಪ್ರಾಯಗಳನ್ನು ಹಂಚಿಕೊಂಡರು.

ಕಾಫಿ ಬೆಳೆಗಾರರಿಂದ ಹಿಡಿದು ಗ್ರಾಹಕರವರೆಗೆ ಒಂದು ದೊಡ್ಡ ಸಮುದಾಯವನ್ನು ಸಂಪರ್ಕಿಸುವ ಕಾಫಿ ಉದ್ಯಮದ ಕೊಡುಗೆಯನ್ನೂ ಕಾರ್ಯಕ್ರಮದಲ್ಲಿ ಸ್ಮರಿಸಲಾಯಿತು. ಕಾಫಿಯ ಗುಣಮಟ್ಟ, ಅದರ ಸೇವನೆ ಹಾಗೂ ಕಾಫಿ ಸಂಸ್ಕೃತಿಯ ಬೆಳವಣಿಗೆಯ ಕುರಿತು ಕೂಡ ಚರ್ಚೆ ನಡೆಯಿತು.

ಒಟ್ಟಿನಲ್ಲಿ, ವಿಶ್ವ ಕಾಫಿ ದಿನಾಚರಣೆಯ ಮೂಲಕ ಒಂದು ಕಪ್ ಕಾಫಿಯ ಹಿಂದೆ ಇರುವ ಕೃಷಿ, ಉದ್ಯಮ, ಸಂಸ್ಕೃತಿ ಮತ್ತು ಸಾಮಾಜಿಕ ಸಂಬಂಧಗಳ ಮಹತ್ವವನ್ನು ನೆನಪಿಸುವ ಪ್ರಯತ್ನ ನಡೆಯಿತು.

ಕಾಫಿ ಕೇವಲ ಪಾನೀಯವಲ್ಲ-ಅದು ಮಾತುಕತೆಗೆ ನೆಪ, ಸ್ನೇಹಕ್ಕೆ ಸೇತುವೆ ಮತ್ತು ನಮ್ಮ ದೈನಂದಿನ ಬದುಕಿನ ಒಂದು ಸೊಗಸಾದ ಭಾಗ ಎಂಬ ಸಂದೇಶದೊಂದಿಗೆ ಕಾರ್ಯಕ್ರಮ ಮುಕ್ತಾಯಗೊಂಡಿತು.

ಕಾರ್ಯಕ್ರಮದಲ್ಲಿ ಮಾಜಿ ಪೊಲೀಸ್ ಆಯುಕ್ತ ಭಾಸ್ಕರ್ ರಾವ್, ಪರಿಸರ ಹೋರಾಟಗಾರ ಪರಿಸರ ಚಂದ್ರಶೇಖರ್, ಹಿರಿಯ ಪತ್ರಕರ್ತ ಹನುಮೇಶ್ ಕೆ. ಯವಗಲ್, ಬಸವನಗುಡಿ ಟ್ರೇಡರ್ಸ್ ಅಸೋಸಿಯೇಷನ್ ಅಧ್ಯಕ್ಷ ವೆಂಕಟೇಶ್, ಬಿಜೆಪಿ ನಾಯಕಿ ಜ್ಯೋತಿ ಗೌಡ, ಸಾಮಾಜಿಕ ಕಾರ್ಯಕರ್ತ ಕೆ.ಆರ್. ಜಯತೀರ್ಥ ಹಾಗೂ ಖ್ಯಾತ ಪ್ರಕಾಶಕ ಸುಧೀಂದ್ರ ರಾವ್ ಸೇರಿದಂತೆ ಹಲವು ಗಣ್ಯರು ಉಪಸ್ಥಿತರಿದ್ದರು.

# ಬರ ಪರಿಹಾರಕ್ಕೆ ಕೇಂದ್ರಕ್ಕೆ ಪರಮೇಶ್ವರ್ ಮನವಿ

● ವಿಕ್ರಮ ವಾಹಿನಿ । ಬೆಂಗಳೂರು

ರಾಜ್ಯದಲ್ಲಿ ಬರ ಪರಿಸ್ಥಿತಿ ತೀವ್ರಗೊಂಡಿರುವ ಹಿನ್ನೆಲೆಯಲ್ಲಿ ಉಪಮುಖ್ಯಮಂತ್ರಿ ಹಾಗೂ ಕಂದಾಯ ಸಚಿವ ಡಾ. ಜಿ. ಪರಮೇಶ್ವರ ಅವರು ಕೇಂದ್ರ ಗೃಹ ಸಚಿವ ಅಮಿತ್ ಶಾ ಮತ್ತು ಕೃಷಿ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಅವರಿಗೆ ಪ್ರತ್ಯೇಕ ಪತ್ರ ಬರೆದು ತುರ್ತು ಬರ ಪರಿಹಾರ ಬಿಡುಗಡೆಗೆ ಮನವಿ ಮಾಡಿದ್ದಾರೆ.



ರಾಜ್ಯದಲ್ಲಿ ಈಗಾಗಲೇ 177 ತಾಲ್ಲೂಕುಗಳನ್ನು ಬರಪೀಡಿತ ಎಂದು ಘೋಷಿಸಲಾಗಿದ್ದು, ಸುಮಾರು 47.09 ಲಕ್ಷ ಹೆಕ್ಟೇರ್ ಪ್ರದೇಶದಲ್ಲಿ ಬೆಳೆಹಾನಿಯಾಗಿದೆ. ಇದರಿಂದ ರೂ 46,324.5 ಕೋಟಿ ಆರ್ಥಿಕ ನಷ್ಟ ಸಂಭವಿಸಿದೆ ಎಂದು ಅಂದಾಜಿಸಲಾಗಿದೆ. ಇನ್ನೂ 40 ತಾಲ್ಲೂಕುಗಳಲ್ಲಿ ಹಾನಿಯ ಪರಿಶೀಲನೆ ನಡೆಯುತ್ತಿದ್ದು, ಮುಂಗಾರು ಅಂತ್ಯದ ವೇಳೆಗೆ ಬರಪೀಡಿತ ತಾಲ್ಲೂಕುಗಳ ಸಂಖ್ಯೆ 220 ದಾಟುವ ಸಾಧ್ಯತೆಯಿದೆ ಎಂದು ಪತ್ರದಲ್ಲಿ ತಿಳಿಸಲಾಗಿದೆ.

ಹೊಸದಾಗಿ ಬರಪೀಡಿತ ಎಂದು ಘೋಷಿಸಲಾದ 76 ತಾಲ್ಲೂಕುಗಳಲ್ಲಿ 26.08 ಲಕ್ಷ ಹೆಕ್ಟೇರ್ ಕೃಷಿ ಬೆಳೆ ಹಾಗೂ 1.49 ಲಕ್ಷ ಹೆಕ್ಟೇರ್ ತೋಟಗಾರಿಕಾ ಬೆಳೆ ಹಾನಿಯಾಗಿದೆ. ತೊಗರಿ, ಮೆಕ್ಕೆಜೋಳ, ಹತ್ತಿ, ಕಬ್ಬು, ಸೋಯಾಬೀನ್, ಹೆಸರುಕಾಳು ಸೇರಿದಂತೆ ವಿವಿಧ ಬೆಳೆಗಳಿಗೆ ಹಾನಿಯಾಗಿದ್ದು, ಒಟ್ಟು 27.57 ಲಕ್ಷ ಹೆಕ್ಟೇರ್ ಪ್ರದೇಶದ ಬೆಳೆನಷ್ಟ ರೂ 27,576.2 ಕೋಟಿಯಷ್ಟಾಗಿದೆ ಎಂದು ಅಂದಾಜಿಸಲಾಗಿದೆ.

**ರೂ 7,142 ಕೋಟಿ ಪರಿಹಾರಕ್ಕೆ ಮನವಿ**

ಎರಡು ಹಂತಗಳಲ್ಲಿ ಘೋಷಿಸಲಾದ ಬರಪೀಡಿತ ಪ್ರದೇಶಗಳಿಗೆ ಎನ್‌ಡಿಆರ್‌ಎಫ್ ನಿಯಮಗಳಡಿ ರೂ 7,142.64 ಕೋಟಿ ಪರಿಹಾರ ನೀಡುವಂತೆ ಕೇಂದ್ರಕ್ಕೆ ಮನವಿ ಸಲ್ಲಿಸಲಾಗಿದೆ. ಇದರಲ್ಲಿ ರೂ 4,998.60 ಕೋಟಿ ಬೆಳೆ ಇನ್‌ಪುಟ್ ಸಬ್ಸಿಡಿ ಹಾಗೂ ರೂ 2,144.04 ಕೋಟಿ ಮೇವು ಮತ್ತು ಕುಡಿಯುವ ನೀರು ಸೇರಿದಂತೆ ಇತರ ಪರಿಹಾರ ಕಾರ್ಯಗಳಿಗೆ ಅಗತ್ಯವಿದೆ ಎಂದು ರಾಜ್ಯ ಸರ್ಕಾರ ತಿಳಿಸಿದೆ.

ಪ್ರಸ್ತುತ ಎಸ್‌ಡಿಆರ್‌ಎಫ್ ಮತ್ತು ಎನ್‌ಡಿಆರ್‌ಎಫ್‌ನ ಪರಿಹಾರ ಮಾನದಂಡಗಳು ಇಂದಿನ ಕೃಷಿ ವೆಚ್ಚಕ್ಕೆ ತಕ್ಕಂತೆ ಇಲ್ಲ. ರೈತರಿಗೆ ನೀಡುವ ಇನ್‌ಪುಟ್ ಸಬ್ಸಿಡಿ ಮಾನದಂಡಗಳನ್ನು ಪರಿಷ್ಕರಿಸಿ, ನೈಜ ಬೆಳೆನಷ್ಟಕ್ಕೆ ಅನುಗುಣವಾಗಿ ಪರಿಹಾರ ನೀಡುವ ವ್ಯವಸ್ಥೆ ರೂಪಿಸಬೇಕು ಎಂದು ಪರಮೇಶ್ವರ ಅವರು ಅಮಿತ್ ಶಾ ಅವರಿಗೆ ಮನವಿ ಮಾಡಿದ್ದಾರೆ.

ಕೇಂದ್ರ ಕೃಷಿ ಸಚಿವರಿಗೆ ಬರೆದ ಪತ್ರದಲ್ಲಿ ಕರ್ನಾಟಕದ ಬರ ಪರಿಸ್ಥಿತಿ ಪರಿಶೀಲನೆಗೆ ಕೇಂದ್ರ ತಂಡ ಆಗಮಿಸಿರುವುದನ್ನು ಸ್ವಾಗತಿಸಿರುವ ಅವರು, ಮೌಲ್ಯಮಾಪನ ಪ್ರಕ್ರಿಯೆಯನ್ನು ತ್ವರಿತಗೊಳಿಸಿ ರಾಜ್ಯಕ್ಕೆ ಶೀಘ್ರ ಪರಿಹಾರ ಬಿಡುಗಡೆ ಮಾಡುವಂತೆ ಕೋರಿದ್ದಾರೆ.

ಬರದ ತೀವ್ರತೆಯನ್ನು ಗಮನಿಸಿ ರಾಜ್ಯ ಮತ್ತು ಕೇಂದ್ರ ಸರ್ಕಾರಗಳು ಸಮನ್ವಯದಿಂದ ಕಾರ್ಯನಿರ್ವಹಿಸುವ ಅಗತ್ಯವಿದೆ. ರೈತರಿಗೆ ಸಮಯೋಚಿತ ಹಾಗೂ ಸಮರ್ಪಕ ನೆರವು ದೊರೆಯಬೇಕು ಮತ್ತು ಪರಿಹಾರವು ಅವರು ಅನುಭವಿಸಿರುವ ನೈಜ ನಷ್ಟವನ್ನು ಪ್ರತಿಬಿಂಬಿಸುವಂತಿರಬೇಕು ಎಂದು ಪರಮೇಶ್ವರ ಹೇಳಿದ್ದಾರೆ.

# ‘ಕಾಂಗ್ರೆಸ್ ಸರಕಾರ ಇರುವ ತನಕ ನಿನ್ನ ಆಟ, ಆಮೇಲೆ ಕಾದಿದೆ’

● ವಿಕ್ರಮ ವಾಹಿನಿ । ಬೆಂಗಳೂರು

ಜೆಡಿಎಸ್ ಯುವ ನಾಯಕ ನಿಖಿಲ್ ಕುಮಾರಸ್ವಾಮಿ ಅವರನ್ನು ರಾಜ್ಯದಲ್ಲಿ ಎಲ್ಲಿಯೂ ಸಭೆ ಮಾಡಲು ಬಿಡುವುದಿಲ್ಲ ಎಂಬ ಕಾಂಗ್ರೆಸ್ ಮುಖಂಡ ಮೊಹಮ್ಮದ್ ನಲಪಾಡ್ ಹೇಳಿಕೆಯನ್ನು ಗ್ರೇಟರ್ ಬೆಂಗಳೂರು ಜೆಡಿಎಸ್ ಅಧ್ಯಕ್ಷ ಎಚ್.ಎಂ.ರಮೇಶ್ ಗೌಡ ಖಂಡಿಸಿದ್ದಾರೆ.

ಜೆಡಿಎಸ್ ಕೇಂದ್ರ ಕಚೇರಿ ಜೆಪಿ ಭವನದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ನಲಪಾಡ್ ಅವರ ದುರಹಂಕಾರದ ವರ್ತನೆ ಮಿತಿಮೀರಿದೆ ಎಂದು ಆರೋಪಿಸಿದರು. ಜೆಡಿಎಸ್ ನಾಯಕರು ಹಾಗೂ ಕಾರ್ಯಕರ್ತರ ಬಗ್ಗೆ ಅವಹೇಳನಕಾರಿ ಹೇಳಿಕೆ ನೀಡುವುದನ್ನು ನಿಲ್ಲಿಸಬೇಕು. ನಿಖಿಲ್ ಅವರ ಸಭೆಗಳನ್ನು ತಡೆಯುವ ಸಾಮರ್ಥ್ಯ ಯಾರಿಗೂ ಇಲ್ಲ ಎಂದರು.

ನಲಪಾಡ್ ವಿರುದ್ಧ ಹಲವು ಹಲ್ಲೆ ಪ್ರಕರಣಗಳ ಆರೋಪಗಳು ಕೇಳಿಬರುತ್ತಿವೆ. ಇತ್ತೀಚಿನ ಘಟನೆಗಳ ಸಿಸಿಟಿವಿ ದೃಶ್ಯಾವಳಿ ಹಾಗೂ ಇತರ ದಾಖಲೆಗಳನ್ನು ಪರಿಶೀಲಿಸಿ ಪೊಲೀಸರು ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ರಮೇಶ್ ಗೌಡ ಆಗ್ರಹಿಸಿದರು.

ನಲಪಾಡ್ ಅವರ ವಿರುದ್ಧದ ಆರೋಪಗಳ ಕುರಿತು ಬೆಂಗಳೂರು ಪೊಲೀಸರು ಪರಿಶೀಲನೆ ನಡೆಸಬೇಕು. ಕಳೆದ ಕೆಲವು ತಿಂಗಳ ಸಿಸಿಟಿವಿ ದೃಶ್ಯಾವಳಿಗಳನ್ನು ಪರಿಶೀಲಿಸಿ, ತಪ್ಪಿತಸ್ಥತೆ ಕಂಡುಬಂದರೆ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ಜೆಡಿಎಸ್ ನಾಯಕರು ಹಾಗೂ ದೇವೇಗೌಡರ ಕುಟುಂಬದ ವಿರುದ್ಧ ಅವಹೇಳನಕಾರಿ ಹೇಳಿಕೆ ನೀಡುವುದನ್ನು ಸಹಿಸಿಕೊಳ್ಳಲು ಸಾಧ್ಯವಿಲ್ಲ. ನಿಖಿಲ್ ಕುಮಾರಸ್ವಾಮಿ ಅವರ ಸಭೆಗಳನ್ನು ತಡೆಯುವುದಾಗಿ ಹೇಳಿರುವುದು ಖಂಡನೀಯ ಎಂದು ರಮೇಶ್ ಗೌಡ ಹೇಳಿದರು.

ನಲಪಾಡ್ ಅವರು ತಮ್ಮ ರಾಜಕೀಯ ಭಿನ್ನಾಭಿಪ್ರಾಯಗಳನ್ನು ಪ್ರಜಾಸತ್ತಾತ್ಮಕವಾಗಿ ವ್ಯಕ್ತಪಡಿಸಬೇಕು. ಯಾವುದೇ ನಾಯಕನ ಸಭೆ ಅಥವಾ ರಾಜಕೀಯ ಕಾರ್ಯಕ್ರಮಕ್ಕೆ ಅಡ್ಡಿಪಡಿಸುವ ಬದಲು ಕಾನೂನುಬದ್ಧ ಮಾರ್ಗದಲ್ಲಿ ವಿರೋಧ ವ್ಯಕ್ತಪಡಿಸಬೇಕು ಎಂದು ರಮೇಶ್ ಗೌಡ ಹೇಳಿದರು.

ಕಾಂಗ್ರೆಸ್ ಸರ್ಕಾರದ ಅಧಿಕಾರದ ಬಲದಿಂದ ಯಾರೂ ಕಾನೂನಿಗಿಂತ ಮೇಲಲ್ಲ. ಸಾರ್ವಜನಿಕವಾಗಿ ನೀಡುವ ಹೇಳಿಕೆಗಳು ಹಾಗೂ ಯಾವುದೇ ಸಂಘರ್ಷಕ್ಕೆ ಕಾರಣವಾಗಬಹುದಾದ ನಡೆಗಳ ಬಗ್ಗೆ ಪೊಲೀಸರು ಎಚ್ಚರಿಕೆ ವಹಿಸಬೇಕು. ಕಾನೂನು ಸುವ್ಯವಸ್ಥೆ ಕಾಪಾಡುವ ನಿಟ್ಟಿನಲ್ಲಿ ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ಅವರು ಆಗ್ರಹಿಸಿದರು.

# ಬಾಲಕೃಷ್ಣ ವಿರುದ್ಧ 36 ಎಕರೆ ಸರ್ಕಾರಿ ಭೂಮಿ ಕಬಳಿಕೆ ಆರೋಪ

● ವಿಕ್ರಮ ವಾಹಿನಿ । ಬೆಂಗಳೂರು

ಪೌರಾಡಳಿತ ಸಚಿವ ಎಚ್.ಸಿ.ಬಾಲಕೃಷ್ಣ ಅವರು ತಾವರೆಕೆರೆ ಬಳಿಯ ಕುರುಬರಹಳ್ಳಿಯಲ್ಲಿ 36 ಎಕರೆ ಸರ್ಕಾರಿ ಜಮೀನನ್ನು ಅಕ್ರಮವಾಗಿ ತಮ್ಮ ಕುಟುಂಬ ಹಾಗೂ ಆಪ್ತರ ಹೆಸರಿಗೆ ನೋಂದಣಿ ಮಾಡಿಸಿದ್ದಾರೆ ಎಂದು ಜೆಡಿಎಸ್ ಮುಖಂಡ ಹಾಗೂ ಮಾಜಿ ಶಾಸಕ ಎ.ಮಂಜುನಾಥ್ ಆರೋಪಿಸಿದರು.

ಜೆಡಿಎಸ್ ಕಚೇರಿ ಜೆ.ಪಿ.ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ದಾಖಲೆಗಳನ್ನು ಬಿಡುಗಡೆ ಮಾಡಿದ ಅವರು, ಸರ್ವೆ ನಂ.158ರಲ್ಲಿರುವ 36 ಎಕರೆ ಪೈಕಿ 10 ಎಕರೆ ಬಾಲಕೃಷ್ಣ ಅವರ ಪತ್ನಿ ರಮಾ ಬಾಲಕೃಷ್ಣ ಅವರ ಹೆಸರಿಗೆ ಹಾಗೂ ಉಳಿದ 26 ಎಕರೆ ನಟರಾಜ ನಾಯ್ಡು ಎಂಬುವರ ಹೆಸರಿಗೆ ಮಾಡಲಾಗಿದೆ ಎಂದು ದೂರಿದರು. ಈ ಜಮೀನಿನ ಮೌಲ್ಯ 500-600 ಕೋಟಿ ಇರಬಹುದು ಎಂದು ಅವರು ಹೇಳಿದರು.

ರಾಜ್ಯಪಾಲರಿಗೆ ದೂರು: ಜಮೀನಿಗೆ ಸಂಬಂಧಿಸಿದ ದಾಖಲೆಗಳನ್ನು ಪರಿಶೀಲಿಸಿ, ಅಕ್ರಮ ನಡೆದಿದ್ದರೆ ಸರ್ಕಾರ ಕೂಡಲೇ ಭೂಮಿಯನ್ನು ವಶಕ್ಕೆ ಪಡೆಯಬೇಕು. ಬಾಲಕೃಷ್ಣ ವಿರುದ್ಧ ರಾಜ್ಯಪಾಲರಿಗೆ ದೂರು ನೀಡಿ ವಿಚಾರಣೆಗೆ ಅನುಮತಿ ಕೋರುವುದಾಗಿ ಮಂಜುನಾಥ್ ತಿಳಿಸಿದರು.



ನೈಸ್ ಯೋಜನೆಗೆ ಅಧಿಸೂಚಿತವಾಗಿದ್ದ ಜಮೀನು ಸೇರಿದಂತೆ ಬೆಂಗಳೂರಿನ ಸುತ್ತಮುತ್ತಲಿನ ಸರ್ಕಾರಿ ಭೂಮಿಗಳ ನೋಂದಣಿ ಕುರಿತು ತನಿಖೆ ನಡೆಸಬೇಕು. ಡಿ.ಕೆ.ಶಿವಕುಮಾರ್ ಹಾಗೂ ಡಿ.ಕೆ.ಸುರೇಶ್ ಅವರ ಆಪ್ತರ ಹೆಸರಿನಲ್ಲಿ ಇಂತಹ ಜಮೀನುಗಳ ವಹಿವಾಟು ನಡೆದಿರುವ ಬಗ್ಗೆ ದಾಖಲೆಗಳಿವೆ ಎಂದು ಅವರು ಆರೋಪಿಸಿದರು.

**ಬಿಎಂ ಕಾವಲ್ ಬಗ್ಗೆಯೂ ಪ್ರಶ್ನೆ:** ಬಿಎಂ ಕಾವಲ್ ಪ್ರದೇಶದ ಜಮೀನು ನೈಸ್ ಯೋಜನೆಗೆ ಅಧಿಸೂಚಿತವಾಗಿದ್ದರೂ ನಂತರ ಬೇರೆಯವರ ಹೆಸರಿಗೆ ಮಾರಾಟದ ದಾಖಲೆ ಹೇಗೆ ಆಗಿದೆ ಎಂದು ಮಾಜಿ ಶಾಸಕ ಮಂಜುನಾಥ್ ಕಂದಾಯ ಸಚಿವ ಕೃಷ್ಣಬೈರೇಗೌಡ ಅವರನ್ನು ಪ್ರಶ್ನಿಸಿದರು. ಈ ಬಗ್ಗೆ ತಮ್ಮ ಬಳಿ ದಾಖಲೆಗಳಿದ್ದು, ಸರ್ಕಾರ ಸ್ಪಷ್ಟನೆ ನೀಡಬೇಕು ಎಂದು ಆಗ್ರಹಿಸಿದರು.

ಈ ಮಧ್ಯೆ, ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ಅವರು ಶುಕ್ರವಾರ ವಿವಾದಿತ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲಿಸಲಿದ್ದಾರೆ ಎಂದು ಮಂಜುನಾಥ್ ತಿಳಿಸಿದರು. ಇನ್ನೂ ಹಲವು ದಾಖಲೆಗಳನ್ನು ಮುಂದಿನ ದಿನಗಳಲ್ಲಿ ಬಿಡುಗಡೆ ಮಾಡುವುದಾಗಿ ಹೇಳಿದರು.

# 3ರಂದು ‘ಸಮರ್ಪಣ್’ ಭರತನಾಟ್ಯ ನೃತ್ಯ ಸಂಜೆ

● ವಿಕ್ರಮ ವಾಹಿನಿ । ಬೆಂಗಳೂರು

ಭಾರತೀಯ ಶಾಸ್ತ್ರೀಯ ನೃತ್ಯದ ಭಾವ, ಭಕ್ತಿ, ಲಯ ಹಾಗೂ ಸೌಂದರ್ಯವನ್ನು ಅನಾವರಣಗೊಳಿಸುವ ‘ಸಮರ್ಪಣ್’ ವಿಶೇಷ ಭರತನಾಟ್ಯ ನೃತ್ಯ ಸಂಜೆ ಅ. 3ರಂದು ಸಂಜೆ 5.30ಕ್ಕೆ ನಾಗದೇವನಹಳ್ಳಿಯ ಸರ್ ಎಂ. ವಿಶ್ವೇಶ್ವರಯ್ಯ ಲೇಔಟ್‌ನ ಎನ್‌ಪಿಎಸ್ ಕೆಂಗೇರಿ ಜೂನಿಯರ್ ವಿಂಗ್‌ನ ಎಸ್‌ಎಸ್‌ಸಿಎ ಸಭಾಂಗಣದಲ್ಲಿ ನಡೆಯಲಿದೆ.

ಸಂಗೀತ್ ನೃತ್ಯ ಭಾರತೀ ಅಕಾಡೆಮಿ ಆಯೋಜಿಸಿರುವ ಕಾರ್ಯಕ್ರಮದಲ್ಲಿ ವಿದುಷಿ ಶೀತಲ್ ಹೇಮಂತ್ ಭರತನಾಟ್ಯ ಪ್ರದರ್ಶನ ನೀಡಲಿದ್ದು, ಗುರು-ಶಿಷ್ಯ ಪರಂಪರೆಯ ಕಲಾಸಾಧನೆ ಹಾಗೂ ಭಾರತೀಯ ನೃತ್ಯ ಸಂಪ್ರದಾಯದ ವೈಭವವನ್ನು ಪ್ರಸ್ತುತಪಡಿಸಲಿದ್ದಾರೆ.



ನಟ, ನೃತ್ಯಗಾರ, ಗಾಯಕ ಹಾಗೂ ಗೀತರಚನೆಕಾರ ಕಲಾ ಆರತಿ ರತ್ನ ಡಾ. ಸಂಜಯ್ ಶಿವಪ್ರಿಯಾ ಮತ್ತು ದಿ ನ್ಯೂ ಕೇಂಬ್ರಿಡ್ಜ್ ಹೈ ಸ್ಕೂಲ್‌ನ ಮುಖ್ಯೋಪಾಧ್ಯಾಯಿನಿ ಪಾಲಿನ್ ಪ್ರಭಾಕರ್ ಮುಖ್ಯ ಅತಿಥಿಗಳಾಗಿ ಪಾಲ್ಗೊಳ್ಳಲಿದ್ದಾರೆ.

ಗುರು ವಿದುಷಿ ಪದ್ಮಾ ಹೇಮಂತ್ ನಟ್ಟುವಾಂಗದಲ್ಲಿ, ರೋಹಿತ್ ಭಟ್ ಉಪ್ಪೂರು ಗಾಯನದಲ್ಲಿ, ಪಿ. ಜನಾರ್ಧನ ರಾವ್ ಮೃದಂಗದಲ್ಲಿ, ಶಶಾಂಕ್ ಜೋಡಿದಾರ್ ಕೊಳಲಿನಲ್ಲಿ, ಹೇಮಂತ್ ಕುಮಾರ್ ಬಿ.ಆರ್. ಪಿಟೀಲಿನಲ್ಲಿ ಹಾಗೂ ಡಿ.ವಿ. ಪ್ರಸನ್ನ ಕುಮಾರ್ ರಿದಮ್ ಪ್ಯಾಡ್ಸ್‌ನಲ್ಲಿ ಸಹಕರಿಸಲಿದ್ದಾರೆ.

**ಬಾಲ್ಯದಿಂದಲೇ ಕಲಾಸಾಧನೆ:** ಐದು ವರ್ಷ ವಯಸ್ಸಿನಲ್ಲೇ ಭರತನಾಟ್ಯ ಅಭ್ಯಾಸ ಆರಂಭಿಸಿದ ಶೀತಲ್ ಹೇಮಂತ್, ತಮ್ಮ ತಾಯಿ ಹಾಗೂ ಗುರು ವಿದುಷಿ ಪದ್ಮಾ ಹೇಮಂತ್ ಅವರ ಮಾರ್ಗದರ್ಶನದಲ್ಲಿ ಕಲಾಸಾಧನೆ ನಡೆಸಿದ್ದಾರೆ. 2015ರಲ್ಲಿ ರಂಗಪ್ರವೇಶ ಮಾಡಿದ ಬಳಿಕ ದೇಶ-ವಿದೇಶಗಳ ವಿವಿಧ ವೇದಿಕೆಗಳಲ್ಲಿ ಏಕವ್ಯಕ್ತಿ ಪ್ರದರ್ಶನ ನೀಡಿರುವ ಅವರು, ನೃತ್ಯ ಬೋಧನೆಯಲ್ಲಿಯೂ ತೊಡಗಿಸಿಕೊಂಡಿದ್ದಾರೆ.

ವಿದ್ವತ್ ಪರೀಕ್ಷೆಯಲ್ಲಿ ಉನ್ನತ ಶ್ರೇಣಿ, ಬೆಂಗಳೂರು ವಿಶ್ವವಿದ್ಯಾಲಯದಿಂದ ಪ್ರದರ್ಶನ ಕಲೆಗಳಲ್ಲಿ ಸ್ನಾತಕೋತ್ತರ ಪದವಿ, ಅಲಂಕಾರ ಪ್ರಥಮ್ ಮತ್ತು ಪೂರ್ಣ ಪರೀಕ್ಷೆಗಳಲ್ಲಿ ರಾಜ್ಯಮಟ್ಟದ ಪ್ರಥಮ ಸ್ಥಾನ ಹಾಗೂ ಲಂಡನ್‌ನ ಗ್ರಿಫಿನ್ ಕಾಲೇಜಿನ ಪ್ರದರ್ಶನ ಕಲೆಗಳ ಡಿಪ್ಲೊಮಾದಲ್ಲಿ ಡಿಸ್ಟಿಂಕ್ಷನ್ ಪಡೆದಿದ್ದಾರೆ.

ಸಿಸಿಆರ್‌ಟಿ ಹಾಗೂ ಕರ್ನಾಟಕ ಸರ್ಕಾರದ ವಿದ್ಯಾರ್ಥಿವೇತನ ಪಡೆದಿರುವ ಅವರು, ದೇಶದ ವಿವಿಧ ನಗರಗಳು ಹಾಗೂ ವಿದೇಶಗಳಲ್ಲಿ ನೃತ್ಯ ಪ್ರದರ್ಶನ ನೀಡಿದ್ದಾರೆ. ಪ್ರಸ್ತುತ ಸಂಗೀತ್ ನೃತ್ಯ ಭಾರತೀ ಅಕಾಡೆಮಿಯ ಕಲಾತ್ಮಕ ಹಾಗೂ ಕಾರ್ಯನಿರ್ವಾಹಕ ನಿರ್ದೇಶಕಿಯಾಗಿ ಕಾರ್ಯನಿರ್ವಹಿಸುತ್ತಿದ್ದು, ಭರತನಾಟ್ಯ ಬೋಧನೆ ಮತ್ತು ಪ್ರದರ್ಶನ ಮುಂದುವರಿಸಿದ್ದಾರೆ.

# ಗೃಹಜ್ಯೋತಿ ಫಲಾನುಭವಿಗಳ ಪರಿಶೀಲನೆಗೆ 15 ದಿನ ಕಾಲಾವಕಾಶ

● ವಿಕ್ರಮ ವಾಹಿನಿ । ಬೆಂಗಳೂರು

ಗೃಹಜ್ಯೋತಿ ಯೋಜನೆಯಡಿ ಇನ್ನೂ ಪರಿಶೀಲನೆ ಪೂರ್ಣಗೊಳ್ಳದ ಫಲಾನುಭವಿಗಳಿಗೆ 15 ದಿನಗಳ ಹೆಚ್ಚುವರಿ ಕಾಲಾವಕಾಶ ನೀಡುವಂತೆ ಬೆಸ್ಕಾಂ ರಾಜ್ಯ ಸರ್ಕಾರಕ್ಕೆ ಮನವಿ ಮಾಡಿದೆ.

ಯೋಜನೆಯಡಿ ಅರ್ಹ ಕುಟುಂಬಗಳಿಗೆ ತಿಂಗಳಿಗೆ 200 ಯೂನಿಟ್‌ವರೆಗೆ ಉಚಿತ ವಿದ್ಯುತ್ ನೀಡಲಾಗುತ್ತಿದ್ದು, ದುರುಪಯೋಗ ತಡೆಯಲು ಬೆಸ್ಕಾಂ ಮನೆ-ಮನೆ ಪರಿಶೀಲನೆ ನಡೆಸುತ್ತಿದೆ. ಬೆಸ್ಕಾಂ ವ್ಯಾಪ್ತಿಯ 95.8 ಲಕ್ಷ ಗೃಹಬಳಕೆ ಗ್ರಾಹಕರ ಪೈಕಿ 68.9 ಲಕ್ಷ ಮಂದಿ ಯೋಜನೆಗೆ ನೋಂದಾಯಿಸಿಕೊಂಡಿದ್ದು, ಶೇ.98ರಿಂದ 99ರಷ್ಟು ಫಲಾನುಭವಿಗಳ ಪರಿಶೀಲನೆ ಪೂರ್ಣಗೊಂಡಿದೆ.

ಸುಮಾರು 5.5 ಲಕ್ಷ ಗ್ರಾಹಕರು ವೈಯಕ್ತಿಕ ವಿವರ ನೀಡಲು ನಿರಾಕರಿಸಿದ್ದು, 18 ಲಕ್ಷಕ್ಕೂ ಹೆಚ್ಚು ಮನೆಗಳು ಬೀಗ ಹಾಕಿರುವುದು ಅಥವಾ ನಿವಾಸಿಗಳನ್ನು ಸಂಪರ್ಕಿಸಲು ಸಾಧ್ಯವಾಗದಿರುವುದು ಕಂಡುಬಂದಿದೆ. ಹೀಗಾಗಿ ಈ ಗ್ರಾಹಕರ ಅರ್ಹತೆ ದೃಢಪಡಿಸಲು ಸಾಧ್ಯವಾಗಿಲ್ಲ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಸರ್ಕಾರ ಹೆಚ್ಚುವರಿ 15 ದಿನಗಳ ಕಾಲಾವಕಾಶ ನೀಡಿದರೆ, ಸಂಬಂಧಿಸಿದ ಗ್ರಾಹಕರು ಮನೆ ಪರಿಶೀಲನೆಗಾಗಿ ಕಾಯದೆ ಸಮೀಪದ ಬೆಸ್ಕಾಂ ಕಚೇರಿಗೆ ತೆರಳಿ ಅಗತ್ಯ ದಾಖಲೆ ಹಾಗೂ ವೈಯಕ್ತಿಕ ವಿವರಗಳನ್ನು ಸಲ್ಲಿಸಬೇಕಾಗುತ್ತದೆ. ನಿಗದಿತ ಅವಧಿಯೊಳಗೆ ಅರ್ಹತೆ ದೃಢಪಡಿಸದವರನ್ನು ಯೋಜನೆಯ ಫಲಾನುಭವಿಗಳ ಪಟ್ಟಿಯಿಂದ ಕೈಬಿಡುವ ಸಾಧ್ಯತೆ ಇದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

# ವಿಧಾನಸೌಧದ ಮುಂದೆ ಉರ್ದು ಹಬ್ಬಕ್ಕೆ ಕ.ರ.ವೇ ವಿರೋಧ

● ವಿಕ್ರಮ ವಾಹಿನಿ । ಬೆಂಗಳೂರು

ವಿಧಾನಸೌಧದ ಮೆಟ್ಟಿಲುಗಳ ಮೇಲೆ ಉರ್ದು ಹಬ್ಬ ಆಯೋಜಿಸಲು ಸರ್ಕಾರ ಮುಂದಾಗಿರುವುದಕ್ಕೆ ಕರ್ನಾಟಕ ರಕ್ಷಣಾ ವೇದಿಕೆ ಅಧ್ಯಕ್ಷ ಟಿ.ನಾರಾಯಣಗೌಡ ವಿರೋಧ ವ್ಯಕ್ತಪಡಿಸಿದ್ದಾರೆ. ಉರ್ದು ಸೇರಿದಂತೆ ಯಾವುದೇ ಭಾಷೆಯ ವಿರೋಧಿ ತಾವು ಅಲ್ಲ. ಆದರೆ ನಾಡಿನ ಶಕ್ತಿಸೌಧವಾದ ವಿಧಾನಸೌಧದ ಮುಂದೆ ಇಂತಹ ಕಾರ್ಯಕ್ರಮ ಆಯೋಜಿಸುವ ಅಗತ್ಯವಿಲ್ಲ.

ಭಾಷಾ ವಿಚಾರದಲ್ಲಿ ಹಿಂದಿನ ಸಂಘರ್ಷಗಳಿಂದ ಪಾಠ ಕಲಿಯಬೇಕು. 1994ರ ಉರ್ದು ವಾರ್ತೆ ವಿವಾದದಂತಹ ಘಟನೆಗಳು ಮರುಕಳಿಸಲು ಅವಕಾಶ ನೀಡಬಾರದು ಎಂದು ಅವರು ಆಗ್ರಹಿಸಿದರು. ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಮಧ್ಯಪ್ರವೇಶಿಸಿ ಉರ್ದು ಹಬ್ಬ ಆಯೋಜಿಸುವ ನಿರ್ಧಾರ ಕೈಬಿಡಬೇಕು. ಇಲ್ಲವಾದರೆ ಕನ್ನಡಿಗರ ಪರವಾಗಿ ಹೋರಾಟ ನಡೆಸುವುದಾಗಿ ನಾರಾಯಣಗೌಡ ಎಚ್ಚರಿಸಿದರು.

Vikrama Vahini Kannada Daily, #204, Forest Layout, Jnanabharathi, Bangalore-560095
PRGI NO: KARKAN/2018/78481 vikramavahini@gmail.com
93535 91145
Printed by B.N. Murali Prasad, Published by Swarna Latha B.N., and Printed at Swarna Graphics, Forest Layout, Jnanabharathi, Bangalore -560059 and Published at Bangalore, Editor: B.N. Murali Prasad., Volume:9, Issue : 178,